₹ 4 | ಪುಟ: 4 | ಸಂಪುಟ: 4 | ಸಂಚಿಕೆ 66 | newsbelagavi@gmail.com | 9900332089 | 9900332089



# ಬೆಳಗಾವಿ ವರದಿ

ಪ್ರಧಾನ ಸಂಪಾದಕರು: ಸತೀಶ್.ಬಿ.ಜಿ
BELAGAVI VARADI KANNADA DAILY
ಕನ್ನಡ ದಿನಪತ್ರಿಕೆ
Volume : 4 | Issue: 66 | Wednesday, 26, APRIL, 2023 | RNI: KARKAN/2020/79084 | Regn,No:G-2/PMG/KA/NK/BM/139/2021-23 | 24

# ಭ್ರಷ್ಟಾಚಾರ ಕಾಂಗ್ರೆಸ್ ನ ಅವಿಭಾಜ್ಯ ಅಂಗ: ಬೊಮ್ಮಾಯಿ



ಹುಬ್ಬಳ್ಳಿ: 'ಭ್ರಷ್ಟಾಚಾರ ಕಾಂಗ್ರೆಸ್ ನ ಅವಿಭಾಜ್ಯ ಅಂಗ. ಅವರು ನನ್ನ ಮೇಲೆ ಭ್ರಷ್ಟಾಚಾರದ ಆರೋಪ ಮಾಡುವುದು ಹಾಸ್ಯಾಸ್ಪದ' ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಡಿನಿಸನ್ಸ್ ಹೋಟೆಲ್ ನಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರೊಂದಿಗೆ ಮಂಗಳವಾರ ಮಾತುಕತೆ ನಡೆಸಿದ ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದರು.

ಲಿಂಗಾಯತ ಮುಖ್ಯಮಂತ್ರಿ ಭಷ್ಟ ಎಂದು ಹೇಳಿ ಸಿದ್ದರಾಮಯ್ಯ ಪೇಚಿಗೆ ಸಿಲುಕಿದರು. ಅದನ್ನು ಸರಿದೂಗಿಸುವ ಯತ್ನ ಸಹ ಮಾಡಿದರು. ನನ್ನ ಮೇಲೆ ಹೊರಿಸಿದ ಭ್ರಷ್ಟಾಚಾರದ ಆರೋಪವನ್ನು ಸಾಬೀತುಪಡಿಸಲಿ. ಸುಮ್ಮನೆ ಆರೋಪ ಮಾಡುವುದಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಭ್ರಷ್ಟಾಚಾರ ಅಂದರೆ ಕಾಂಗ್ರೆಸ್. ಕಾಂಗ್ರೆಸ್ ನಾಯಕರ ವಿರುದ್ಧ ಹಲವಾರು ಭ್ರಷ್ಟಾಚಾರ ಪ್ರಕರಣಗಳಿವೆ. ಈಗಾಗಲೇ ಇಂತಹ ಪ್ರಕರಣಗಳನ್ನು ಲೋಕಾಯುಕ್ತಕ್ಕೆ ನೀಡಲಾಗಿದ್ದು, ಮೊದಲು ಅದಕ್ಕೆ ಉತ್ತರಿಸಲಿ. ಕಾಂಗ್ರೆಸ್ ನ ಹಲವು ನಾಯಕರು ಜೈಲಿಗೆ ಹೋಗಿದ್ದಾರೆ. ಹೀಗಿರುವಾಗ ನನ್ನ ಮೇಲೆ ಆರೋಪ ಮಾಡುವುದು ಸರಿಯಲ್ಲ' ಎಂದರು.

'ಬಿಜೆಪಿ ಪ್ರಚಾರ ಸಭೆಗಳಿಗೆ ಅಭೂತಪೂರ್ವ ಬೆಂಬಲ ವ್ಯಕ್ತವಾಗುತ್ತಿದೆ. ರಾಜ್ಯದಲ್ಲಿ ಬಿಜೆಪಿ ಪರ ಅಲೆ ಇದೆ ಎಂಬುದಕ್ಕೆ ಇದೇ ಸಾಕ್ಷಿಯಾಗಿದೆ. ರಾಜ್ಯ ಬಿಜೆಪಿ ಮಯವಾಗುವುದರಲ್ಲಿ ಅನುಮಾನವಿಲ್ಲ' ಎಂದು ವಿಶ್ವಾಸ ವ್ಯಕ್ತಪಡಿಸಿದರು.


ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ರಾಜ್ಯದಲ್ಲಿ ಬಿಜೆಪಿ ಗೆಲ್ಲಿಸಲು ಸೂಕ್ತ ಸಲಹೆ, ಸೂಚನೆಗಳನ್ನು ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಹಾಗೂ ಕೇಂದ್ರ ಸರ್ಕಾರದ ಎಲ್ಲ ಕಾರ್ಯಕ್ರಮಗಳ ಪ್ರಚಾರ ಮಾಡಿ, ಜನರ ಮನವೊಲಿಸಲು ತಿಳಿಸಿದ್ದಾರೆ' ಎಂದು ಹೇಳಿದರು.

ಹುಬ್ಬಳ್ಳಿ– ಧಾರವಾಡ ಪಶ್ಚಿಮ ಕ್ಷೇತ್ರದ ಅಭ್ಯರ್ಥಿ ಅರವಿಂದ ಬೆಲ್ಲದ ಮಾತನಾಡಿ, 'ಒಂಬತ್ತು ತಿಂಗಳು ವೀರೇಂದ್ರ ಪಾಟೀಲ ಅವರಿಗೆ ಅಧಿಕಾರ ನೀಡಿ, ನಂತರ ಮನೆಗೆ ಕಳುಹಿಸಿದ್ದು ಕಾಂಗ್ರೆಸ್. ಪಕ್ಷದ ನಾಯಕರ ಹಕೀಕತ್ತು ಏನೆಂದು ಜನರಿಗೆ ಗೊತ್ತಿದೆ. ಅವರ ಹೇಳಿಕೆಯನ್ನು ಯಾರೂ ಗಂಭಿರವಾಗಿ ತೆಗೆದುಕೊಳ್ಳುವುದಿಲ್ಲ' ಎಂದು ಹೇಳಿದರು.

ಜಗದೀಶ ಶೆಟ್ಟರ್ ವಿಚಾರದಲ್ಲಿ ಲಿಂಗಾಯತ ಫ್ಯಾಕ್ಟರ್ ಕೆಲಸ ಮಾಡುವುದಿಲ್ಲ. ಬಿಜೆಪಿ ಅಭ್ಯರ್ಥಿ ಮಹೇಶ ಟೆಂಗಿನಕಾಯಿ ಅವರು 30,000 ಕ್ಕೂ ಹೆಚ್ಚು ಮತಗಳಿಂದ ಆರಿಸಿಬರುತ್ತಾರೆ' ಎಂದರು.

ಬೆಳಿಗ್ಗೆಯಿಂದಲೇ ಬಿಜೆಪಿ ಮುಖಂಡರ ಸಭೆ ನಡೆಸಿದ ಕೇಂದ್ರ ಗೃಹಸಚಿವ ಅಮಿತ್ ಶಾ ಅವರು, ಪ್ರಧಾನಿ ಮೋದಿ ಪಾಲ್ಗೊಳ್ಳಲ್ಲಿರುವ ಕಾರ್ಯಕ್ರಮಗಳ ಸಿದ್ಧತೆ ಬಗ್ಗೆ ಹಾಗೂ ಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳನ್ನು ಗೆಲ್ಲಿಸುವ ಬಗ್ಗೆ ಸೂಚನೆ ನೀಡಿದರು.

## ಜಗದೀಶ್ ಶೆಟ್ಟರ್, ಲಕ್ಷ್ಮಣ ಸವದಿ ವಿರುದ್ಧ ಅಮಿತ್ ಶಾ ವಾಗ್ದಾಳಿ



ಬಾಗಲಕೋಟೆ: ಕಾಂಗ್ರೆಸ್ ಪಕ್ಷ ಪದೇ ಪದೇ ಲಿಂಗಾಯಿತರಿಗೆ ಅಪಮಾನ ಮಾಡುತ್ತಲೇ ಬರುತ್ತಿದೆ. ನಿಜಲಿಂಗಪ್ಪ, ವಿರೇಂದ್ರ ಪಾಟೀಲರಿಗೂ ಅವಮಾನ ಮಾಡಿತ್ತು. ಯಡಿಯೂರಪ್ಪನವರನ್ನು ಸಿಎಂ ಕುರ್ಚಿಯಿಂದ ಇಳಿಸಲು ಹಿನ್ನಾರ ನಡೆಸಿತ್ತು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ವಾಗ್ದಾಳಿ ನಡೆಸಿದ್ದಾರೆ.

ಬಾಗಲಕೋಟೆ ಜಿಲ್ಲೆಯ ತೇರದಾಳ, ವಿಜಯಪುರ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ಚುನಾವಣಾ ಪ್ರಚಾರ ನಡೆಸಿದ ಅಮಿತ್ ಶಾ, ಕಾಂಗ್ರೆಸ್ ವಿರುದ್ಧ ಮಾತ್ರವಲ್ಲ ಮಾಜಿ ಸಿಎಂ ಜಗದೀಶ್ ಶೆಟ್ಟರ್, ಲಕ್ಷ್ಮಣ ಸವದಿ ವಿರುದ್ಧ ವಾಗ್ದಾಳಿ ನಡೆಸಿದರು.

ಆ ಇಬ್ಬರು ನಾಯಕರಿಂದ ಕಾಂಗ್ರೆಸ್ ಗೆ ಯಾವುದೇ ಪ್ರಯೋಜನವಿಲ್ಲ. ಲಿಂಗಾಯಿತ–ರಿಗೆ ಅವಮಾನ ಮಾಡಿದ ಪಕ್ಷಕ್ಕೆ ಅವರು ಹೋಗಿದ್ದಾರೆ. ಬಿಜೆಪಿ ಕಾರ್ಯಕರ್ತರು ಅವರನ್ನು ಕ್ಷಮಿಸಬಾರದು, ಇಬ್ಬರನ್ನು ಸೋಲಿಸಲಬೇಕು ಎಂದು ಹೇಳುವ ಮೂಲಕ ಜಗದೀಶ್ ಶೆಟ್ಟರ್ ಹಾಗೂ ಲಕ್ಷ್ಮಣ ಸವದಿ ವಿರುದ್ಧ ಹರಿಹಾಯ್ದರು.

ಲಿಂಗಾಯಿತ ಮುಖ್ಯಮಂತ್ರಿಗಳನ್ನು ಅವಮಾನ ಮಾಡಿದ್ದು ಕಾಂಗ್ರೆಸ್ ಪಕ್ಷ. ಬಿಜೆಪಿ ಲಿಂಗಾಯಿತರನ್ನು ಅತ್ಯಂತ ಗೌರವಯುತವಾಗಿ ಕಂಡಿದೆ. ಯಡಿಯೂರಪ್ಪನವರನ್ನು ಮುಖ್ಯಮಂತ್ರಿಯನ್ನಾಗಿಸಿದ್ದು ಬಿಜೆಪಿ. ಜೆಡಿ–ಎಸ್ ನವರು ಕೂಡ ಯಡಿಯೂರಪ್ಪನವರಿಗೆ ಮೋಸ ಮಾಡಿದರು ಎಂದು ಕಿಡಿಕಾರಿದ್ದಾರೆ.

ಉತ್ತರ ಕರ್ನಾಟಕ ಭಾಗಕ್ಕೆ ಯಾವಾಗಲೂ ಅನ್ಯಾಯ ಆಗಿದ್ದರೆ ಅದು ಕಾಂಗ್ರೆಸ್ ನಿಂದ. ಬಿಜೆಪಿ ಸರ್ಕಾರ ಬಂದ ಮೇಲೆ ಕಿತ್ತೂರು ಕರ್ನಾಟಕ ಮಾದಿ ಅಭಿವೃದ್ಧಿ ಮಾಡಲಾಗಿದೆ. ಉತ್ತರ ಕರ್ನಾಟಕ ಭಾಗದ ಅಭಿವೃದ್ಧಿ ಮಾಡಿದ್ದು ಬಿಜೆಪಿ ಸರ್ಕಾರ ಎಂದು ಹೇಳಿದರು.

## ಪೂಂಚ್ ದಾಳಿ: ಸೇನಾ ವಾಹನದ ಮೇಲೆ 50 ಬುಲೆಟ್ ಗುರುತು ಪತ್ತೆ



ಶ್ರೀನಗರ: ಪೂಂಚ್ ನಲ್ಲಿ ಕಳೆದ ಮಂಗಳವಾರ ನಡೆದ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ 14 ಮಂದಿ ಕಾರ್ಯಕರ್ತರೂ ಸೇರಿದಂತೆ ಒಟ್ಟು 50 ಮಂದಿಯನ್ನು ಈ ವರೆಗೂ ಬಂಧಿಸಲಾಗಿದೆ. ದಾಳಿಯಲ್ಲಿ ಭಾಗಿಯಾಗಿದ್ದ ಭಯೋತ್ಪಾದಕರ ಹೆಡೆಮುರಿಕಟ್ಟಲು ಭಟ ಧುರಿಯನ್–ತೋಟ ಗಲಿ ಮತ್ತು ನೆರೆಯ ಪ್ರದೇಶಗಳಲ್ಲಿ ಬೃಹತ್ ಶೋಧಕರ್ಯಾಚರಣೆ ನಡೆದಿದೆ.

ವಿಶೇಷ ಪಡೆಗಳು ಮತ್ತು ರಾಷ್ಟ್ರೀಯ ಭದ್ರತಾ ಸಿಬ್ಬಂದಿ ಕೂಡ ದಟ್ಟ ಅರಣ್ಯ ಪ್ರದೇಶಗಳಲ್ಲಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾರೆ ಎಂದು ಅಧಿಕೃತ ಮೂಲಗಳು ತಿಳಿಸಿವೆ, ಡ್ರೋನ್‌ಗಳು, ಸ್ನಿಫರ್ ಡಾಗ್‌ಗಳು ಮತ್ತು ಮೆಟಲ್ ಡಿಟೆಕ್ಟರ್‌ಗಳನ್ನು ಈ ಕಾರ್ಯಾಚರಣೆಯಲ್ಲಿ ಬಳಸಲಾಗುತ್ತಿದೆ.

ದಾಳಿಗೆ ಸಂಬಂಧಿಸಿದಂತೆ 14 (ಓವರ್ ಗ್ರೌಂಡ್ ವರ್ಕರ್ ಗಳು) ಸೇರಿದಂತೆ ಸುಮಾರು 50 ಜನರನ್ನು ಬಂಧಿಸಲಾಗಿದೆ ಮತ್ತು ಅವರಲ್ಲಿ ಕೆಲವರನ್ನು ವಿಚಾರಣೆಯ ನಂತರ ಬಿಡುಗಡೆ ಮಾಡಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ. 7–8 ಭಯೋತ್ಪಾದಕರ ಎರಡು ಗುಂಪು ಈ ದಾಳಿಯನ್ನು ರೂಪಿಸಿದೆ ಎಂದು ನಂಬಲಾಗಿದೆ ಎಂದು ಮೂಲಗಳು ತಿಳಿಸಿವೆ. ತನಿಖೆಯ ಪ್ರಕಾರ, ಭಯೋತ್ಪಾದಕರು ವಾಹನದ ಮೇಲೆ ದಾಳಿ ಮಾಡುವ ಮೊದಲು ಈ ರಸ್ತೆಯ ಕಲ್ವರ್ಟ್‌ನಲ್ಲಿ ಅಡಗಿಕೊಂಡಿದ್ದರು ಎಂದು ವರದಿಯಾಗಿದೆ. ದಾಳಿಗೆ ಗುರಿಯಾದ ವಾಹನದಲ್ಲಿ 50 ಕ್ಕೂ ಹೆಚ್ಚು ಗುಂಡಿನ ಗುರುತುಗಳು ಪತ್ತೆಯಾಗಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶೋಧ ಕಾರ್ಯಾಚರಣೆಯ ಸಮಯದಲ್ಲಿ, ಈ ಪ್ರದೇಶದಲ್ಲಿ ಕೆಲವು ನೈಸರ್ಗಿಕ ಗುಹೆಗಳಲ್ಲಿ ಅಡಗುತಾಣಗಳನ್ನು ಸೇನಾ ಪಡೆಗಳು ಪತ್ತೆ ಮಾಡಿವೆ, ಇದನ್ನು ಈ ಹಿಂದೆ ಭಯೋತ್ಪಾದಕರು ಬಳಸಿರಬಹುದು ಎಂದು ವಿಶ್ಲೇಷಿಸಲಾಗುತ್ತಿದೆ.

## ಅದಾನಿ, ಚೀನಾ ಬಗ್ಗೆ 'ಮನ್ ಕಿ ಬಾತ್': ಮೋದಿ 100ನೇ 'ಮನ್ ಕಿ ಬಾತ್'ಗೆ ಕಾಂಗ್ರೆಸ್ ಟಾಂಗ್



ನವದೆಹಲಿ: ಪ್ರಧಾನಿ ನರೇಂದ್ರ ಮೋದಿ ಅವರ ಮಾಸಿಕ ರೇಡಿಯೋ ಭಾಷಣ 'ಮನ್ ಕಿ ಬಾತ್' ನ 100ನೇ ಸಂಚಿಕೆಗಾಗಿ ಅವರ ಸಾರ್ವಜನಿಕ ಸಂಪರ್ಕ ಯಂತ್ರವು "ಹೆಚ್ಚುವರಿ ಕೆಲಸ ಮಾಡುತ್ತಿದೆ". ಆದರೆ ಅದಾನಿ ಮತ್ತು ಚೀನಾದಂತಹ ನಿರ್ಣಾಯಕ ವಿಷಯಗಳ ಬಗ್ಗೆ ಮೌನವಾಗಿದೆ ಎಂದು ಕಾಂಗ್ರೆಸ್ ಮಂಗಳವಾರ ಕೇಂದ್ರದ ವಿರುದ್ಧ ವಾಗ್ದಾಳಿ ನಡೆಸಿದೆ.

ಮನ್ ಕಿ ಬಾತ್'ನ 100ನೇ ಆವೃತ್ತಿಯು ಮುಂದಿನ ಭಾನುವಾರ ಪ್ರಸಾರವಾಗಲು ಸಿದ್ಧವಾಗಿದೆ. ಮಾಸಿಕ ರೇಡಿಯೊ ಭಾಷಣದ ಈ ಯಶಸ್ಸಿಗೆ ಸಾರ್ವಜನಿಕ ಬೆಂಬಲ ಕಾರಣ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ. ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್–ರೋಹ್ಟಕ್‌ನ ಸಮೀಕ್ಷೆಯ ಪ್ರಕಾರ, ಸುಮಾರು 23 ಕೋಟಿ ಜನರು ಪ್ರತಿ ತಿಂಗಳ ಕೊನೆಯ ಭಾನುವಾರದಂದು 'ಮನ್ ಕಿ ಬಾತ್' ಕಾರ್ಯಕ್ರಮ ಆಲಿಸುತ್ತಾರೆ ಮತ್ತು 65 ಪ್ರತಿಶತ ಕೇಳುಗರು ಹಿಂದಿಯಲ್ಲಿ ಭಾಷಣವನ್ನು ಕೇಳಲು ಬಯಸುತ್ತಾರೆ ಎಂದು ಹೇಳಿದೆ.

## ಮುಸ್ಲಿಂ ಮೀಸಲಾತಿ ರದ್ದು: ಮೇ 9 ರವರೆಗೆ ಜಾರಿ ಬೇಡ: ಸುಪ್ರೀಂ ಆದೇಶ



ನವದೆಹಲಿ: ಕರ್ನಾಟಕದಲ್ಲಿ ಮುಸ್ಲಿಮರ ಮೀಸಲಾತಿ ರದ್ದುಗೊಳಿಸಿರುವ ಆದೇಶವನ್ನು ಮೇ 9 ರ ವರೆಗೆ ಜಾರಿ ಗೊಳಿಸದಂತೆ ಕರ್ನಾಟಕ ಸರ್ಕಾರಕ್ಕೆ ಸುಪ್ರೀಂ ಕೋರ್ಟ್ ಮಂಗಳವಾರ ಆದೇಶಿಸಿದೆ.

ಮೀಸಲಾತಿ ರದ್ದುಗೊಳಿಸಿರುವುದನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ ಮೇಲ್ಮನವಿಗಳ ವಿಚಾರಣೆಯನ್ನು ಏಪ್ರಿಲ್ 13ರಂದು ನಡೆಸಿದ್ದ ಸುಪ್ರೀಂ ಕೋರ್ಟ, ಮುಸ್ಲಿಮರ ಮೀಸಲಾತಿ ರದ್ದುಗೊಳಿಸಿರುವ ಕರ್ನಾಟಕ ರಾಜ್ಯ ಸರ್ಕಾರದ ನಿರ್ಧಾರವು ದೋಷ ಪೂರಿತ, ಅಸ್ಥಿರ ಹಾಗೂ ಪ್ರಮಾದದಿಂದ ಕೂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ ಎಂದು ಹೇಳಿತ್ತು.

ಮಂಗಳವಾರ ವಿಚಾರಣೆ ಮುಂದುವರಿಸಿದ ಸುಪ್ರೀಂ ಕೋರ್ಟ್, ಮೇ 9ರಕ್ಕೆ ವಿಚಾರಣೆ ಮುಂದೂಡಿತು. ಅಲ್ಲಿಯವರೆಗೆ ಮೀಸಲಾತಿ ಜಾರಿಗೆ ಸುಪ್ರೀಂ ಕೋರ್ಟ್ ತಡೆ ನೀಡಿದೆ.

## ವಿಧ್ಯುಕ್ತವಾಗಿ ತೆರೆದ ಕೇದಾರನಾಥ ದೇಗುಲದ ದ್ವಾರ



ಡೆಹ್ರಾಡೂನ್: ಚಾರ್ ಧಾಮ್ ಗಳಲ್ಲಿ ಒಂದಾದ ಐದನೇ ಜ್ಯೋತಿರ್ಲಿಂಗದ ಕ್ಷೇತ್ರ ಕೇದಾರನಾಥ ದೇಗುಲದ ದ್ವಾರವನ್ನು ಇಂದು ವಿಧ್ಯುಕ್ತವಾಗಿ ತೆರೆಯಲಾಗಿದೆ.

ಬೆಳಗ್ಗೆ 6.20ಕ್ಕೆ ಸಕಲ ಧಾರ್ಮಿಕ ವಿಧಿವಿಧಾನಗಳೊಂದಿಗೆ ದೇಗುಲದ ಬಾಗಿಲು ತೆರೆಯಲಾಯಿತು. ಇಡೀ ದೇಗುಲವನ್ನು ಸುಮಾರು 35 ಕ್ವಿಂಟಾಲ್ ಗೂ ಅಧಿಕ ಹೂಗಳಿಂದ ಅಲಂಕರಿಸಲಾಗಿದ್ದು 7 ಸಾವಿರಕ್ಕೂ ಹೆಚ್ಚು ಭಕ್ತರು ಅವ್ಯಾಹತವಾಗಿ ಸುರಿಯುತ್ತಿರುವ ಹಿಮದ ಮಧ್ಯೆಯೂ ದೇಗುಲ ತಲುಪಿದ್ದಾರೆ.

ಏ.29ರವರೆಗೂ ಹಿಮಪಾತವಾಗುವ ಹಿನ್ನೆಲೆಯಲ್ಲಿ ಏ.30ರವರೆಗೆ ಉತ್ತರಾಖಂಡ ಸರಕಾರ ಇಲ್ಲಿಗೆ ಆಗಮಿಸುವ ಭಕ್ತರ ಹೊಸ ನೋಂದಣಿಯನ್ನು ಸ್ಥಗಿತಗೊಳಿಸಿದೆ. ಹವಾಮಾನದ ಸ್ಥಿತಿಗತಿಗಳ ಸಂಪೂರ್ಣ ಮಾಹಿತಿ ಪಡೆದ ನಂತರವೇ ಭಕ್ತರು ಆಗಮಿಸುವಂತೆ ಸರಕಾರ ಕೋರಿದೆ.

ದೇಗುಲದ ಬಾಗಿಲು ತೆರೆಯುವ ಹಿನ್ನೆಲೆಯಲ್ಲಿ ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಕೇದಾರನಾಥಕ್ಕೆ ಸೋಮವಾರವೇ ಭೇಟಿ ನೀಡಿ ಪರಿಶೀಲಿಸಿದರು.

## ಜನರ ಹಿತಕಾಗಿ ಕಾಂಗ್ರೆಸ್ ಅಧಿಕಾರಕ್ಕೆ ತನ್ನಿ: ಮಾಜಿ ಸಿಎಂ ಸಿದ್ದರಾಮಯ್ಯ



ಹಾರೂಗೇರಿ: ಪ್ರಧಾನಿ ಮೋದಿ ಅವರು ಅಚ್ಚೆ ದಿನ್ ಬರುತ್ತದೆ ಎಂದು ಹೇಳುತ್ತಾ ಅಧಿಕಾರಕ್ಕೆ ಬಂದು 9 ವರ್ಷಗಳು ಕಳೆದರೂ ಇನ್ನು ದೇಶ ಹಾಗೂ ರಾಜ್ಯದ ಜನರಿಗೆ ಅಚ್ಚೆ ದಿನ ಸಿಕ್ಕಿಲ್ಲ. ರಾಜ್ಯದಲ್ಲೂ ಭ್ರಷ್ಟಾಚಾರ ತುಂಬಿ ಆಡಳಿತ ನಡೆಸಿ, ರಾಜ್ಯಕ್ಕೆ ಕೆಟ್ಟು ಹೆಸರು ತಂದಿರುವ ಬಿಜೆಪಿಗೆ ತಕ್ಕ ಪಾಠ ಕಲಿಸಲು ಮತದಾರರು ಮುಂದಾಗಬೇಕು ಎಂದು ಮಾಜಿ ಸಿಎಂ ಸಿದ್ದರಾಮಯ್ಯ ಹೇಳಿದರು.

ನಗರದ ಗಸ್ತಿ ಕಾಲೇಜು ಮೈದಾನದಲ್ಲಿ ಹಮ್ಮಿಕೊಂಡಿದ್ದ ಕುಡಚಿ ಮತಕ್ಷೇತ್ರದ ಕಾಂಗ್ರೆಸ್ ಪಕ್ಷದ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿ, ಪಿ.ರಾಜೀವ್ ಲಂಬಾಣಿ ಸಮುದಾಯದವರು. ಆದರೆ ಬಿಜೆಪಿ ಸರ್ಕಾರದಲ್ಲಿದ್ದ ಪಿ. ರಾಜೀವ್ ಅವರು ಲಂಬಾಣಿ ಸಮುದಾಯಕ್ಕೆ ಹಾಗೂ ಕುಡಚಿ ಮತಕ್ಷೇತ್ರಕ್ಕೆ ಏನು ಕೊಡುಗೆ ನೀಡಿದ್ದಾರೆ ಎಂದು ಪ್ರಶ್ನಿಸಿದ ಅವರು, ಪಿ. ರಾಜೀವ್ ದೊಡ್ಡ ಸುಳ್ಳುಗಾರ. ಅವನು ಸತ್ಯ ಹೇಳುವುದಕ್ಕಿಂತ ಸುಳ್ಳುಗಳನ್ನೆ ಜಾಸ್ತಿ ಹೇಳುತ್ತಾನೆ. ಅದ್ದ–ರಿಂದ ಕುಡಚಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಮಹೇಂದ್ರ ತಮ್ಮಣ್ಣವರ್ ಅವರನ್ನು ಗೆಲ್ಲಿಸಿ, ಪಿ. ರಾಜೀವ್ ಅವರನ್ನು ಭಾರೀ ಅಂತರದಿಂದ ಸೋಲಿಸಬೇಕೆಂದು ಎಂದು ಹೇಳಿದರು.

40 % ಕಮಿಷನ್ ಪಡೆಯುವುದೇ ಬಿಜೆಪಿ ಕಾಯಕ: ರಾಜ್ಯದಲ್ಲಿ 40 % ಕಮಿಷನ್ ಪಡೆಯುವುದೇ ಬಿಜೆಪಿಯವರ ಕಾಯಕವಾಗಿದೆ. ಬೆಳಗಾವಿಯ ಗುತ್ತಿಗೆದಾರ ಸಂತೋಷ ಪಾಟೀಲ್ ಸಚಿವ ಕೆ.ಎಸ್. ಈಶ್ವರಪ್ಪ ಅವರ ಕಮಿಷನ್ ಕಾಟದಿಂದ ಆತ್ಮಹತ್ಯೆ ಮಾಡಿಕೊಂಡರು. ಈಶ್ವರಪ್ಪ ಅವರ ಹೆಸರಿನಲ್ಲಿ ಸಂತೋಷ ಪಾಟೀಲ್ ಡೆತ್ ನೋಟ್ ಬರೆದು ಸತ್ತಿದ್ದಾರೆ. ಆದರೆ ಸಿಎಂ ಬೊಮ್ಮಾಯಿ ವಿಧಾನಸಭೆಯಲ್ಲಿ ನಿಮ್ಮ ಕಡೆ ಏನು ದಾಖಲೆ ಇದೆ ಎಂದು ಕೇಳುತ್ತಾರೆ. ಇಂತಹ ಭ್ರಷ್ಟ ಬಿಜೆಪಿಯವರನ್ನು ಮನೆಗೆ ಕಳುಹಿಸಬೇಕೆಂದು ತಿಳಿಸಿದರು.

ಕಾಂಗ್ರೆಸ್ ಅಧಿಕಾರಿಕ್ಕೆ ಬಂದರೆ ನಾಲ್ಕು ಯೋಜನೆ ಜಾರಿ: ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಪ್ರತಿ ಮನೆಗೆ ಪ್ರತಿ ತಿಂಗಳು 200 ಯೂನಿಟ್ ಉಚಿತ ವಿದ್ಯುತ್ ಗೃಹಜ್ಯೋತಿ ಯೋಜನೆ, ಅನ್ನಭ್ಯಾಗ್ಯ ಯೋಜನೆಯಡಿ 10 ಕೆಜಿ ಅಕ್ಕಿ, ಗೃಹಲಕ್ಷ್ಮಿ ಕುಟುಂಬದ ಪ್ರತಿ ಮಹಿಳೆಗೆ ಪ್ರತಿ ತಿಂಗಳು ಎರಡು ಸಾವಿರ ರೂ.,ಪದವೀಧರರಿಗೆ ಪ್ರತಿ ತಿಂಗಳು 3000 ನಿರುದ್ಯೋಗ ಭತ್ಯೆಗಳನ್ನು ಉಚಿತವಾಗಿ ನೀಡಲಾಗುವುದು. ಸದೃಢ ಹಾಗೂ ಸುರಕ್ಷಿತ ಕುಟುಂಬಕ್ಕಾಗಿ ಈ ಬಾರಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ಅಧಿಕಾರಕ್ಕೆ ತರುವಂತೆ ವಿನಂತಿಸಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ ಮಾತನಾಡಿ, ಬಿಜೆಪಿ ಸರ್ಕಾರ ಭ್ರಷ್ಟಾಚಾರ, ಭೂ ಹಗರಣ, 40 %ಕಮೀಷನ್, ಕುರ್ಚಿಗಾಗಿ ಕಚ್ಚಾಟ ನಡೆಸಿತೇ ಹೊರತು, ಅಭಿವೃದ್ಧಿ ಕುಂಠಿತಗೊಳಿಸಿತು. ಈ ನಿಟ್ಟಿನಲ್ಲಿ ಬಿಜೆಪಿಯನ್ನು ಮತ್ತೆ ಅಧಿಕಾರಕ್ಕೆ ತರಬೇಕೇ ಎಂದು ಪ್ರಶ್ನಿಸಿದ ಅವರು, ಕೇಂದ್ರ, ರಾಜ್ಯ ಬಿಜೆಪಿ ಸರ್ಕಾರದ ಜನ ವಿರೋಧಿ ನೀತಿಗಳಿಂದ ಜನ ಬೇಸತ್ತಿದ್ದು, ಸಿಎಂ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರವನ್ನು ರಾಜ್ಯದಿಂದ ಕಿತ್ತೆಸೆಯಬೇಕು. ಕುಡಚಿ ಮತಕ್ಷೇತ್ರದಲ್ಲಿ ಸದಾ ಸಾಮಾಜಿಕ ಸೇವೆ ಸಲ್ಲಿಸುತ್ತಿರುವ ಮಹೇಂದ್ರ ತಮ್ಮಣ್ಣವರ್ ಅವರನ್ನು ಭಾರೀ ಅಂತರದಿಂದ ಗೆಲ್ಲಿಸಬೇಕೆಂದು ಕರೆ ನೀಡಿದರು.

ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಮಾತನಾಡಿ, ಕಳೆದು ಎರಡು ದಿನಗಳಿಂದ ನಾನು ಬೆಳಗಾವಿ ಜಿಲ್ಲೆಯಲ್ಲಿ ಸಿದ್ದರಾಮಯ್ಯನವರ ಜತೆ ಚುನಾವಣಾ ಪ್ರಚಾರ ಸಭೆಯಲ್ಲಿ ಪಾಲ್ಗೊಳ್ಳುತ್ತಿದ್ದು, ಅಪಾರ ಸಂಖ್ಯೆಯ ಜನ ಸೇರುತ್ತಿದ್ದಾರೆ. ಈ ಅಪಾರ ಸಂಖ್ಯೆಯ ಜನ ಸಾಗರ ನೋಡಿದರೆ ಜಿಲ್ಲೆಯ 15 ರಿಂದ 16 ಕ್ಷೇತ್ರ ಸೇರಿ ಕುಡಚಿ ಮತಕ್ಷೇತ್ರದಲ್ಲಿ ಮಹೇಂದ್ರ ತಮ್ಮಣ್ಣವರ ಗೆಲುವು ಸಾಧಿಸುವುದು ನಿಚ್ಚಿತ ಎಂದು ಹೇಳಿದರು.

## ದೆಹಲಿಯಲ್ಲಿ ಕಟ್ಟಡ ಕಾರ್ಮಿಕರಿಗೆ ಸೌಲಭ್ಯ: ಕೇಜ್ರಿವಾಲ್ ಘೋಷಣೆ



ನವದೆಹಲಿ: ರಾಷ್ಟ್ರ ರಾಜಧಾನಿಯಲ್ಲಿ ವಾಸಿಸುವ ಕಟ್ಟಡ ಕಾರ್ಮಿಕರಿಗೆ ಮನೆ ಮತ್ತು ಹಾಸ್ಟೆಲ್‌ಗಳ ವ್ಯವಸ್ಥೆ ಮಾಡುವಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಕಾರ್ಮಿಕ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ನಗರದಲ್ಲಿ 13 ಲಕ್ಷ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಉಚಿತ ಬಸ್ ಪ್ರಯಾಣ, ಗ್ರೂಪ್ ಜೀವ ವಿಮೆ, ಅವರ ಮಕ್ಕಳಿಗೆ ಉಚಿತ ತರಬೇತಿ ಮತ್ತು ಟ್ರಾನ್ಸಿಟ್ ಹಾಸ್ಟೆಲ್‌ಗಳ ಸೌಲಭ್ಯ ಕಲ್ಪಿಸುವಂತೆ ದೆಹಲಿ ಸಿಎಂ ಆದ–ೇಶಿಸಿದ್ದಾರೆ.

ಈ ಯೋಜನೆಗಳ ಅನುಷ್ಠಾನದ ವೆಚ್ಚವನ್ನು ಶೀಘ್ರವಾಗಿ ನಿರ್ಧರಿಸಲು ದೆಹಲಿ ಸಾರಿಗೆ ನಿಗಮದ ಅಧಿಕಾ–ರಿಗಳು ಮತ್ತು ಗ್ರೂಪ್ ಜೀವ ವಿಮಾ ಕಂಪನಿಗಳನ್ನು ಭೇಟಿ ಮಾಡುವಂತೆ ಕೇಜ್ರಿವಾಲ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

ಪ್ರತಿಯೊಬ್ಬ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಎಲ್ಲಾ ಕಲ್ಯಾಣ ಯೋಜನೆಗಳ ಪ್ರಯೋಜನವನ್ನು ವಿಸ್ತ–ರಿಸಲು ಕ್ರಿಯಾ ಯೋಜನೆಯನ್ನು ರೂಪಿಸುವಂತೆ ದೆಹಲಿ ಸಿಎಂ ಕಾರ್ಮಿಕ ಇಲಾಖೆಗೆ ಸೂಚನೆ ನೀಡಿದ್ದಾರೆ.

ಪ್ಲಂಬರ್‌ಗಳು, ಎಲೆಕ್ಟ್ರಿಷಿಯನ್‌ಗಳು, ಕಾರ್ಪೆಂಟರ್‌ಗಳು ಮತ್ತು ಪೇಂಟ–ರ್‌ಗಳಿಗೆ ಟೂಲ್‌ಕಿಟ್‌ಗಳು ಹಾಗೂ ಕೌಶಲ್ಯ ತರಬೇತಿಯನ್ನು ದೊಡ್ಡ ಪ್ರಮಾಣದಲ್ಲಿ ನೀಡಲಾಗುವುದು ಎಂದು ದೆಹಲಿ ಸರ್ಕಾರ ಘೋಷಿಸಿದೆ. ಕಟ್ಟಡ ಕಾರ್ಮಿಕರ ಮಕ್ಕಳಿಗೆ ಉಚಿತ ತರಬೇತಿ ಮತ್ತು ನಿರ್ಮಾಣ ಸ್ಥಳಗಳಲ್ಲಿ ಶಿಶುವಿಹಾರದ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುವುದಾಗಿ ಕೇಜ್ರಿವಾಲ್ ತಿಳಿಸಿದ್ದಾರೆ.



## ಭ್ರಷ್ಠ ವವ್ಯಸ್ಥೆ ವಿರುದ್ದ ನನ್ನ ಹೋರಾಟ: ಗಡಾದ

ಮೂಡಲಗಿ : ಜಾರಕಿಹೊಳಿ ಸಹೋದರರು ರಾಜ್ಯ ಮತ್ತು ಜಿಲ್ಲೆಯ ರಾಜಕಾರಣವನ್ನು ತಮ್ಮ ಸ್ವಾರ್ಥಕ್ಕಾಗಿ ಬಳಸಿಕೊಂಡು ತಮ್ಮಗೆ ಬೇಕಾದ ವ್ಯಕ್ತಿಗಳಿಗೆ ಪಕ್ಷದ ಟಿಕೇಟ ನೀಡುವಂತೆ ಪಕ್ಷದ ವರಿಷ್ಠರ ಮೇಲೆ ಒತ್ತಡ ಹಾಕಿ ತಮ್ಮ ಬೆಳೆ ಬೇಯಿಸಿಕೊಳ್ಳುತ್ತಿದ್ದಾರೆ, ನನ್ನ ಚಿನ್ನೆ ಕಿಟಲಿ ಮೋದಿಯವರು ಚಹಾ ಮಾರಲು ಕಿಟಲಿ ಬಳಸಿದ್ದರು ಎಂದು ಬಂಡಾಯ ಕಾಂಗ್ರೆಸ ಅಭ್ಯರ್ಥಿ ಭೀಮಪ್ಪ ಗಡಾದ ಹೇಳಿದರು

ಮಂಗಳವಾರ ಮುಖಂಡ ಭೀಮಪ್ಪ ಹಂದಿಗುಂದ ಅವರ ನಿವಾಸದಲ್ಲಿ ಕರೆದ ಪತ್ರಿಕಾ ಗೋಷ್ಠಿಯಲ್ಲಿ ಮಾತನಾಡಿದರು, ಈ ಸಲದ ಚುನಾವಣೆಯಲ್ಲಿ ಈ ಕ್ಷೇತ್ರದಲ್ಲಿ ಬದಲಾವಣೆ ಬಯಸಿದ್ದಾರೆ ಆದ–ರಿಂದ ಮತದಾರರು ಬಂಡಾಯ ಕಾಂಗ್ರೆಸ ಅಭ್ಯರ್ಥಿಯಾದ ನನಗೆ ಮತಗಳನ್ನು ನೀಡುವ ಮೂಲಕ ಹೊಸ ಇತಿಹಾಸ ನಿರ್ಮಿಸಲು ಅವಕಾಸ ನೀಡಿ, ಜಾರಕಿಹೊಳಿಯವರ ಷಂಡಂತ್ರದಿಂದ ನನಗೆ ಟಿಕೇಟ್ ಕೈ ತಪ್ಪಿದೆ.ಪ್ರಜಾಪ್ರಭುತ್ವ ಕಂಗೊೀಲೆಯಾಗುತ್ತಿದೆ.ಭ್ರಷ್ಟ ವವ್ಯಸ್ಥೆ ವಿರುದ್ದ ನಮ್ಮ ಹೋರಾಟ ನಿರಂತರವಾಗಿ ಇರುತ್ತದೆ. ಅರಭಾಂವಿ ಕ್ಷೇತ್ರದಲ್ಲಿ ಒಂದು ಅಲೆ ಇದೆ ಅವರಿಗೆ ಪಕ್ಷ ಮುಖ್ಯವಲ್ಲ ಆದ–ರಿಂದ ಅವರನ್ನು ರಾಜಕೀಯ ನಿವೃತ್ತಿಗೊಳಿಸಲು ಅವರ ವಿರುದ್ದ ಚುನಾವಣೆಗೆ ಅನಿಯಾಗಿದ್ದೆವೆ.ನಾಳೆಯಿಂದ ಎಲ್ಲ ಜನಾಂಗದವರು. ಉತ್ಸಾಹಿ ಯುವಕರು.ಹಿರಿಯರು ಕೂಡಿ ಪ್ರಚಾರ ಮಾಡುತ್ತವೆ. ಒಂದೇ ಗುರಿ ಜಾರಕಿಹೊಳಿ ಅವರನ್ನು ನಿವೃತ್ತಿಯಾಗಿಸುವದು ಎಂದರು,

## ಡಾ.ರವಿ ಪಾಟೀಲರ ಕ್ಷೇತ್ರದಲ್ಲಿ ಬಿಜೆಪಿಗರ ಬ್ರಹತ್ ರೋಡ್ ಷೋ



ಬೆಳಗಾವಿ: ಮಂಗಳವಾರ ನಗರದಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿಗಳ ಪರ, ಜಿಲ್ಲಾ ಪದಾಧಿಕಾರಿಗಳ ಅವರ ನೇತೃತ್ವದಲ್ಲಿ, ಪಚಾರಾಥ–ರ್ವಾಗಿ ಬ್ರಹತ್ ರೋಡ್ ಶೋ ನಡೆಯಿತು..

ಸಂಜೆ 4–30ಕ್ಕೆ ಬೆಳಗಾವಿ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಿಂದ ಪ್ರಾರಂಭವಾದ ಈ ರೋಡ್ ಶೋ, ಕಾಕತಿವೇಸ್, ಗಣಪತಿ ಗಲ್ಲಿ, ಮಾರುತಿ ಗಲ್ಲಿ ಮಾರ್ಗವಾಗಿ ಸಾಗಿ, ಕೊನೆಗೆ ಕಾವೇರಿ ಕೊಲ್ಡ್ರಿಂಕ್ಸ್ ಬಳಿ ಇರುವ ಹುತಾತ್ಮ ಚೌಕದಲ್ಲಿ ಕೊನೆಗೊಂಡಿದೆ..

ಜಿಲ್ಲಾ ವರಿಷ್ಠರು, ಕಿತ್ತೂರು ರಾಣಿ ಚೆನ್ನಮ್ಮ ಪ್ರತಿಮೆಗೆ ಹಾರ ಹಾಕುವ ಮೂಲಕ ರೋಡ್ ಶೋಗೆ ಚಾಲನೆ ನೀಡಿದರು.

ಬೆಳಗಾವಿ ಉತ್ತರ ಮತಕ್ಷೇತ್ರದಲ್ಲಿ ನಡೆಯುವ ಯಾಲಿ ಇದಾಗಿದ್ದರಿಂದ ಬಿಜೆಪಿ ಅಭ್ಯರ್ಥಿಯಾದ ಡಾ ರವಿ ಪಾಟೀಲ್ ಅವರು ರ್ಯಾಲಿಯಲ್ಲಿ ಅವರಿಗೆ ಸಾಥ್ ನೀಡಿದ್ದರು..

ರೋಡ್ ಶೋ ಉದ್ದಕ್ಕೂ ಸಾವಿರಾರು ಕಾರ್ಯಕರ್ತರು ಹಾಗೂ ಸಾರ್ವಜನಿಕರು ಭಾಗಿಯಾಗಿದ್ದು, ಬಿಜೆಪಿ, ಪ್ರಧಾನಿ ಮೋದಿ, ಹಾಗೂ ರವಿ ಪಾಟೀಲ ಅವರ ಪರವಾಗಿ ಘೋಷಣೆ ಕೂಗುತ್ತಾ ಮುನ್ನಡೆಯುತ್ತಿದ್ದರು..

ರಸ್ತೆಯುದ್ದಕ್ಕೂ ಸಾರ್ವಜನಿಕರು ಬಿಜೆಪಿ ಪಕ್ಷದ ಸಚಿವರು, ಶಾಸಕರಿಗೆ, ಕೈ ಬೀಸಿ, ಘೋಷಣೆ ಕೂಗುತ್ತಾ, ತಮ್ಮ ಬೆಂಬಲ ಬಿಜೆಪಿಗೆ ಎಂದು ಕೂಗಿ ಹೇಳುವಂತಿತ್ತು..

ಜನಸಾಗರದ ಮಧ್ಯ ನಡೆದ ಈ ಬ್ರಹತ್ ರೋಡ್ ಶೋದಲ್ಲಿ ಪುರುಷ ಹಾಗೂ ಮಹಿಳಾ ಕಾರ್ಯಕರ್ತರು ಭಾಗಿಯಾಗಿ ಇಡೀ ಮಾರ್ಗವನ್ನೇ ಕೇಸ–ರಿಮಯ ಮಾಡಿದ್ದರು.

ಈ ವಿಶೇಷ ರೋಡ್ ಶೋದ ಪರಿಣಾಮವಾಗಿ ಬೆಳಗಾವಿ ಉತ್ತರ ಮತಕ್ಷೇತ್ರದಲ್ಲಿ ಬಿಜೆಪಿಯ ಬಲ ಮತ್ತಷ್ಟು ಹೆಚ್ಚಿದಂತಾಗಿದೆ..

ಈ ಅದ್ದೂರಿ ರೋಡ್ ಶೋದಲ್ಲಿ ಸ್ಥಳೀಯ ನಾಯಕರ ಜೊತೆಯಲ್ಲಿ, ನಗರದ ಮಾಜಿ ಶಾಸಕರಾದ ಅನಿಲ್ ಬೇನಕೆ, ಸಂಸದೆ ಮಂಗಲಾ ಅಂಗಡಿ, ಬಿಜೆಪಿ ಉತ್ತರ ಕ್ಷೇತ್ರದ ಅಭ್ಯರ್ಥಿ ಡಾ ರವಿ ಪಾಟೀಲ್, ಮುರುಗೆಂದ್ರಗೌಡ ಪಾಟೀಲ್, ಬಿಜೆಪಿ ನಗರ ಸೇವಕರು, ಪದಾಧಿಕಾ–ರಿಗಳು, ಮುಂತಾದವರು ಭಾಗಿಯಾಗಿದ್ದರು.

# ಬೆಲೆ ಏರಿಕೆ, ಭ್ರಷ್ಟಾಚಾರಗಳಿಂದ ತತ್ತರಿಸಿ ಹೋಗಿರುವ ಜನರು; ಈ ಬಾರಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರಲೇಬೇಕೆಂದು ತೀರ್ಮಾನಿಸಿದ್ದಾರೆ: ಲಕ್ಷ್ಮೀ ಹೆಬ್ಬಾಳಕರ್

ಉಗಾರ/ ಹಾರೂಗೇರಿ: ಬೆಲೆ ಏರಿಕೆ, ಭ್ರಷ್ಟಾಚಾರಗಳಿಂದ ತತ್ತರಿಸಿ ಹೋಗಿರುವ ಜನರು ಈ ಬಾರಿ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಲೇ ಬೇಕೆಂದು ತೀರ್ಮಾನಿಸಿದ್ದಾರೆ ಎಂದು ಕಾಂಗ್ರೆಸ್ ನಾಯಕಿ, ಬೆಳಗಾವಿ ಗ್ರಾಮೀಣ ಕ್ಷೇತ್ರದ ಶಾಸಕಿ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಮಂಗಳವಾರ ಕಾಗವಾಡ ಕ್ಷೇತ್ರದ ಉಗಾರದಲ್ಲಿ ರಾಜು ಕಾಗೆಯವರ ಪರವಾಗಿ ಹಾಗೂ ಕುಡಚಿ ಕ್ಷೇತ್ರದ ಹಾರೂಗೇರಿಯಲ್ಲಿ ಮಹೇಂದ್ರ ತಮ್ಮಣ್ಣವರ್ ಪರವಾಗಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಪ್ರಜಾಧ್ವನಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇಡೀ ರಾಜ್ಯದಲ್ಲಿ ಕಾಂಗ್ರೆಸ್ ಪರವಾದ ಅಲೆ ಇದೆ. ಅದಕ್ಕೆ ಇಲ್ಲಿ ಇಷ್ಟು ದೊಡ್ಡ ಸಂಖ್ಯೆಯಲ್ಲಿ ಸೇರಿರುವ ಜನರೇ ಸಾಕ್ಷಿ. ನನ್ನ ಮತ ಕ್ಷೇತ್ರವಾಗಿರುವ ಬೆಳಗಾವಿ ಗ್ರಾಮೀಣದಲ್ಲೂ ಜನರು ನಾನು ಪ್ರಚಾರಕ್ಕೆ ಹೋದಲ್ಲೆಲ್ಲ ಬರಮಾಡಿಕೊಳ್ಳುವ ರೀತಿ ನೋಡಿದರೆ ಕಾಂಗ್ರೆಸ್ ಖಂಡಿತ ಅತ್ಯಧಿಕ ಬಹುಮತದಿಂದ ಈ ಬಾರಿ ಸರಕಾರ ರಚಿಸಲಿದೆ ಎನ್ನುವುದು ಗೊತ್ತಾಗುತ್ತದೆ. ಬೆಲೆ ಏರಿಕೆಯಿಂದಾಗಿ ಜೀವನ ನಡೆಸಲಾಗದೆ ತತ್ತರಿಸಿ ಹೋಗಿರುವ ಜನರು



ಕಾಂಗ್ರೆಸ್ ಪಕ್ಷದ ನಾಲ್ಕು ಗ್ಯಾರಂಟಿಗಳನ್ನು ಖಾತರದಿಂದ ಕಾಯುತ್ತಿದ್ದಾರೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಮೊದಲ ಸಚಿವಸಂಪುಟ ಸಭೆಯಲ್ಲೇ ನಾಲ್ಕು ಗ್ಯಾರಂಟಿಗಳಾದ 200 ಯುನಿಟ್ ಉಚಿತ ವಿದ್ಯುತ್, ಮನೆಯ ಯಜಮಾನಿಗೆ ತಿಂಗಳಿಗೆ 2 ಸಾವಿರ ರೂ., ಯುವಕರಿಗೆ ಉದ್ಯೋಗ ಮತ್ತು ನಿರುದ್ಯೋಗ ಭತ್ಯೆ ಹಾಗೂ ಪ್ರತಿ ವ್ಯಕ್ತಿಗೆ 10 ಕಿಲೋ ಅಕ್ಕಿ ಯೋಜನೆಗಳನ್ನು ಜಾರಿಗೊಳಿಸುವುದಾಗಿ ವಾಗ್ದಾನ ಮಾಡಿದ್ದೇವೆ. ಜನರು ನೆಮ್ಮದಿಯಿಂದ ಬದುಕಬೇಕು ಎನ್ನುವುದೇ ಈ ಯೋಜನೆಗಳ ಉದ್ದೇಶ ಎಂದು ಹೆಬ್ಬಾಳಕರ್ ಹೇಳಿದರು.

ಸಿದ್ದರಾಮಯ್ಯನವರು ಬಸವತತ್ವದಲ್ಲಿ ವಿಶ್ವಾಸವಿಟ್ಟು ಕೆಲಸ ಮಾಡುವವರು. ಅವರ ಬಗ್ಗೆ ಏನೇ ಅಪಪ್ರಚಾರ ಮಾಡಿದರೂ ತಲೆ ಕೆಡಿಸಿಕೊಳ್ಳುವ ಅಗತ್ಯವಿಲ್ಲ. ಸಿದ್ದರಾಮಯ್ಯ ಏನು ಎಂದು ಭಗವಂತನಿಗೆ ಗೊತ್ತು, ಜನ–ರಿಗೆ ಗೊತ್ತು. ಅವರು ಎಲ್ಲ ಸಮಾಜದ ಪ್ರಶ್ನಾತೀತ ನಾಯಕರು. ಅವರ ಆಡಳಿತವನ್ನು ನೀವೆಲ್ಲ ಕಣ್ಣಾರೆ ಕಂಡಿದ್ದೀರಿ. ಬಡರಿಗಾಗಿ ಎಷ್ಟೊಂದು ಯೋಜನೆಗಳನ್ನು ತಂದರು. ಅವರು ಹೋದಲ್ಲೆಲ್ಲ ಜನರು ದೇವರು ಬಂದಂತೆ ಅವರನ್ನು ಕಾಣುತ್ತಿದ್ದಾರೆ. ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ ಕಾಂಗ್ರೆಸ್ ಸೇರಿದ್ದರಿಂದಾಗಿ ಬೆಳಗಾವಿ ಜಿಲ್ಲೆಯಲ್ಲಿ ಆನೆ ಬಲ ಬಂದಂತಾಗಿದೆ. ಅವರ ಹಾಗೂ ಸತೀಶ್ ಜಾರಕಿಹೊಳಿ ಅವರ ಮಾರ್ಗದರ್ಶನದಲ್ಲಿ ಜಿಲ್ಲೆಯ ಕನಿಷ್ಟ 15 ಕ್ಷೇತ್ರಗಳಲ್ಲಿ ಕಾಂಗ್ರೆಸ್ ಜಯಭೇರಿ ಭಾರಿಸಲಿದೆ ಎಂದು ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಹಾಗೂ ವಿಧಾನಸಭೆ ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ, ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ, ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ, ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ, ಕಾಗವಾಡ ವಿಧಾನಸಭಾ ಕ್ಷೇತ್ರದ ಅಭ್ಯರ್ಥಿ ರಾಜು ಕಾಗೆ, ಕುಡಚಿ ಕ್ಷೇತ್ರದ ಅಭ್ಯರ್ಥಿ ಮಹೇಂದ್ರ ತಮ್ಮಣ್ಣವರ್ ಹಾಗೂ ಪಕ್ಷದ ಅನೇಕ ಮುಖಂಡರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಪ್ರಜಾಪ್ರಭುತ್ವ ಅಪಾಯದಲ್ಲಿದೆ: ಖರ್ಗೆ ಆತಂಕ

ಮಂಗಳೂರು:ಈ ದೇಶದಲ್ಲಿ ಪ್ರಜಾಪ್ರಭುತ್ವ ಅಸ್ತಿತ್ವದಲ್ಲಿ ಇರುತ್ತದೋ ಅಥವಾ ಇಲ್ಲವೋ ಅನ್ನುವಂತಹ ವಾತವರಣ ಸೃಷ್ಟಿಯಾಗಿದೆ. ಸಂವಿಧಾನದ ಅಡಿಯಲ್ಲಿ ನಮ್ಮೆಲ್ಲರ ರಕ್ಷಣೆ ಮಾಡಲಾಗುತ್ತದೋ ಇಲ್ಲವೋ ಎಂಬ ಸಂಶಯ ಮೂಡುತ್ತಿದೆ. ಅದಕ್ಕಾಗಿ ಈ ಚುನಾವಣೆ ಮಹತ್ವದ್ದಾಗಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಆತಂಕ ವ್ಯಕ್ತಪಡಿಸಿದ್ದಾರೆ.

ಮಂಗಳೂರಿನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ರಾಜ್ಯ ಬಿಜೆಪಿ ಸರ್ಕಾರದ ವಿರುದ್ಧ ಹರಿಹಾಯ್ದರು.

ನಾನು ಚುನಾವಣೆ ಪ್ರಚಾರಕ್ಕಾಗಿ ದಕ್ಷಿಣ ಕನ್ನಡ ಜಿಲ್ಲೆಗೆ ಬಂದಿದ್ದೇನೆ. ಮುಂಬರುವ ವಿಧಾನಸಭಾ ಚುನಾವಣೆ ದೇಶಕ್ಕೆ ಮತ್ತು ರಾಜ್ಯಕ್ಕೆ ಬಹಳ ಮಹತ್ತರವಾದ ಚುನಾವಣೆ. ಈ ಪ್ರಸುತ್ತ ವಿದ್ಯಾಮಾನಗಳನ್ನು ನಾವು ಅವಲೋಕಿಸುತ್ತಿರುವ ಸಂದರ್ಭದಲ್ಲಿ ಈ ದೇಶದಲ್ಲಿ ಪ್ರಜಾಪ್ರಭುತ್ವ ಅಸ್ತಿತ್ವದಲ್ಲಿ ಇರುತ್ತದೋ ಅಥವಾ ಇಲ್ಲವೋ ಅನ್ನುವಂತಹ ವಾತವರಣ ಸೃಷ್ಟಿಯಾಗಿದೆ. ಸಂವಿಧಾನದ ಅಡಿಯಲ್ಲಿ ನಮ್ಮೆಲ್ಲರ ರಕ್ಷಣೆ ಮಾಡಲಾಗುತ್ತದೋ ಇಲ್ಲವೋ ಎಂಬ ಸಂಶಯ ಮೂಡುತ್ತಿದೆ. ಅದಕ್ಕಾಗಿ ಈ ಚುನಾವಣೆ ಮಹತ್ವದ್ದಾಗಿದೆ ಎಂದರು.

ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನ ರಕ್ಷಣೆ ಮಾಡುವ ಕೆಲಸ ಮಾಡಬೇಕಿದೆ. ಅದರ ಜತೆಯಲ್ಲೇ ವಿಧಾನಸಭಾ ಚುನಾವಣೆಯಲ್ಲಿ ಸಹಜವಾಗಿ ರಾಜ್ಯದ ಸಮಸ್ಯೆಗಳು, ಕಾರ್ಯವೈಖರಿ ಮತ್ತು ಅಭಿವೃದ್ಧಿಯ ಬಗ್ಗೆ ಮಾತನಾಡಲೇಬೇಕಾಗುತ್ತದೆ ಎಂದು ಹೇಳಿದರು.

ಇಂದು ಕರ್ನಾಟಕದಲ್ಲಿ ಲಂಚ ಕೊಡದೇ ಯಾವುದೇ ಕೆಲಸ ಆಗುವುದಿಲ್ಲ. ಎಲ್ಲ ಹಂತಗಳಲ್ಲಿ ಭ್ರಷ್ಟಾಚಾರ ಹಬ್ಬಿದೆ. ಕರ್ನಾಟಕ ರಾಜ್ಯ ತನ್ನ ಅಭಿವೃದ್ಧಿ, ಆಡಳಿತ ಕಾರ್ಯವೈಖರಿ, ಬಂಡವಾಳ ಹೂಡಿಕೆಗೆ ಹೆಸರುವಾಸಿಯಾಗಿತ್ತು. ಆದರೆ ರಾಜ್ಯ ತನ್ನ ಒಂದೊಂದೇ ಘನತೆಯನ್ನು ಕಳೆಕೊಳ್ಳುತ್ತಿದೆ. ಇದಕ್ಕೆ ಕಾರಣ 40% ಕಮಿಷನ್ ಭ್ರಷ್ಟಾಚಾರ. ಲಂಚ ಕೊಟ್ರೆ ಎಲ್ಲ ಕೆಲಸ ಆಗುತ್ತದೆ ಎನ್ನುವುದು ಜಗಜ್ಜಾಹೀರಾಗಿದೆ. ಇದಕ್ಕೆ ಸಾಕ್ಷಿ ನಾವು ಕೊಡಬೇಕಾಗಿಲ್ಲ. ರಾಜ್ಯದ ಗುತ್ತಿಗೆದಾರರ ಸಂಘ, ರುಪ್ಸಾ ಸಂಸ್ಥೆ ರಾಜ್ಯದ ಬಿಜೆಪಿ ಸರ್ಕಾರದ 40% ಕಮಿಷನ್ ಬಗ್ಗೆ ಪ್ರಧಾನಿಗಳಿಗೆ, ರಾಷ್ಟ್ರಪತಿಗಳಿಗೆ, ರಾಜ್ಯದ ರಾಜ್ಯಪಾಲ–ರಿಗೆ ಹಾಗೂ ಲೋಕಾಯುಕ್ತರಿಗೆ ಪತ್ರ ಬರೆದಿದ್ದಾರೆ. ಇದಕ್ಕಿಂತ ದೊಡ್ಡ ಸಾಕ್ಷಿ ಇನ್ನೇನು ಬೇಕು. ಇಂತಹ ಭ್ರಷ್ಟ ಬಿಜೆಪಿ ಸರ್ಕಾರವನ್ನು ತೆಗೆದು ಹಾಕುವುದೇ ಸೂಕ್ತ ಎಂದು ರಾಜ್ಯದ ಜನ ತೀರ್ಮಾನ ಮಾಡಿದ್ದಾರೆ ಎಂದು ತಿಳಿಸಿದರು.

ನಾ ಖಾವುಂಗಾ ನಾ ಖಾನೇ ದೂಂಗ ಇದು ಪ್ರಧಾನಿ ಮೋದಿ ಜೀ ಅವರ ಸ್ಲೋಗನ್ ಆಗಿದೆ. ಆದ–'ರೆ ರಾಜ್ಯದಲ್ಲಿ ಮಾತ್ರ ಭ್ರಷ್ಟರಿಗೆ ಮಣೆ ಅಕ್ತಾ ಇದ್ದಾರೆ. ಮೋದಿ ಮತ್ತುಅಮಿತ್ ಶಾ ಅವರು ಈ ಭ್ರಷ್ಟಾಚಾರದ ಬಗ್ಗೆ ಯಾಕೆ ಮೌನವಾಗಿದ್ದಾರೆ. ಇಡಿ, ಸಿಬಿಐ , ಐಟಿ ಎಂಬ ಎಲ್ಲ ಅಸ್ತ್ರಗಳನ್ನು ಪ್ರಯೋಗಿಸುತ್ತಾರೆ. ಈ ತನಿಖಾ ಸಂಸ್ಥೆಗಳು ರಾಜ್ಯದಲ್ಲಿರುವ ಭ್ರಷ್ಟಾಚಾರದ ಕಡೆ ಯಾಕೆ ನೋಡುತ್ತಿಲ್ಲ ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಸುಮಾರು 25 ಲಕ್ಷ ಯುವ ನಿರುದ್ಯೋಗಿಗಳು ಇದ್ದಾರೆ. ಅನೇಕ ವೃತ್ತಿಪರರಿಗೆ ಉದ್ಯೋಗ ಸಿಗ್ತಾ ಇಲ್ಲ. ಡಬಲ್ ಇಂಜಿನ ಸರ್ಕಾರಕ್ಕೆ ಇದರ ಬಗ್ಗೆ ಚಿಂತೆಯಿಲ್ಲ. ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ 2,70,000 ಹುದ್ದೆಗಳು ಖಾಲಿ ಇದ್ದು, ಏಕೆ ತುಂಬುತ್ತಿಲ್ಲ. ಇಲ್ಲಿ 25 ಲಕ್ಷ ನಿರುದ್ಯೋಗಿ ಡಾಕ್ಟರ್ ಹಾಗೂ ಎಂಜಿನಿಯರ್ ಪದವೀಧರರಿದ್ದಾರೆ. 100 ಕೋಟಿ ಜನ ಶಿಕ್ಷಿತರು ಇದ್ದಾರೆ. 7.70,000 ಜನ ಸರ್ಕಾರಿ ನೌಕ–ರಿಯಲ್ಲಿದ್ದಾರೆ. ಆದರೂ ಯಾಕೆ ತುಂಬಲ್ಲ? ಈ ಹುದ್ದೆಗಳನ್ನು ತುಂಬಿದರೆ ಅವರ ಕುಟುಂಬ



ಬದುಕಿಸಬಹುದು. ಅವರ ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಕೊಡಬಹುದು. ಈ ಉದ್ಯೋಗಗಳು ಸರ್ಕಾರದ ಕೈಯಲ್ಲಿದ್ದು, ಹೊಸದಾಗಿ ಸೃಷ್ಟಿ ಮಾಡುವ ಅಗತ್ಯವಿಲ್ಲ. ಈ ಸರ್ಕಾರಿ ಹುದ್ದೆಗಳನ್ನು ತುಂಬಿದರೆ ಎಸ್ ಸಿ,ಎಸ್ ಟಿ ಮತ್ತು ಹಿಂದುಳಿದ ವರ್ಗದವರಿಗೆ ಶೇ, 50 ರಷ್ಟು ಹೋಗುತ್ತದೆ. ಈ ವರ್ಗಗಳಿಗೆ ಉದ್ಯೋಗ ಕೊಡಬಾರದು ಎನ್ನುವುದು ಬಿಜೆಪಿ ಉದ್ದೇಶ ಎಂದು ಟೀಕಿಸಿದರು

ರಾಜ್ಯದ ಬಜೆಟ್ ನಲ್ಲಿ 300,000 ಲಕ್ಷ ಕೋಟಿ ಇದೆ. 2000 ಕೋಟಿ ಮೂಲಭೂತ ಸೌಕರ್ಯಕ್ಕೆ ಹೋಗ್ತಾ ಇದೆ. ಅದರಲ್ಲಿ 40% ಕಮಿಷನ್ ತೆಗೆದ್ರೆ ಯಾವ ಗುಣಮಟ್ಟವನ್ನು ಕಾಪಾಡುಕೊಳ್ಳಬಹುದು. ಬಿಜೆಪಿಯ ಭ್ರಷ್ಟಾಚರ ನಿಮ್ಮ ಹೆಗಲ ಮೇಲೆ ಬೀಳುತ್ತಿದೆ. ಆದರೆ ಬಿಜೆಪಿ ಮಾತ್ರ ಇನ್ನೊಬ್ಬರ ಕಡೆ ಬೊಟ್ಟು ಮಾಡುತ್ತಿದೆ ಎಂದರು.

9 ವರ್ಷದಲ್ಲಿ ಮಂಗಳೂರು ಸೇರಿದಂತೆ, ಬೆಳಗಾವಿ, ಕಲ್ಯಾಣ ಕರ್ನಾಟಕ ಹಾಗೂ ಮೈಸೂರು ಜಿಲ್ಲೆಗಳಲ್ಲಿ ಎಷ್ಟು ಹೂಡಿಕೆ ಮಾಡಿದ್ದೀರಿ.

ನಾವು ಕೊಡುವ ಜಿಎಸ್ಟಿ ಹಣದಲ್ಲಿ ನಮಗೆ 10% ವಾಪಸ್ ನಮಗೆ ಕೇಂದ್ರದಿಂದ ಬರುತ್ತಿಲ್ಲ ಎಂದು ಆಪಾದಿಸಿದರು.

ಡಬಲ್ ಎಂಜಿನ್ ಸರ್ಕಾರ ಅಂತ ಹೇಳ್ತಿರಾ ಅಲ್ವ, ಡಬಲ್ ಎಂಜಿನ್ ಸರ್ಕಾರ ಏನು ಮಾಡಿದೆ. ಸಿಂಗಲ್ ಎಂಜಿನ್ 40% ಇದ್ದರೆ ಡಬಲ್ ಎಂಜಿನ್ 80% ಪರ್ಸೆಂಟಾ ಎಂದು ವ್ಯಂಗ್ಯವಾಡಿದರು.

ರಾಜ್ಯದ ಬಿಜೆಪಿ ಸರ್ಕಾರಕ್ಕೆ ಶಿಕ್ಷಣದ ಕಡೆ ಲಕ್ಷ್ಯವಿಲ್ಲ, ಹೂಡಿಕೆ ಮೇಲೆ ಲಕ್ಷ್ಯವಿಲ್ಲ, ನಿರುದ್ಯೋಗ ಕಡೆ ಲಕ್ಷ್ಯವಿಲ್ಲ ಹಾಗೆಯೇ ಹಣದುಬ್ಬರದ ಕಡೆ ಲಕ್ಷ್ಯವಿಲ್ಲ. ಹಣದುಬ್ಬರ ಗಗನಕ್ಕೇರುತ್ತಿದೆ.

ಖಾಲಿ ಹುದ್ದೇ ಭರ್ತಿ ಮಾಡುವ ಬಗ್ಗೆ ಲಕ್ಷ್ಯವಿಲ್ಲ. ಅದೇ ರೀತಿ ಮಿತಿಮೀರಿದ ಭ್ರಷ್ಟಾಚಾರ ಇವೆಲ್ಲಾ ನೋಡಿದಾಗ ಈ ಬಿಜೆಪಿ ಸರ್ಕಾರ ಯಾರಿಗೂ ಬೇಕಾಗಿಲ್ಲ. ಹಾಗಾಗಿ ಈ ಭ್ರಷ್ಟ ಸರಕಾರವನ್ನು ತೆಗೆಯಬೇಕು ಎಂದು ರಾಜ್ಯದ ಜನ ಮನಸ್ಸು ಮಾಡಿದ್ದಾರೆ ಎಂದರು.

ಕಾಂಗ್ರೆಸ್ ಉಳಿದವರ ಕೈ ಕಾಲು ಹಿಡಿಯುತ್ತಿದ್ದಾರೆಂಬ ಬಿಜೆಪಿ ಅಧ್ಯಕ್ಷ ನಳಿನ್ ಕುಮಾರ್ ಆರೋಪದ ಬಗ್ಗೆ ಕೇಳಿದಾಗ,'ತಮ್ಮ ತಟ್ಟೆಯಲ್ಲಿ ಹೆಗ್ಗಣ ಬಿದ್ದಿದ್ದರೂ ಬೇರೆಯವರ ಬೇರೆಯವರ ತಟ್ಟೆಯಲ್ಲಿ ನೊಣ ಬಿದ್ದಿರುವುದು ನೋಡಿದಂತೆ ಬಿಜೆಪಿ ಅಧ್ಯಕ್ಷರು ಮಾತನಾಡಿದ್ದಾರೆ. ಇದಕ್ಕೆಲ್ಲಾ ಉತ್ತರ ಕೊಡೋಕೆ ಹೋಗಲ್ಲ. ನಾವು 150 ಸೀಟ್ ಗೆಲ್ಲಬೇಕಾಗಿದೆ.

ಅಲ್ಪ ಬಹುಮತದಲ್ಲಿ ಗೆದ್ದಲ್ಲಿ ಶಾಸಕರನ್ನು ಬಿಜೆಪಿಯವರು ಆಪರೇಷನ್ ಕಮಲ ಮಾಡಿ ಕಳ್ಳ ಮಾರ್ಗದಲ್ಲಿ ಸರ್ಕಾರ ರಚಿಸುತ್ತಾರೆ. ಈ ನಿಟ್ಟಿನಲ್ಲಿ ಹೆಚ್ಚಿನ ಸಂಖ್ಯೆಯ ಸೀಟುಗಳನ್ನು ಕಾಂಗ್ರೆಸ್ ಪಡೆಯುವುದು ಅಗತ್ಯ ಕರ್ನಾಟಕ, ಮಧ್ಯಪ್ರದೇಶ, ಗೋವಾ, ಮಣಿಪುರಾ, ಉತ್ತರಖಂಡದಲ್ಲಿ ಶಾಸಕರ ಕಳ್ಳತನದಿಂದ ಸರಕಾರ ರಚನೆಯಾಗಿದೆ ಎಂದರು.

## ಬಾಕಿ ಇರುವ ಪ್ರಕರಣದ ಬಗ್ಗೆ ಮಾಧ್ಯಮಗಳಿಗೆ ಸಂದರ್ಶನ: ಹೈಕೋರ್ಟ್ ನ್ಯಾಯಾಧೀಶರಿಗೆ ಸಿಜೆಐ ತರಾಟೆ


ನವದೆಹಲಿ: ಹೈಕೋರ್ಟ್ ನ್ಯಾಯಾಧೀಶರೊಬ್ಬರು ಬಾಕಿ ಇರುವ ಪ್ರಕರಣಗಳ ಬಗ್ಗೆ ಮಾಧ್ಯಮಗಳಿಗೆ ಸಂದರ್ಶನ ನೀಡಿರುವುದಕ್ಕೆ ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಾಧೀಶ ಡಿ.ವೈ ಚಂದ್ರಚೂಡ್ ಗರಂ ಆಗಿದ್ದಾರೆ.

ಕೋಲ್ಕತ್ತಾ ಹೈಕೋರ್ಟ್ ನ್ಯಾಯಾಧೀಶ ಅಭಿಜಿತ್ ಗಂಗೋಪಾಧ್ಯಾಯ ಅವರು ಬಾಕಿ ಇರುವ ಪ್ರಕರಣವೊಂದರ ಬಗ್ಗೆ ಮಾಧ್ಯಮವೊಂದಕ್ಕೆ ಸಂದರ್ಶನ ನೀಡಿದ್ದರು.

ಬಾಕಿ ಇರುವ ಪ್ರಕರಣದ ಬಗ್ಗೆ ಹೈಕೋರ್ಟ್ ನ್ಯಾಯಾಧೀಶರು ಸಂದರ್ಶನ ನೀಡಬೇಕಿಲ್ಲ. ಅದು ನಿಜವಾದರೆ, ಈ ಪ್ರಕರಣವನ್ನು ಅವರು ವಿಚಾರಣೆ ನಡೆಸಬೇಕಿಲ್ಲ.

ಅವರು ಈ ರೀತಿ ಮಾಡಿದ್ದರೆ, ವಿಚಾರಣೆಯಲ್ಲಿ ಭಾಗವಹಿಸಬೇಕಿಲ್ಲ.

ಬಾಕಿ ಉಳಿದಿರುವ ವಿಷಯಗಳ ಕುರಿತು ಸುದ್ದಿ ವಾಹಿನಿಗಳಿಗೆ ಸಂದರ್ಶನ ನೀಡುವುದು



ನ್ಯಾಯಾಧೀಶರ ಕೆಲಸವಲ್ಲ.

ಇದು ನಿಜವಾಗಿದ್ದರೆ, ಅವರು ಇನ್ನು ಮುಂದೆ ಈ ಪ್ರಕರಣದ ವಿಚಾರಣೆ ನಡೆಸಲು ಸಾಧ್ಯವಿಲ್ಲ. ನಾವು ತನಿಖೆಯನ್ನು ಮಾಡುವುದಿಲ್ಲ.

ಆದರೆ ಟಿವಿ ಚರ್ಚೆಯಲ್ಲಿ ಅರ್ಜಿದಾರರ ಬಗ್ಗೆ ನ್ಯಾಯಾಧೀಶರು ಅಭಿಪ್ರಾಯವನ್ನು ನೀಡಿದರೆ, ಅವರು ಆ ಪ್ರಕರಣದ ವಿಚಾರಣೆ ನಡೆಸಲು ಸಾಧ್ಯವಿಲ್ಲ.

ನಂತರ ಹೈಕೋರ್ಟ್ ಮುಖ್ಯಸ್ಥರು ಹೊಸ ಪೀಠವನ್ನು ರಚಿಸಬೇಕು ಎಂದು ಸಿಜೆಐ ಹೇಳಿದ್ದಾರೆ.

ಕೋಲ್ಕತ್ತಾ ಹೈಕೋರ್ಟ್ ಟಿಎಂಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಅವರ ವಿರುದ್ಧದ ನೇಮಕಾತಿ ಹಗರಣದಲ್ಲಿ ಅವರ ಪಾತ್ರಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಲು ಸಿಬಿಐ ಗೆ ನಿರ್ದೇಶಿಸುವುದರ ಪ್ರಕರಣದ ಬಗ್ಗೆ ಕೋರ್ಟ್ ಈಗ ಹೆಚ್ಚಿನ ಮಹತ್ವ ನೀಡುವುದಿಲ್ಲ. ಆದರೆ ಹೈಕೋರ್ಟ್ ನ್ಯಾಯಾಧೀಶರು ಸಂದರ್ಶನ ನೀಡಿದ್ದಾರೆಯೇ ಇಲ್ಲವೇ ಎಂಬುದನ್ನು ತಿಳಿಯುವುದು ಅಗತ್ಯವಾಗಿದೆ ಎಂದು ಚಂದ್ರಚೂಡ್ ಹೇಳಿದ್ದಾರೆ.

ಪ್ರಾಥಮಿಕ ಶಿಕ್ಷಕರ ನೇಮಕಾತಿ ಹಗರಣದಲ್ಲಿ ತಮ್ಮನ್ನು ವಿಚಾರಣೆ ನಡೆಸಲು ಸಿಬಿಐ ಹಾಗೂ ಜಾರಿ ನಿರ್ದೇಶನಾಲಯಕ್ಕೆ ನಿರ್ದೇಶನ ನೀಡಿರುವ ಕೋಲ್ಕತ್ತ ಹೈಕೋರ್ಟ್ ನ ಆದೇಶವನ್ನು ಪ್ರಶ್ನಿಸಿ ಟಿಎಂ ಸಿ ಪ್ರಧಾನ ಕಾರ್ಯದರ್ಶಿ ಅಭಿಷೇಕ್ ಬ್ಯಾನರ್ಜಿ ಸಲ್ಲಿಸಿದ್ದ ಅರ್ಜಿಯನ್ನು ಪರಿಗಣಿಸಿದ ವೇಳೆ ಸಿಜೆಐ ಈ ಮಾತುಗಳನ್ನಾಡಿದ್ದಾರೆ.

## ಮೇ 10 ರಂದು ಎಲ್ಲರೂ ಹಕ್ಕು ಚಲಾಯಿಸಿ: ಇ ಒ ನಿಂಗಪ್ಪ ಮಸಳಿ

ಬೆಳಗಾವಿ: ಪ್ರತಿ ಮತವೂ ಅಮೂಲ್ಯವಾದ್ದು, ಮೇ 10 ರಂದು ಎಲ್ಲರೂ ತಪ್ಪದೇ ತಮ್ಮ ಹಕ್ಕು ಚಲಾಯಿಸುವಂತೆ ತಾಲೂಕು ಪಂಚಾಯತಿ ಇ ಒ ನಿಂಗಪ್ಪ ಮಸಳಿ ಹೇಳಿದರು.

ಕಾಗವಾಡ ತಾಲೂಕಿನ ಮಂಗಸೂಳಿ ಗ್ರಾಮದಲ್ಲಿ ಮನರೇಗಾ ಯೋಜನೆಯಡಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ತಾಲೂಕು




ಸ್ವೀಪ್ ಸಮಿತಿ ವತಿಯಿಂದ ಸೋಮವಾರ ಹಮ್ಮಿಕೊಳ್ಳಲಾದ ಮತದಾನ ಜಾಗೃತಿ ಅಭಿಯಾನ ಕಾರ್ಯಕ್ರಮದಲ್ಲಿ ಇವರು ಮಾತನಾಡಿದರು.

ಮತದಾನದ ಬಗ್ಗೆ ಯಾರೂ ನಿರ್ಲಕ್ಷ್ಯ ಮಾಡಬಾರದು. ಯಾವುದೇ ಆಸೆ ಆಮಿಷಗಳಿಗೆ ಬಲಿಯಾಗದೆ ನೈತಿಕ ಮತದಾನ ಮಾಡಬೇಕು. ಸುತ್ತ–ಮುತ್ತಲಿನ ಜನರಿಗೂ ಮತದಾನದ ಮಹತ್ವ ತಿಳಿಸಿ ಕೊಡಬೇಕು ಎಂದು ಕೂಲಿಕಾರರಿಗೆ ಸಲಹೆ ನೀಡಿದರು.

ಸಹಾಯಕ ನಿರ್ದೇಶಕರಾದ ಗೋಪಾಳ ಮಾಳಿ ಅವರು ಮಾತನಾಡಿ ಸಂವಿಧಾನಾತ್ಮಕವಾಗಿ ದೊರೆತ ಮತದಾನದ ಹಕ್ಕನ್ನು ಚಲಾಯಿಸಿ ಒಳ್ಳೆಯ ನಾಯಕರನ್ನು ಆಯ್ಕೆ ಮಾಡಲು ಎಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ ಎಂದರು.

ಐಇಸಿ ಸಂಯೋಜ–ಕ ಅಮೀತ ಇಂಗಳಗಾಂವಿ, ಗ್ರಾಮ ಪಂಚಾಯತಿ ಸಿಬ್ಬಂದಿ ಬೀರಪ್ಪಸಿಂಗಾಡೆ, ಮನರೇಗಾ ಕೂಲಿಕಾರರು ಉಪಸ್ಥಿತರಿದ್ದರು.

## ಕೋವಿಡ್–19: ದೇಶದಲ್ಲಿಂದು 6,660 ಸೋಂಕು ಪ್ರಕರಣ ಪತ್ತೆ


ನವದೆಹಲಿ: ಕಳೆದ 24 ಗಂಟೆಗಳಲ್ಲಿ ದೇಶದಾದ್ಯಂತ 6,660 ಹೊಸ ಕೊರೊನಾವೈರಸ್ ಸೋಂಕು ಪ್ರಕರಣಗಳು ಪತ್ತೆಯಾಗಿದ್ದು, ಈ ಮೂಲಕ ಸಕ್ರಿಯ ಪ್ರಕರಣಗಳ ಸಂಖ್ಯೆ 63,380ಕ್ಕೆ ಇಳಿಕೆಯಾಗಿದೆ ಎಂದು ಕೇಂದ್ರ ಆರೋಗ್ಯ ಸಚಿವಾಲಯ ತಿಳಿಸಿದೆ.

24 ಗಂಟೆಗಳಲ್ಲಿ ಕೇರಳದಲ್ಲಿ ಒಂಬತ್ತು ಮಂದಿ ಸಾವು ಸೇ–ರಿದಂತೆ ದೇಶದಲ್ಲಿ ಈವರೆಗೆ 5,31,369 ಮಂದಿ ಕೋವಿಡ್‌ನಿಂದಾಗಿ ಸಾವಿಗೀಡಾಗಿದ್ದಾರೆ ಎಂದು ಸಚಿವಾಲಯ ಮಾಹಿತಿ ನೀಡಿದೆ.

ದೈನಂದಿನ ಪಾಸಿಟಿವಿಟಿ ದರ ಶೇ 3.52ರಷ್ಟಿದೆ ಮತ್ತು ವಾರದ ಪಾಸಿಟಿವಿಟಿ ದರ ಶೇ 5.42ರಷ್ಟಿದೆ. ದೇಶದಲ್ಲಿ ಈವರೆಗೆ 4.49 ಕೋಟಿಗೂ ಅಧಿಕ ಕೋವಿಡ್ ಪ್ರಕರಣಗಳು ಪತ್ತೆಯಾಗಿವೆ.

## ಪವರ ಪ್ಯಾರಾಗ್ಲೈಡಿಂಗ ಮೂಲಕ ಮತದಾನ ಜಾಗೃತಿ

ಬೆಳಗಾವಿ: ಜಿಲ್ಲಾ ಸ್ವೀಪ್ ಸಮಿತಿ, ತಾಲ್ಲೂಕಾ ಸ್ವೀಪ ಸಮಿತಿ ವತಿಯಿಂದ ಮಂಗಳವಾರ ಏಪ್ರಿಲ್.25 ರಂದು ಸುವರ್ಣ ವಿಧಾನ ಸೌಧ ಆವರಣದಲ್ಲಿ ನಿಮ್ಮ ಮತ



ನಿಮ್ಮ ಹಕ್ಕು, ನೈತಿಕವಾಗಿ ಮತಚಲಾಯಿಸಿ ಎಂಬ ಘೋಷವಾಕ್ಯದೊಂದಿಗೆ ಪವರ ಪ್ಯಾರಾಗ್ಲೈಡಿಂಗ ಮೂಲಕ ಮತದಾನ ಜಾಗೃತಿ ಮಾಡಲಾಯಿತು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಹರ್ಷಲ ಭೋಯರ್, ಪೋಲಿಸ ವರಿಷ್ಠಾಧಿಕಾ–ರಿಗಳಾದ ಸಂಜೀವ ಪಾಟೀಲ, ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ರವಿ ಬಂಗಾರಪ್ಪನವರ, ಕಾರ್ಯನಿರ್ವಾಹಕ ಅಧಿಕಾ–ರಿಗಳಾದ ರಾಜೇಶ ದಾನವಾಡಕರ್, ಯುವಜನ ಮತ್ತು ಕ್ರೀಡಾ ಇಲಾಖೆ ಉಪನಿರ್ದೇಶಕರಾದ ಜಿನೇಶ್ವರ ಪಡನಾಡ, ಜಿಲ್ಲಾ ಎಸ್.ಬಿ.ಎಂ ಸಮಾಲೋಚಕ ಬಾಹುಬಲಿ ಮೆಳವಂಕಿ, ತಾಂತ್ರಿಕ ಸಂಯೋಜಕರಾದ ನಾಗರಾಜ ಯರಗುದ್ದಿ, ತಾಲ್ಲೂಕು ಐಇಸಿ ಸಂಯೋಜ–ಕರಾದ ರಮೇಶ ಮಾದರ ಗ್ರಾಮ ಪಂಚಾಯತ ಸಿಬ್ಬಂದಿಗಳು, ವಿಶೇಷಚೇತನರು ಉಪಸ್ಥಿತರಿದ್ದರು.

# ಅಂತಿಮ ಅಖಾಡ ಸಿದ್ದ: ರಂಗೇರಿದ ಚುನಾವಣಾ ಕಣ



ವಿಧಾನಸಭಾ ಚುನಾವಣೆಗೆ ನಾಮಪತ್ರ ಹಿಂಪಡೆಯುವ ಗಡುವು ಮುಗಿದಿದ್ದು, ಯಾರು ಯಾರ ವಿರುದ್ಧ ಕದನಕ್ಕೆ ಇಳಿದಿದ್ದಾರೆ ಎಂಬ ಸ್ಪಷ್ಟ ಚಿತ್ರಣ ಕಣ್ಣ ಮುಂದಿದೆ. ಮೇ 10 ರಂದು ನಡೆಯಲಿರುವ ಮತದಾನದ ಅಖಾಡಕ್ಕೆ ವೇದಿಕೆ ಸಜ್ಜಾಗಿದೆ. ಆಡಳಿತಾರೂಢ ಬಿಜೆಪಿ ಆಪರೇಶನ್ ಕಮಲದ ನೆರವು ಇಲ್ಲದೆ ಸ್ವಂತ ಬಲದ ಮತ್ತೆ ಅಧಿಕಾರಕ್ಕೆ ಬರಲು ಹರಸಾಹಸ ಮಾಡುತ್ತಿದೆ. ಮತ್ತೆ ಅಧಿಕಾರದ ಗದ್ದುಗೆ ಕಾಂಗ್ರೆಸ್ ಶತಾಯ ಗತಾಯ ಹೋರಾಟದಲ್ಲಿ ತೊಡಗಿದೆ. ಇನ್ನು ಜೆಡಿಎಸ್ ಅತಂತ್ರ ವಿಧಾನಸಭೆಯ ನಿರೀಕ್ಷೆಯಿದ್ದು, ರಾಜಕೀಯ ತನ್ನ ಅಸ್ತಿತ್ವವನ್ನು ಕಾಪಾಡಿಕೊಳ್ಳಲು ಹವಣಿಸುತ್ತಿದೆ. ಸರಾಸರಿ 5.21 ಕೋಟಿ ಮತದಾರರು ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ಪಕ್ಷಗಳ ಅಭ್ಯರ್ಥಿಗಳ ಚುನಾವಣಾ ಭವಿಷ್ಯವನ್ನು ನಿರ್ಧರಿಸುತ್ತಾರೆ. ಯಾರ ಮನಸ್ಸಿನಲ್ಲಿ ಯಾವ ಪಕ್ಷದ ಗುರುತು ಇದೆ ಎಂಬ ಗುಟ್ಟನ್ನು ಮತದಾರ ಜತನವಾಗಿ ಕಾಪಾಡಿಕೊಂಡು ಬಂದಿದ್ದಾನೆ.

### ಎಲ್ಲಿ ಎಷ್ಟು ಅಭ್ಯರ್ಥಿಗಳು ?

224 ಕ್ಷೇತ್ರಗಳಲ್ಲಿ 2,613 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಇವರಲ್ಲಿ ಮಹಿಳೆಯರ ಸಂಖ್ಯೆ ಕೇವಲ 185 ಮಾತ್ರ ಎನ್ನುವುದು ವಿಪರ್ಯಾಸ!.

ಆಮ್ ಆದ್ಮಿ ಪಕ್ಷ (209), ಬಿ ಎಸ್ ಪಿ(133), ಜೆಡಿ ಯು (8) ಅಭ್ಯರ್ಥಿಗಳನ್ನು ಹಾಕಿದೆ.

2018 ರಲ್ಲಿ 2655 ಮತ್ತು 2016 ರಲ್ಲಿ 2948 ಅಭ್ಯರ್ಥಿಗಳು ಸ್ಪರ್ಧೆ ಮಾಡಿದ್ದರು.

ಮಹಿಳಾ ಅಭ್ಯರ್ಥಿಗಳ ಸಂಖ್ಯೆಯೂ ಇಳಿಮುಖವಾಗುತ್ತಿದೆ. 2018ರಲ್ಲಿ 185 ಮತ್ತು 2013ರಲ್ಲಿ 170 ಮಂದಿ ಕಣದಲ್ಲಿದ್ದರು.

ಅತಿ ಹೆಚ್ಚು ಅಂದರೆ 24ಅಭ್ಯರ್ಥಿಗಳು ಬಳ್ಳಾರಿ ಕ್ಷೇತ್ರದಲ್ಲಿ ಕಣಕ್ಕಿಳಿದಿದ್ದರೆ, ಹೊಸಕೋಟೆ ಮತ್ತು ಆನೇಕಲ್ ನಲ್ಲಿ ತಲಾ 23 ಮಂದಿ ಕಣದಲ್ಲಿ ಉಳಿದಿದ್ದಾರೆ. ಅತಿ ಕಡಿಮೆ ಅಂದರೆ ಕೇವಲ ತಲಾ ಐದು ಅಭ್ಯರ್ಥಿಗಳು ಮಂಗಳೂರು, ಬಂಟ್ವಾಳ್, ತೀರ್ಥ ಹಳ್ಳಿ, ಕುಂದಾಪುರ, ಕಾಪು, ಯಮಕನಮರಡಿ ಮತ್ತು ದೇವದುರ್ಗ ಕ್ಷೇತ್ರದಲ್ಲಿ ಉಳಿದಿದ್ದಾರೆ.

ರಾಜರಾಜೇಶ್ವರಿ ನಗರ, ಜಯನಗರ ಮತ್ತು ಕೆಜಿಎಫ್ ಕ್ಷೇತ್ರಗಳಲ್ಲಿ ತಲಾ 6ಮಹಿಳಾ ಅಭ್ಯರ್ಥಿಗಳು ನಿಪ್ಪಾಣಿ, ಹರಪನಹಳ್ಳಿ, ಮಾಲೂರು, ಮತ್ತು ಚಿಕ್ಕಪೇಟೆ ಕ್ಷೇತ್ರದಲ್ಲಿ ತಲಾ 5 ಮಹಿಳೆಯರು ಅದೃಷ್ಟ ಪರೀಕ್ಷೆಗೆ ಇಳಿದಿದ್ದಾರೆ.

### ಮೂರು ದಶಕಗಳಿಂದ ಮರುಕಳಿಸಿದ ಇತಿಹಾಸ:

ರಾಜ್ಯದ ಚುನಾವಣಾ ಇತಿಹಾಸವನ್ನು ಗಮನಿಸಿದರೆ 1985ರಲ್ಲಿ ರಾಮಕೃಷ್ಣ ಹೆಗಡೆ ನೇತೃತ್ವದಲ್ಲಿ ಆಡಳಿತಾರೂಢ ಜನತಾ ಪಕ್ಷ ಅಧಿಕಾರಕ್ಕೆ ಬಂದಿದ್ದನ್ನು ಹೊರತುಪಡಿಸಿದರೆ ಇದುವರೆಗೂ ಯಾವುದೇ ಪಕ್ಷ ಮರಳಿ ಅಧಿಕಾರಕ್ಕೆ ಬಂದ ಉದಾಹರಣೆ ಇಲ್ಲ. ನಂತರ ರಾಜ್ಯವನ್ನು ಆಳಿದ ಎಲ್ಲ ರಾಜಕೀಯ ಪಕ್ಷಗಳು ಆಡಳಿತ ವಿರೋಧಿ ಅಲೆಯಿಂದಾಗಿ ಅಧಿಕಾರವನ್ನು ಉಳಿಸಿಕೊಳ್ಳಲು ಸಾಧ್ಯವಾಗಲಿಲ್ಲ. ಸತತ 33 ವರ್ಷಗಳ ಅವಧಿಗೆ ಇದೇ ಸಂಪ್ರದಾಯ ಮುಂದುವರಿದಿದೆ.

ರಾಜಕೀಯ ತಜ್ಞರು ಮತ್ತು ಚುನಾವಣಾ ಪೂರ್ವ ಸಮೀಕ್ಷೆಗಳು ಬಿಜೆಪಿ ಸರಕಾರ ಆಡಳಿತ ವಿರೋಧಿ ಅಲೆಯನ್ನು ಎದುರಿಸುತ್ತಿರುವುದನ್ನು ಸ್ಪಷ್ಟಪಡಿಸುತ್ತಿವೆ.

### ವೀರಶೈವರ ನಡೆ ಎತ್ತ ?

ಇನ್ನು ಹದಿನೈದು ದಿನಗಳಲ್ಲಿ ನಡೆಯಲಿರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಗೆ ನಿರಾಶೆ ಮೂಡಿಸುವ ಘಟನಾವಳಿಗಳು ಕಳೆದ 18 ದಿನಗಳಲ್ಲಿ ನಡೆದು ಹೋಗಿವೆ. ಉತ್ತರ ಕರ್ನಾಟಕದ ಪ್ರಮುಖ ಲಿಂಗಾಯತ ನಾಯಕರಾದ ಜಗದೀಶ್ ಶೆಟ್ಟರ್, ಲಕ್ಷ್ಮಣ ಸವದಿ ಮತ್ತು ಇತರ ಕೆಲವು ನಾಯಕರು ಪಕ್ಷವನ್ನು ನಿರ್ಗಮಿಸಿರುವುದು ಮೊದಲನೇ ಅಂಶ. ಮೇಲಾಗಿ ಇವರಿಬ್ಬರೂ ವೀರಶೈವ ಸಮಾಜದ ಸಾದರ ಮತ್ತು ಬಣಜಿಗ ಪಂಗಡಕ್ಕೆ ಸೇರಿದ್ದಾರೆ ಎನ್ನುವುದು ಕುತೂಹಲಕರ ಅಂಶವಾಗಿದೆ.

ಈ ಲಿಂಗಾಯತ ನಾಯಕರಿಗೆ ಬಿಜೆಪಿ ಮಾಡಿದ ಅನ್ಯಾಯ ಮತ್ತು ಉದ್ದೇಶಪೂರ್ವಕವಾಗಿ ಬಿಎಸ್ ಯಡಿಯೂರಪ್ಪನವರಿಗೆ ಮಾಡಿದ ಅವಮಾನವನ್ನು ಸ್ವತಃ ಯಡಿಯೂರಪ್ಪ ಅವರೂ ಮರೆತಿಲ್ಲ. ಮೇಲಾಗಿ ಲಿಂಗಾಯಿತ ಸಮುದಾಯದ ನೀಲಿ ಕಣ್ಣಿನ ಹುಡುಗ ಬಿ.ವೈ. ವಿಜಯೇಂದ್ರಗೆ ಸಚಿವ ಸ್ಥಾನ ನಿರಾಕರಿಸಿದ್ದು ಅವರನ್ನು ಕೆರಳಿಸಿದೆ. ಈ ಎಲ್ಲ ವಿದ್ಯಮಾನಗಳು ಸಮುದಾಯದವನ್ನು ಕೆರಳಿಸಿದೆ. ಸಹಜವಾಗಿಯೇ ಇದು ವಿರೋಧಿ ಪಕ್ಷಗಳು ಅಧಿಕಾರಕ್ಕೆ ಏರಲು ಸಹಾಯ ಮಾಡಲಿದೆ. ಅದರಲ್ಲೂ ಮುಖ್ಯವಾಗಿ ಯಡಿಯೂರಪ್ಪ ಮತ್ತೆ ಅಧಿಕಾರಕ್ಕೆ ಬರುವುದಿಲ್ಲ. ಹೀಗಾಗಿ ಇಡೀ ವೀರಶೈವ ಸಮುದಾಯ ಸಾರಾ ಸಗಟಾಗಿ ಮತ್ತೆ ಬಿಜೆಪಿ ಪರವಾಗಿ ನಿಲ್ಲಲಿದೆ ಎಂದು ಹೇಳಲಾಗದು.

ಭ್ರಷ್ಟಾಚಾರ ಆರೋಪಗಳು, ಸಿಡಿ ಹಗರಣಗಳು, ಆಂತರಿಕ ಕಚ್ಚಾಟಗಳು ಬಿಜೆಪಿಯನ್ನು ಇಕ್ಕಟ್ಟಿಗೆ ಸಿಲುಕಿಸಿವೆ. ಪಕ್ಷದಲ್ಲಿ ಮಾಸ್ ಲೀಡರ್ ಇಲ್ಲದಿರುವುದು ಬಿಜೆಪಿಯನ್ನು ಕಳೆಗುಂದಿಸಿದೆ.

ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸಭೆಗಳಲ್ಲೇ ಪ್ರೇಕ್ಷಕರ ಕೊರತೆ ಎದ್ದು ಕಾಣುತ್ತಿದೆ. ಹಾಗಾಗಿ ರಾಜ್ಯ ಬಿಜೆಪಿ ಘಟಕ ಕೇಂದ್ರ ನಾಯಕರು ಅದರಲ್ಲೂ ಪ್ರಧಾನಿ ಮೋದಿ ಮತ್ತು ಸಚಿವ ಅಮಿತ್ ಶಾ ಅವರ ಜೋಡಿಯನ್ನು ಅವಲಂಬಿಸಿದೆ. ಮತದಾರರನ್ನು ಆಕರ್ಷಿಸಲು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಮತ್ತಿತರ ನಾಯಕರನ್ನು ಅವಲಂಬಿಸಿದೆ. ಈಗಿನ ಟ್ರೆಂಡ್ ಪ್ರಕಾರ ಇರುವಷ್ಟು ಸ್ಥಾನಗಳನ್ನು ಉಳಿಸಿಕೊಳ್ಳಲು ಬಿಜೆಪಿ ಹರಸಾಹಸ ಪಡಬೇಕಿದೆ ಎಂದು ಹೆಸರು ಹೇಳಲು ಬಯಸದ ಮುಖಂಡರೊಬ್ಬರು ಹೇಳುತ್ತಾರೆ.

ಬಿಜೆಪಿ ಎಲ್ಲ 224 ಕ್ಷೇತ್ರಗಳಿಗೆ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಕಾಂಗ್ರೆಸ್ ಮೇಲುಕೋಟೆಯಲ್ಲಿ ಸರ್ವೋದಯ ಪಕ್ಷದ ಅಭ್ಯರ್ಥಿ ದರ್ಶನ್ ಪುಟ್ಟಣ್ಣಯ್ಯ ಅವರಿಗೆ ಬೆಂಬಲ ಸೂಚಿಸಿದ್ದು, 223 ಕ್ಷೇತ್ರಗಳಲ್ಲಿ ಉಮೇದುವಾರಿಕೆ ಹಾಕಿದೆ. ಇನ್ನು ಜೆಡಿಎಸ್ ನ 207 ಅಭ್ಯರ್ಥಿಗಳು ಕಣದಲ್ಲಿ ಉಳಿದಿದ್ದಾರೆ. ಆಡಳಿತಾರೂಢ ವಿರೋಧಿ ಅಲೆ ಎದುರಿಸುತ್ತಿರುವ ಬಿಜೆಪಿಯನ್ನು ಇಕ್ಕಟ್ಟಿಗೆ ಸಿಲುಕಿಸುವ ಸಣ್ಣ ಅವಕಾಶವನ್ನೂ ಕಾಂಗ್ರೆಸ್ ಮತ್ತು ಜೆಡಿಎಸ್ ಬಿಟ್ಟುಕೊಡುತ್ತಿಲ್ಲ.

### ಕಾಡುತ್ತಿರುವ ಭಿನ್ನಮತ:

ಭಿನ್ನಮತ ಮೂರೂ ಪಕ್ಷಗಳನ್ನು ಕಾಡುತ್ತಿದೆ. ಹೊಸ ಮುಖಗಳಿಗೆ ಟಿಕೆಟ್, ಹಳಬರಿಗೆ ನಿವೃತ್ತಿ ಎಂಬ ಸೂತ್ರವನ್ನು ಅನುಸರಿಸಲು ಹೋಗಿ ಬಿಜೆಪಿ ಎಡವಟ್ಟು ಮಾಡಿಕೊಂಡಿದೆ. ಅತಿ ಹೆಚ್ಚು ಅತೃಪ್ತರನ್ನು ಹೊಂದಿರುವ ಪಕ್ಷವಾಗಿದೆ. ಇವರಲ್ಲಿ 20ಕ್ಕೂ ಹೆಚ್ಚು ಮಂದಿ ಕಾಂಗ್ರೆಸ್ ಮತ್ತು ಜೆಡಿ–ಎಸ್ ಆಶ್ರಯ ಪಡೆದರೆ ಇನ್ನೂ ಕೆಲವರು ಬಂಡಾಯವಾಗಿ ಚುನಾವಣೆಗೆ ಇಳಿದಿದ್ದಾರೆ. ನಿವೃತ್ತಿ ಘೋಷಿಸಿದವರು ಎಷ್ಟರ ಮಟ್ಟಿಗೆ ಪಕ್ಷಕ್ಕೆ ಸಹಕಾರ ನೀಡುತ್ತಾರೆ ಕಾದು ನೋಡಬೇಕಿದೆ.

ಕಾಂಗ್ರೆಸ್ ಕೂಡಾ ಬಂಡಾಯದ ಬಿಸಿಯನ್ನು ಅನು ಅನುಭವಿಸುತ್ತಿದೆ. ಇಲ್ಲಿ ಟಿಕೆಟ್ ಸಿಗದ ನಾಯಕರಿಗೆ ಬಿಜೆಪಿ ಮತ್ತು ಜೆಡಿಎಸ್ ಮಣೆ ಹಾಕಿದೆ. ಈ ರೀತಿ ಎರಡೂ ರಾಷ್ಟ್ರೀಯ ಪಕ್ಷಗಳ ನಾಯಕರಿಗೆ ಅತಿ ಹೆಚ್ಚು ಟಿಕೆಟ್ ನೀಡಿದ ಕೀರ್ತಿ ಜೆಡಿಎಸ್ ಗೆ ಸಲ್ಲುತ್ತದೆ.

### ಬಿಸಿ ತುಪ್ಪವಾದ ಸಿಎಂ ಪಟ್ಟ:

ಯಡಿಯೂರಪ್ಪ ನಿರ್ಗಮನದ ನಂತರ ಲಿಂಗಾಯತ ಸಮುದಾಯವನ್ನು ಓಲೈಕೆ ಮಾಡಲು ಎರಡೂ ರಾಷ್ಟ್ರೀಯ ಪಕ್ಷಗಳು ಕಸರತ್ತು ನಡೆಸಿವೆ. ಆದರೆ ಲಿಂಗಾಯತರನ್ನೇ ಮುಖ್ಯಮಂತ್ರಿ ಮಾಡುತ್ತೇವೆ ಎಂದು ಹೇಳುವಂತಿಲ್ಲ. ಹಾಗೊಂದು ವೇಳೆ ಘೋಷಣೆ ಮಾಡಿದರೆ ಇತರ ಸಮುದಾಯಗಳ ಸಿಟ್ಟಿಗೆ ಕಾರಣವಾಗಬೇಕಾಗುತ್ತದೆ. ಈ ಸಮುದಾಯ ಅಷ್ಟಾಗಿ ಜೆಡಿಎಸ್ ಪರವಾಗಿಲ್ಲ ಎನ್ನುವುದು ಈ ಹಿಂದಿನ ಫಲಿತಾಂಶಗಳು ಪುಷ್ಠಿಕರಿಸುತ್ತವೆ. ತಮ್ಮ ಸ್ವಂತ ವರ್ಚಸ್ಸಿನ ಮೇಲೆ ಈ ಸಮುದಾಯದ ಅಭ್ಯರ್ಥಿಗಳು ಗೆಲ್ಲಬಹುದು.

ಬಲ್ಲ ಮೂಲಗಳ ಪ್ರಕಾರ ಬಿಜೆಪಿ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅವರನ್ನು ಮುಖ್ಯಮಂತ್ರಿ ಹುದ್ದೆಗೆ ತರಲಾಗುತ್ತದೆ. ಈ ಬಗ್ಗೆ ಆರ್ ಎಸ್ ಎಸ್ ಚಿಂತನೆ ನಡೆಸಿದೆ ಎಂದು ಹೇಳಲಾಗುತ್ತಿದೆ. ಆದರೂ 2024ರ ಲೋಕಸಭಾ ಚುನಾವಣೆ ದೃಷ್ಟಿಯಿಂದ ವೀರಶೈವ ಸಮುದಾಯ ಸಮಾಜ–ಕ್ಕೆ ಸಿಎಂ ಹುದ್ದೆ ಮೀಸಲಿಡಬಹುದು ಎಂದೂ ಕೆಲವು ಮೂಲಗಳು ತಿಳಿಸಿವೆ.

### ಕೈ ಪಡೆಯಲ್ಲಿ ಸಿಎಂ ಗಾದಿಗೆ ಕಿತ್ತಾಟ:

ಇನ್ನು ಕಾಂಗ್ರೆಸ್ ಅಧಿಕಾರಕ್ಕೆ ಮರಳಲು ಸಾಧ್ಯವಿರುವ ಎಲ್ಲ ಪ್ರಯತ್ನಗಳನ್ನು ಮಾಡುತ್ತಿದೆ. ಆದರೆ ಮುಖ್ಯಮಂತ್ರಿ ಅಭ್ಯರ್ಥಿ ನಾನೇ ಎಂಬ ಗುಟ್ಟು ಪೆಟ್ಟು ನೀಡುತ್ತಿದೆ. ಪಕ್ಷ ಸಂಘಟನೆಗಿಂತ ಸಿಎಂ ಹುದ್ದೆ ಕುರಿತು ಚರ್ಚೆ ನಡೆಸಿದ್ದೇ ಹೆಚ್ಚು. ಇದೇ ಅಭಿಪ್ರಾಯ ಜನ ಸಾಮಾನ್ಯರಲ್ಲಿ ಕಂಡುಬಂದಿದೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಅವರು ತಮ್ಮ ಪ್ರಚಾರದ ಪ್ರಮುಖ ಸಮಯವನ್ನು ಸಿಎಂ ಹುದ್ದೆ ಪಡೆಯುವತ್ತ ಮೀಸಲಿಟ್ಟಿದ್ದು ತಪ್ಪು ಎಂದು ಸಾಮಾನ್ಯ ಕಾರ್ಯಕರ್ತನೂ ಹೇಳಬಲ್ಲ.

ಜೊತೆಗೆ ಗುಂಪುಗಾರಿಕೆ, ಬಂಡಾಯದಿಂದ ಕಾಂಗ್ರೆಸ್ ಮುಕ್ತವಾಗಿಲ್ಲ. ಅಲ್ಲಲ್ಲಿ ಬಂಡಾಯ ಎದ್ದು ಕಾಣುತ್ತಿದೆ.

### ಅತಂತ್ರ ಫಲಿತಾಂಶದ ನಿರೀಕ್ಷೆಯಲ್ಲಿ ಜೆಡಿ ಎಸ್:

ಒಕ್ಕಲಿಗರು ಪ್ರಾಬಲ್ಯ ಹೊಂದಿರುವ ಹಳೆ ಮೈಸೂರು ಭಾಗದಲ್ಲಿ ದೇವೇಗೌಡರು ಭರ್ಜರಿ ಪ್ರದರ್ಶನ ನೀಡುತ್ತಿದ್ದಾರೆ. 2018ರಲ್ಲಿ ಒಕ್ಕಲಿಗ ಭಾಗದಲ್ಲಿ ಜೆಡಿಎಸ್ 30 ಸ್ಥಾನಗಳನ್ನು ಗೆದ್ದು ಒಟ್ಟು 37 ಸ್ಥಾನ ಗಳಿಸಿತ್ತು. ಆದರೆ ಈ ಬಾರಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು, ತಾನು ಮುಖ್ಯಮಂತ್ರಿಯಾಗಲು ಒಕ್ಕಲಿಗ ಸಮುದಾಯ ಕೈ ಹಿಡಿಯಬೇಕೆಂದು ಮನವಿ ಮಾಡಿದ್ದಾರೆ. ಒಂದು ವೇಳೆ ಒಕ್ಕಲಿಗರು ಶಿವಕುಮಾರ್ ಮನವಿಗೆ ಮಣಿದರೆ, ಪ್ರಮುಖವಾಗಿ ಇದರ ಹೊಡೆತ ಬೀಳುವುದು ಜೆಡಿಎಸ್ ಗೆ.

ಇನ್ನು ಗಣಿ ಧಣಿ ಜನಾರ್ದನ ರೆಡ್ಡಿ ಅವರ ಪ್ರಗತಿ ಪಕ್ಷ ಕಲ್ಯಾಣ ಬಿಜೆಪಿಗೆ ವೇಗಕ್ಕೆ ಕನಿಷ್ಠ ಒಂದು ಡಜನ್ ಕ್ಷೇತ್ರಗಳಲ್ಲಿ ಅಡ್ಡಿಯಾಗಲಿದೆ. ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಬಿಜೆಪಿಗೆ ಜನಾರ್ಧನ ರೆಡ್ಡಿ ಪಕ್ಷ ಕಂಟಕವಾಗುವ ಸಾಧ್ಯತೆ ಇದೆ. ಇನ್ನು ಮಂದೆ ಚುನಾವಣಾ ಕಣ ರಂಗೇರಲಿದೆ. ಅಖಾಡಾ ಬಿರುಸು ಪಡೆಯಲಿದೆ. ತಮ್ಮ ತಮ್ಮ ಬತ್ತಳಿಕೆಯಲ್ಲಿರುವ ಬಾಣಗಳನ್ನು ಬಿಡಲು ಸಜ್ಜಾಗಿವೆ. ಗೆಲ್ಲಲು ಸಾಧ್ಯವಿರುವ ಎಲ್ಲ ಅಸ್ತ್ರಗಳನ್ನು ಮೂರೂ ಪಕ್ಷಗಳು ಪ್ರಯೋಗ ಮಾಡಲಿವೆ.

ಲೇಖಕರು: ಎಚ್. ಮಾರುತಿ

# ಏ.27ರಂದು 50 ಲಕ್ಷ ಬಿಜೆಪಿ ಕಾರ್ಯಕರ್ತರ ಜೊತೆ ಪ್ರಧಾನಿ ಸಂವಾದ

ಬೆಂಗಳೂರು: ಪ್ರಧಾನಿ ನರೇಂದ್ರ ಮೋದಿ ಅವರು ಈ ತಿಂಗಳ 27ರಂದು ಬೆಳಿಗ್ಗೆ 9.30ಕ್ಕೆ ರಾಜ್ಯದ 50 ಲಕ್ಷ ಬಿಜೆಪಿ ಕಾರ್ಯಕರ್ತರೊಂದಿಗೆ ವರ್ಚುವಲ್ ಮೂಲಕ ನೇರ ಸಂವಾದ ನಡೆಸಲಿದ್ದಾರೆ ಎಂದು ಬಿಜೆಪಿ ರಾಜ್ಯ ಚುನಾವಣಾ ನಿರ್ವಹಣಾ ಸಮಿತಿ ಸಂಚಾಲಕರು ಹಾಗೂ ಕೇಂದ್ರ ಸಚಿವೆ ಕು.ಶೋಭಾ ಕರಂದ್ಲಾಜೆ ತಿಳಿಸಿದರು.

ಮಲ್ಲೇಶ್ವರದ ಬಿಜೆಪಿ ರಾಜ್ಯ ಮಾಧ್ಯಮ ಕೇಂದ್ರದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ 58,112 ಬೂತ್‌ಗಳಲ್ಲಿ, 1,680 ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಈ ಸಂವಾದವನ್ನು ಹಮ್ಮಿಕೊಳ್ಳಲಾಗಿದೆ. ಬೂತ್‌ಗಳಲ್ಲಿ ಟಿ.ವಿಗಳನ್ನು, ಜಿಲ್ಲಾ ಪಂಚಾಯತ್ ಮಟ್ಟದಲ್ಲಿ ಎಲ್‌ಇಡಿ ಸ್ಕ್ರೀನ್ ಅಳವಡಿಸಲಾಗುವುದು. ಈ ಸಂವಾದಕ್ಕಾಗಿ ಈಗಾಗಲೇ 24 ಲಕ್ಷ ಕಾರ್ಯಕರ್ತರು ಮೋದಿಆ್ಯಪ್ ಡೌನ್ಲೋಡ್ ಮಾಡಿಕೊಂಡಿದ್ದಾರೆ ಎಂದು ತಿಳಿಸಿದರು.

ಬೂತ್ ಮಟ್ಟದಲ್ಲಿ 58 ಸಾವಿರ ಸ್ಥಳಗಳಲ್ಲಿ ಈ ಆ್ಯಪ್ ಗಳ ಮೂಲಕ ಕಾರ್ಯಕರ್ತರು ಸಂವಾದವನ್ನು ವೀಕ್ಷಿಸಲಿದ್ದಾರೆ. ಎಲ್‌ಇಡಿ ಸ್ಕ್ರೀನ್ ಇರುವ ಕಡೆ ಸುಮಾರು 1,000 ಕಾರ್ಯಕರ್ತರನ್ನು, ಬೂತ್‌ಗಳಲ್ಲಿ 200 ಕಾರ್ಯಕರ್ತರನ್ನು ಈ ಕಾರ್ಯಕ್ರಮಕ್ಕಾಗಿ ಸಂಂ–ಯೋಜಿಸಲಾಗುವುದು. ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ 5,000 ನಮೋ ಆ್ಯಪ್ ಡೌನ್ ಲೋಡ್ ಮಾಡಿಕೊಳ್ಳಲು ಯೋಜನೆ ರೂಪಿಸಲಾಗಿದೆ. ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳ 15 ಕಡೆ ಪ್ರಧಾನಿಯವರು ಕಾರ್ಯಕರ್ತರ ಪ್ರಶ್ನೆಗಳಿಗೆ ಉತ್ತ–ರಿಸಲಿದ್ದಾರೆ. ಹೊಸ ತಂತ್ರಜ್ಞಾನ ಬಳಸಿಕೊಂಡು ಇದೇ ಮೊದಲ ಬಾರಿ ಬೃಹತ್ ಪ್ರಮಾಣದಲ್ಲಿ ನೇರ ಸಂವಾದ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಬಿಜೆಪಿ ಮಾತ್ರ ಗರಿಷ್ಠ ಕಾರ್ಯಕರ್ತರನ್ನು ಹೊಂದಿದೆ. ಕಾರ್ಯಕರ್ತರ ಆಧಾ–ರಿತ ಬಿಜೆಪಿ, ಈ ಶ್ರಮದ ಮೇಲೆ ಗೆಲ್ಲುವ ಪಕ್ಷವಾಗಿದೆ. ನರೇಂದ್ರ ಮೋದಿಯವರು ರಾಜ್ಯದಲ್ಲಿ ಪೂರ್ಣ ಬಹುಮತದ




ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುವ ಅಪೇಕ್ಷೆ ಹೊಂದಿದ್ದಾರೆ. ಕಾರ್ಯಕರ್ತರ ಶ್ರಮಕ್ಕೆ ನರೇಂದ್ರ ಮೋದಿಯವರು ಬೆನ್ನೆಲು ಬಾಗಿರಲು ಸಿದ್ಧರಾಗಿದ್ದಾರೆ. ಕಡಿಮೆ ಅವಧಿಯಲ್ಲಿ ಅಭ್ಯರ್ಥಿಗಳು ಎಲ್ಲ ಮನೆಗಳಿಗೆ ಭೇಟಿ ನೀಡಲು ಕಷ್ಟ ಸಾಧ್ಯವಾದ್ದರಿಂದ ಕಾರ್ಯಕರ್ತರು ಒಂದೊಂದು ಮನೆಯನ್ನು ಎರಡರಿಂದ ಮೂರು ಬಾರಿ ಸಂಪರ್ಕಿಸಿ, ಡಬಲ್ ಇಂಜಿನ್ ಸರ್ಕಾರದ ಸಾಧನೆ ಮತ್ತು ಯೋಜನೆಗಳನ್ನು ತಿಳಿಸಲಿದ್ದಾರೆ ಎಂದು ಕು.ಶೋಭಾ ಕರಂದ್ಲಾಜೆ ವಿವರಿಸಿದರು.

ಇಂದಿನಿಂದ ಎರಡು ದಿನದ ವಿಶೇಷ ಮಹಾ ಪ್ರಚಾರ ಅಭಿಯಾನ ಆರಂಭವಾಗಿದೆ. ಎಲ್ಲ 224 ಕ್ಷೇತ್ರಗಳಲ್ಲಿ ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಬೆಳಿಗ್ಗೆ ಮಠ–ಮಂದಿಗಳಿಗೆ ಭೇಟಿ ನೀಡಿ ಆ ನಂತರ ರಾಷ್ಟ್ರ ನಾಯಕರ ಪ್ರತಿಮೆಗಳಿಗೆ ಮಾಲಾರ್ಪಣೆ ಮಾಡಿದ್ದಾರೆ. ಮನೆ-ಮನೆಗೂ ಭೇಟಿ ನೀಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ಸಾಧನೆಗಳು ಮತ್ತು ಯೋಜನೆಗಳ ಬಗ್ಗೆ ತಿಳಿಸುತ್ತಿದ್ದಾರೆ. ಅಭಿಯಾನದ ಭಾಗವಾಗಿ ಸುದ್ದಿಗೋಷ್ಠಿಗಳು, ವಿವಿಧ ಸಮುದಾಯಗಳ ಮುಖಂಡರೊಂದಿಗೆ ಸಂವಾದ, ರೋಡ್ಶೋಗಳು, ಸಾರ್ವಜನಿಕ ಸಭೆಗಳನ್ನು ಆಯೋಜಿಸಲಾಗಿದೆ ಎಂದು ಅವರು ಹೇಳಿದರು.

ರಾಜ್ಯಸರ್ಕಾರ ಮುಸ್ಲೀಮ–ರಿಗೆ ನೀಡಿರುವ ಶೇ 4ರಷ್ಟು ಮೀಸಲಾತಿಯನ್ನು ರದ್ದುಗೊಳಿಸಿರುವ ರಾಜ್ಯ ಸರ್ಕಾರದ ಆದೇಶಕ್ಕೆ ಸುಪ್ರೀಂಕೋರ್ಟ್ ತಾತ್ಕಾಲಿಕ ತಡೆ ನೀಡಿರುವ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಸಂವಿಧಾನದ ಪ್ರಕಾರ ಧರ್ಮದ ಆಧಾರದಡಿ ಮೀಸಲಾತಿ ಒದಗಿಸಲು ಅವಕಾಶವಿಲ್ಲ. ಮುಸ್ಲಿಮರನ್ನು ಓಲೈಕೆ ಮಾಡಲು ಹಿಂದಿನ ಸರ್ಕಾರ ಮೀಸಲಾತಿ ಒದಗಿಸಿತ್ತು. ಮೀಸಲಾತಿ ರದ್ದುಗೊಳಿಸಿದ ನಿರ್ಧಾರಕ್ಕೆ ಬಿಜೆಪಿ ಈಗಲೂ ಬದ್ಧವಾಗಿದೆ. ಮುಸ್ಲಿಮರಿಗೆ ಮೀಸಲಾತಿ ಹೆಚ್ಚಿಸುವುದರಿಂದ ಪರಿಶಿಷ್ಟ ಜಾತಿ–ಪಂಗಡ ಮತ್ತು ಇತರ ವರ್ಗಗಳಿಗೆ ಅನ್ಯಾಯವಾಗಲಿದೆ. ಮೀಸಲಾತಿ ರದ್ದು ಆದೇಶ ತಡೆ ವಿಚಾರವಾಗಿ ರಾಜ್ಯ ಸರ್ಕಾರ ಮತ್ತೊಮ್ಮೆ ಸುಪ್ರೀಂಕೋರ್ಟ್ಗೆ ಮನವಿ ಸಲ್ಲಿಸಲಿದೆ ಎಂದು ಹೇಳಿದರು.

ಕೇಂದ್ರ ಸಚಿವ ರಾಜೀವ್ ಚಂದ್ರಶೇಖರ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರು ನವ ಕರ್ನಾಟಕ ನಿರ್ಮಾಣದ ಸಂಕಲ್ಪವನ್ನು ಹೊಂದಿದ್ದಾರೆ. ಆದರೆ ಕಾಂಗ್ರೆಸ್ ಸುಳ್ಳು, ಒಡೆದಾಳುವ, ದಾರಿತಪ್ಪಿಸುವ, ಒಂದು ಸಮುದಾಯವನ್ನು ಓಲೈಸುವ ಕೆಲಸವನ್ನು ಮಾಡುತ್ತಿದೆ. ಜನರು ಕಾಂಗ್ರೆಸ್ ಪಕ್ಷವನ್ನು ಸಂಪೂರ್ಣ ತಿರಸ್ಕ–ರಿಸಲಿದ್ದಾರೆ ಎಂದು ಹೇಳಿದರು.

# ಖಾನಾಪುರ, ಹಿರೇಬಾಗೇವಾಡಿಯಲ್ಲಿ ಸಿಎಂ ಬೊಮ್ಮಾಯಿ ಪ್ರಚಾರ



ಬೆಳಗಾವಿ: ಕಳೆದ ಬಾರಿ ನಮ್ಮಲ್ಲಿನ ವ್ಯತ್ಯಾಸದಿಂದ ನಾವು ಖಾನಾಪುರ ಕ್ಷೇತ್ರ ಕಳೆದುಕೊಂಡಿದ್ದೆವು. ಇದ–ರಿಂದ ಕ್ಷೇತ್ರ ಸಂಪೂರ್ಣ ಹಿಂದುಳಿದಿದೆ. ಈಗ ತಪ್ಪನ್ನು ತಿದ್ದುಕೊಂಡಿದ್ದೇವೆ. ಈ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬಿಜೆಪಿಗೆ ಮತ ನೀಡಬೇಕು ಎಂದು ಸಿಎಂ ಬಸವರಾಜ ಬೊಮ್ಮಾಯಿ ಅವರು ಹೇಳಿದರು.

ಅವರು ಇಂದು ಖಾನಾಪುರದಲ್ಲಿ ಬಿಜೆಪಿ ಅಭ್ಯರ್ಥಿ ವಿಠಲ ಹಲಗೇಕರ ಪರವಾಗಿ ರೋಡ್ ಶೋ ನಡೆಸಿ ಮಾತನಾಡಿದರು.

ಖಾನಾಪುರ ದಲ್ಲಿ ಬದಲಾವಣೆಯ ಗಾಳಿ ಬೀಸುತ್ತಿದೆ. ಈ ಬಾರಿ 100% ಬಿಜೆಪಿ ವಿಜಯಿ ಆಗ್ತಾರೆ. ನಾನು ವಿಜಯ ಸಂಕಲ್ಪ ಯಾತ್ರೆಗೆ ಬಂದಾಗ ನೀವೆಲ್ಲರೂ ಒಂದು ಸಂಕಲ್ಪ ಮಾಡಿ, ಖಾನಾಪುರ ಅಭಿವೃದ್ಧಿಗೆ ಯಾರಿಗೇ ಟಿಕೆಟ್ ಸಿಕ್ಕರೂ ಒಗ್ಗಟ್ಟಿನಿಂದ ಕೆಲಸ ಮಾಡುವ ಬಗ್ಗೆ ಹೇಳಿದ್ದಿರಿ. ನಿಮ್ಮ ಬೆಂಬಲದಿಂದ ವಿಠಲ ಹಲಗೇಕರ್ ಅವರನ್ನು ಪ್ರಚಂಡ ಬಹುಮತದಿಂದ ಆರಿಸಿ ಕಳುಹಿಸಬೇಕು ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ರಾಜ್ಯಾದ್ಯಂತ ಬಿಜೆಪಿ ಸುನಾಮಿ ಇದೆ**

ನಾನು ರಾಜ್ಯಾದ್ಯಂತ ಪ್ರವಾಸ ಮಾಡಿದ್ದೇನೆ. ಇಡೀ ರಾಜ್ಯದಲ್ಲಿ ಬಿಜೆಪಿ ಸುನಾಮಿ ಇದೆ. ರಾಜ್ಯದಲ್ಲಿ ನೂರಕ್ಕೆ ನೂರು ಬಿಜೆಪಿ ಸರ್ಕಾರ ಬರುತ್ತದೆ. ಜನಪರ ಜನಕಲ್ಯಾಣ ಸರ್ಕಾರವನ್ನು ನಾವು ಸ್ಥಾಪನೆ ಮಾಡುತ್ತೇವೆ. ಅದಕ್ಕಾಗಿ ಖಾನಾಪುರದ ಅಭಿವೃದ್ಧಿಗೆ ಬಿಜೆಪಿಯ ಎಂಎಲ್ಎ ಆಗಬೇಕು. ಇದಕ್ಕಾಗಿ ವಿಠಲ್ ಅವರಿಗೆ ನಿಮ್ಮ ಸಂಪೂರ್ಣ ಬೆಂಬಲ ಕೊಡಬೇಕು ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ವಿಠಲ್ ಅವರು ರೈತ ಸಂಘಟನೆ ಮಾಡಿದವರು**

ವಿಠಲ್ ಅವರು ನಿಮ್ಮ ನಡುವೆ ಇದ್ದು ಬೆಳೆದವರು. ರೈತ ಸಂಘಟನೆ ಮಾಡಿ, ರೈತರ ಪರವಾಗಿ ನಿಂತು ಹೋರಾಟ ಮಾಡಿದವರು. ಸಕ್ಕರೆ ಕಾರ್ಖಾನೆಯನ್ನು ಮಾಡಿ ರೈತರಿಗೆ ಒಳ್ಳೆಯ ದರವನ್ನು ಕೊಟ್ಟು ಹೆಸರುವಾಸಿ ಆದವರು. ಇಂತಹ ಚಿಂತಕರ ಕೈಲಿ ಅಧಿಕಾರ ಬಂದರೆ ರೈತರಿಗಾಗಿ ಬಿಜೆಪಿ ಇನ್ನಷ್ಟು ಉತ್ತಮ ಕೆಲಸಗಳನ್ನು ಮಾಡಬಹುದು. ಬಿಜೆಪಿ ಸರ್ಕಾರ ಕೋವಿಡನ್ನು ಯಶಸ್ವಿಯಾಗಿ ನಿರ್ವಹಣೆ ಮಾಡಿದೆ. ಮೋದಿಯವರು ವ್ಯಾಕ್ಸಿನ್ ಕೊಟ್ಟು ನಮ್ಮ ರಾಜ್ಯವನ್ನು ಕೊವಿಡ್ ಮುಕ್ತ ಮಾಡಿದ್ದಾರೆ. ಅವ–ರಿಗೆ ಕೋಟಿ ಕೋಟಿ ಧನ್ಯವಾದಗಳನ್ನು ಹೇಳುತ್ತೇನೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ಬಿಜೆಪಿ ಸರ್ಕಾರದಿಂದ ಆರ್ಥಿಕ ಸುಧಾರಣೆ ಆಗಿದೆ**

ಪ್ರವಾಹ ಸಂದರ್ಭವನ್ನು ಅತ್ಯಂತ ದಕ್ಷತೆಯಿಂದ ಎದುರಿಸಿದ್ದೀವಿ. ಬೆಳೆ ಪರಿವಾರ ದುಪ್ಪಟ್ಟು ಕೊಟ್ಟಿದ್ದೀವಿ. ಬಿದ್ದ ಮನೆಗೆ ಐದು ಲಕ್ಷ ರೂ.ಪರಿಹಾರ ಕೊಟ್ಟಿದ್ದೇವೆ. ಬೇರೆ ಯಾವುದೇ ರಾಜ್ಯದಲ್ಲಿ ಇಷ್ಟು ಪರಿಹಾರ ನೀಡಿಲ್ಲ. ಇದು ಬಿಜೆಪಿ ಸರ್ಕಾರದಿಂದ ಮಾತ್ರ ಸಾಧ್ಯ. ಆರ್ಥಿಕ ಸುಧಾರಣೆಗೆ ಕೇಂದ್ರ ಸರ್ಕಾರ ಕಿಸಾನ್ ಸಮ್ಮಾನ್ ಯೋಜನೆ ಅಡಿಯಲ್ಲಿ 54 ಲಕ್ಷ ರೈತರಿಗೆ ನೇರವಾಗಿ 16 ಸಾವಿರ ಕೋಟಿ ಅನುದಾನ ನೀಡಿದ್ದಾರೆ. ರಾಜ್ಯದಿಂದಲೂ ಈ ಕೆಲಸ ಆಗಿದೆ. ರೈತರಿಗೆ ಜೀವ ವಿಮೆ ಮಾಡಿಸಿದ್ದೇವೆ. ರೈತರ ಮಕ್ಕಳಿಗೆ ವಿದ್ಯಾನಿಧಿ ಮಾಡಿದ್ದೇವೆ. ಕಾರ್ಮಿಕರು, ನೇಕಾರರು, ಮೀನುಗಾರರ ಮಕ್ಕಳಿಗೆ ವಿದ್ಯಾನಿಧಿ ಯೋಜನೆ ಮಾಡಿದ್ದೇವೆ ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ಅಭಿವೃದ್ಧಿ ನಿಗಮಗಳ ಮೂಲಕ ಸಾಮಾಜಿಕ ನ್ಯಾಯ**

ನಾವು ವೀರಶೈವ, ಮರಾಠ ಅಭಿವೃದ್ಧಿ ನಿಯಮಗಳನ್ನು ಮಾಡಿದ್ದೇವೆ. ಮರಾಠ ಅಭಿವೃದ್ಧಿ ನಿಗಮದ ಮೂಲಕ ಗಂಗಾ ಕಲ್ಯಾಣ ಯೋಜನೆ, ಮರಾಠ ಮಕ್ಕಳಿಗೆ ವಿದ್ಯಾಭ್ಯಾಸಕ್ಕೆ 200 ಕೋಟಿ ರೂ ಪ್ರೋತ್ಸಾಹ ಧನ ನೀಡಿದ್ದೇವೆ. ಮೀನುಗಾರರಿಗೆ, ನೇಕಾರರಿಗೆ, ಹಡಪದ ಸಮಾಜ ಅಭಿವೃದ್ಧಿ ನಿಗಮ ಮಾಡಲಾಗಿದೆ. ಕಾಂಗ್ರೆಸ್ ಅವರು ಸಾಮಾಜಿ–ಕ ನ್ಯಾಯದ ಬಗ್ಗೆ ಭಾಷಣ ಮಾಡುತ್ತಾರೆ. ಆದರೆ ನಿಜವಾದ ನ್ಯಾಯ ಕೊಟ್ಟಿರುವುದು ಬಿಜೆಪಿ ಸರ್ಕಾರ. ನಾವು ಮಾಡಿರುವ ಮೀಸಲಾತಿ ಹೆಚ್ಚಳ ದೇಶದಲ್ಲೇ ಮಾದರಿ ಆಗಿದೆ. ಈ ಮೂಲಕ ಕ್ರಾಂತಿಕಾರಿ ಹೆಜ್ಜೆ ಇಟ್ಟಿದ್ದೀವಿ ಎಂದು ಸಿಎಂ ಬೊಮ್ಮಾಯಿ ಹೇಳಿದರು.

**ಕಾಂಗ್ರೆಸ್ ನ ಗ್ಯಾರಂಟಿ ಕಾರ್ಡ್ ನಂಬಬೇಡಿ**

ಕಾಂಗ್ರೆಸ್ ಅವರು ಈಗ ಗ್ಯಾರಂಟಿ ಕಾರ್ಡ್ ಕೊಡುತ್ತಿದ್ದಾರೆ. ಈಗ 10 ಕೆಜಿ ಅಕ್ಕಿ ಕೊಡುವುದಾಗಿ ಹೇಳುತ್ತಿದ್ದಾರೆ. ಇದನ್ನು ನಾವು ಆಗಲೇ ಮಾಡಿದ್ದೆವು. ಆದರೆ ಸಿದ್ದರಾಮಯ್ಯ ಅದನ್ನು5 ಕೆಜಿಗೆ ಇಳಿಸಿದರು. ಈಗ ಮತ್ತೆ 10 ಕೆಜಿ ಅಂತಿದಾರೆ. ರಾಹುಲ್ ಗಾಂಧಿ ರಾಜಸ್ತಾನ, ಛತ್ತೀಸ್ ಘಡ ಚುನಾವಣೆಯಲ್ಲಿ ಹತ್ತು ದಿನಗಳಲ್ಲಿ ಎಲ್ಲ ಭರವಸೆ ಈಡೇರಿಸುತ್ತೇವೆ ಅಂತ ಹೇಳಿದ್ದರು. ಆದರೆ, ಇದುವರೆಗೂ ಯಾವುದೇ ಬೇಡಿಕೆ ಈಡೇರಿಸಿಲ್ಲ. ಅವರು ಜನರಿಗೆ ಮೋಸ ಮಾಡ್ತಿದ್ದಾರೆ. ಭ್ರಷ್ಟ ಕಾಂಗ್ರೆಸ್ ನಂಬಬೇಡಿ ಎಂದು ಹೇಳಿದರು.

## ನಾಮಪತ್ರ ಹಿಂಪಡೆದ ಜೆಡಿಎಸ್ ಅಭ್ಯರ್ಥಿಯನ್ನು ಪಕ್ಷದಿಂದ ಉಚ್ಚಾಟಿಸಲು ತೀರ್ಮಾನ



ಬೆಳಗಾವಿ: ನಾಮಪತ್ರ ಹಿಂದಕ್ಕೆ ಪಡೆದಿರುವ ಗೋಕಾಕ್ ಜೆಡಿ–ಎಸ್ ಅಭ್ಯರ್ಥಿ ಚಂದನ್ ಗಿಡ್ಡನವರ್ ಕಾಂಗ್ರೆಸ್ ಜೊತೆ ಕೈ ಜೋಡಿಸಿದ್ದಾರೆ ಎಂದಿರುವ ಜೆಡಿ–ಎಸ್, ಪಕ್ಷದ ನಾಯಕ–ರಿಗೆ ಹೇಳದೇ ನಾಮಪತ್ರ ಹಿಂಪಡೆದಿರುವ ಹಿನ್ನೆಲೆಯಲ್ಲಿ ಅವರನ್ನು ಪಕ್ಷದಿಂದ ಉಚ್ಚಾಟನೆ ಮಾಡಲಾಗುವುದು ಎಂದು ತಿಳಿಸಿದೆ.

## ಉಚಿತ ಆರೋಗ್ಯ ತಪಾಸಣಾ ಶಿಬಿರ

ಬೆಳಗಾವಿ: ಚಿಕ್ಕೋಡಿಯ ಪಟ್ಟಣದ ಕೆ.ಎಲ್.ಇ ಆಯುರ್ವೇದ ಆಸ್ಪತ್ರೆಯ ವತಿಯಿಂದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ದಿ. ಬುಧವಾರ 26ನೇ ಏಪ್ರಿಲ್2023ರಿಂದ01ನೇ ಮೇ 2023 ರವರೆಗೆ ಮುಂಜಾನೆ 9–00ರಿಂದ ಸಂಜೆ5–00ರವರೆಗೆ ಹಮ್ಮಿಕೊಂಡಿದ್ದು ತಜ್ಞ ಆಯುರ್ವೇದ ವೈದ್ಯರು ಶಿಬಿರದಲ್ಲಿ ಶ್ವಾಸಕೋಶ, ಲಿವರ್ ಸಂಬಂಧಿ ಕಾಯಿಲೆಗಳು, ಕಣ್ಣು, ಕಿವಿ, ಮೂಗು, ಸಂಧಿವಾತ, ಬೆನ್ನು ನೋವು, ಮೂತ್ರ ಹರಳು, ಪ್ರೊಸ್ಟೆಟಗ್ರಂಥಿಯ ಊತ, ಮೂಲವ್ಯಾಧಿ, ಚರ್ಮರೋಗ, ಸ್ತ್ರೀ ರೋಗ ಮತ್ತುಚಿಕ್ಕ ಮಕ್ಕಳ ತೊಂದರೆ ಇರುವ ರೋಗಿಗಳನ್ನು ತಪಾಸಿಸಿ ಸೂಕ್ತ ಚಿಕಿತ್ಸೆ ಮತ್ತು ಪಂಚಕರ್ಮ ಸಲಹೆಗಳನ್ನು ನೀಡುತ್ತಾರೆ.

ಸಾರ್ವಜನಿಕರು ಈ ಶಿಬಿರದ ಸದುಪಯೋಗ ಪಡೆದು ಕೊಳ್ಳಬೇಕೆಂದು ವೈದ್ಯಕೀಯ ನಿರ್ದೇಶಕರಾದಡಾ. ಕಿರಣ ಮುತ್ನಾಳಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಅಧಿಕ ಮಾಹಿತಿಗಾಗಿ ಸಂಪರ್ಕಿಸಿ 9945779554.

## ಅಕ್ರಮವಾಗಿ ಮದ್ಯ ವಶ

ಬೆಳಗಾವಿ: ಬೆಳಗಾವಿ ತಾಲೂಕಿನ ಬಹದ್ದೂರವಾಡಿ ಕ್ರಾಸ್ ಹತ್ತಿರ ಇರುವ ಮರಾಠಾ ಮಂಡಳ ಶಾಲೆಯ ಮುಂಬಾಗದ ರಸ್ತೆಯಲ್ಲಿ ರಸ್ತೆಗಾವಲು ಮಾಡುತ್ತಿರುವಾಗ ಒಂದು ಬಿಳಿ ಬಣ್ಣದ ಮಹೇಂದ್ರಾ ವೇರಿಟೊ ನಾಲ್ಕು ಚಕ್ರ ವಾಹನ ಸಂಖ್ಯೆ ಕೆಎ–22 ಬಿ–8630 ನೇದ್ದರ ವಾಹನವನ್ನು ತಪಾಸಣೆ ಮಾಡಿದಾಗ ವಾಹನದಲ್ಲಿ ಗೋವಾ ರಾಜ್ಯದಲ್ಲಿ ಮಾರಾಟಕ್ಕೆ ಅಂತಾ ನಮೂದಿರುವ ವಿವಿದ ನಮೂನೆಯ ಒಟ್ಟು 105.750 ಲೀಟರ ಗೋವಾ ಮದ್ಯವನ್ನು ತಾಬಾ ಹೊಂದಿ ಅಕ್ರಮವಾಗಿ ಸಾಗಾಣಿಕೆ ಮಾಡುತ್ತಿರುವುದು ಏಪ್ರಿಲ್.25 2023 ರಂದು ಬೆಳಿಗ್ಗೆ 5.30 ಗಂಟೆಗೆ ಪತ್ತೆಯಾಗಿರುತ್ತದೆ.

ಎ1 ಆರೋಪಿತನು ಓಡಿ ಹೋಗಿ ಪರಾ–ರಿಯಾಗಿದ್ದು, ಪತ್ತೆ ಹಚ್ಚಿ ಬಂಧಿಸಬೇಕಾಗಿದೆ. ಎ–2 ಒಂದು ಬಿಳಿ ಬಣ್ಣದ ಮಹೇಂದ್ರಾ ವೇರಿಟೊ ನಾಲ್ಕು ಚಕ್ರ ವಾಹನ ಸಂಖ್ಯೆ ಕೆಎ–22 ಬಿ–8630 ನೇದ್ದರ ವಾಹನದ ಮಾಲೀಕನನ್ನು ಪತ್ತೆ ಹಚ್ಚಿ ಬಂಧಿಸಬೇಕಾಗಿದೆ. ಗುನ್ನೆಯ ಮುಂದಿನ ಕ್ರಮಕ್ಕಾಗಿ ವಾಹನ ಹಾಗೂ ಮುದ್ದೆಮಾಲನ್ನು ಪಂಚನಾಮೆ ಪ್ರಕಾರ ಜಪ್ತು ಮಾಡಿಕೊಂಡು ಸರ್ಕಾರದ ವಶಕ್ಕೆ ತೆಗೆದುಕೊಳ್ಳಲಾಗಿದೆ.

ಸದರಿ ದಾಳಿಯನ್ನು ಅಬಕಾರಿ ಅಪರ ಆಯುಕ್ತರಾದ ಮೋಹನಕುಮಾರ ಎಲ್.ಎನ್, ಅಬಕಾರಿ ಜಂಟಿ ಆಯುಕ್ತರಾದ ಫೀರೋಜಖಾನ ಕಿಲ್ಲೇದಾರ , ಅಬಕಾರಿ ಉಪ ಆಯುಕ್ತರು ಕುಮಾರಿ ವನಜಾಕ್ಷಿ.ಎಂ, ಹಾಗೂ ಬೆಳಗಾವಿ ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರು ರವಿ ಎಂ ಮುರಗೋಡ, ಬೆಳಗಾವಿರವರ ಮಾರ್ಗದರ್ಶನದಲ್ಲಿ ಅಬಕಾರಿ ನಿರೀಕ್ಷಕರು ಮಂಜುನಾಥ ಮೆಳ್ಳಿಗೇರಿ, ಬೆಳಗಾವಿ ವಲಯ ನಂ–2, ಇವರು ಪ್ರಕರಣವನ್ನು ದಾಖಲಿಸಿಕೊಂಡಿರುತ್ತಾರೆ. ಸದರಿ ದಾಳಿಯಲ್ಲಿ ಅಬಕಾರಿ ಉಪ ನಿರೀಕ್ಷಕರಾದ ಜ್ಯೋತಿ ಎಸ್.ಕೆ, , ಆನಂದ ಪಾಟೀಲ, ಅಬಕಾರಿ ಪೇದೆ ವಿನಾಯಕ ಬೋರನ್ನವರ, ಸಂತೋಷ ದೊಡಮನಿ, ದಾಳಿಯಲ್ಲಿ ಪಾಲ್ಗೊಂಡಿರುತ್ತಾರೆ. ಸದರ ಗುನ್ನೆಯಲ್ಲಿ ಜಪ್ತುಪಡಿಸಿದ ವಾಹನ ರೂ: 5,00,000/– ಹಾಗೂ ಮುದ್ದೆಮಾಲು 1,71,454/– ಹೀಗೆ ಒಟ್ಟು ಮೌಲ್ಯ ರೂ. 6,71,454/– ಆಗುತ್ತದೆ ಎಂದು ಬೆಳಗಾವಿ ಉಪ ವಿಭಾಗದ ಅಬಕಾರಿ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯಾವ ನೈತಿಕತೆಯಿಂದ ಮತ ಕೇಳ್ತೀರಿ? ಕಾಂಗ್ರೆಸ್, ಎನ್ ಸಿಪಿಗೆ ಕೇಂದ್ರ ಸಚಿವೆ ಸ್ಮೃತಿ ಇರಾನಿ ಪ್ರಶ್ನೆ; ಸಚಿವೆ ಶಶಿಕಲಾ ಜೊಲ್ಲೆ ಪರ ಸ್ಮೃತಿ ಇರಾನಿ ಭರ್ಜರಿ ಪ್ರಚಾರ

ಚಿಕ್ಕೋಡಿ: ಕೊರೊನಾ ಸಂದರ್ಭದಲ್ಲಿ ಜನರ ಸಂಕಷ್ಟ ನೀಗಿಸಿದ್ದು ಬಿಜೆಪಿ ಹೊರತು ಕಾಂಗ್ರೆಸ್. ಎನ್ ಸಿಪಿ ಅಲ್ಲ. ಯಾವ ನೈತಿಕತೆಯಿಂದ ಜನರ ಬಳಿ ಮತ ಕೇಳತೀರಾ ಎಂದು ಕೇಂದ್ರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಸ್ಮೃತಿ ಇರಾನಿ ಕಾಂಗ್ರೆಸ್ ಮತ್ತು ಎನ್ ಸಿಪಿ ನಾಯಕರ ವಿರುದ್ಧ ಹರಿಹಾಯ್ದರು.

ನಿಪ್ಪಾಣಿ ವಿಧಾನಸಭೆ ಬಿಜೆಪಿ ಅಭ್ಯರ್ಥಿ ಸಚಿವೆ ಶಶಿಕಲಾ ಜೊಲ್ಲೆ ಪರ ಪ್ರಚಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ನಿಪ್ಪಾಣಿ ಕ್ಷೇತ್ರದಲ್ಲಿ



ಹೆಚ್ಚಿಗೆ ರೈತರು ಇದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಪ್ರತಿ ರೈತರಿಗೆ 10 ಸಾವಿರ ರೂ ಪರಿಹಾರ ನೀಡಿದ್ದಾರೆ. ಮಹಿಳೆಯರ ಸಬಲಿಕರಣವಾಗಲು ಅನೇಕ ಯೋಜನೆಗಳನ್ನು ಬಿಜೆಪಿ ರೂಪಿಸಿದೆ ಎಂದರು.

ದಲಿತರ ವಿರೋಧಿ ಎಂದು ಕಾಂಗ್ರೆಸ್ ಆರೋಪಿಸುತ್ತಾ ಬಂದಿದೆ. ಆದ–'ರೆ ದಲಿತರನ್ನು ರಾಷ್ಟ್ರಪತಿ ಮಾಡಿದ್ದು ಬಿಜೆಪಿ ಎಂಬ ಹೆಗ್ಗಳಿಕೆ ಇದೆ. ಆಧಿವಾಸಿ ಮಹಿಳೆಗೆ ರಾಷ್ಟ್ರಪತಿ ನೀಡಿ ಮಹಿಳೆಯರ ಗೌರವ ಹೆಚ್ಚಿಸಿದೆ ಎಂದರು. ಕೋವಿಡ್ ವ್ಯಾಕ್ಸಿನ್ ವನ್ನು ವಿದೇಶಿದಿಂದ ತನ್ನಿ ಎಂದು ಕಾಂಗ್ರೆಸ್ ನಾಯಕರು ಹೇಳಿದರು. ಆದರೆ ಭಾರತದಲ್ಲಿ ವ್ಯಾಕ್ಸಿನ್ ತಯಾರಿಸಿ ಇಡೀ ವಿಶ್ವಕ್ಕೆ ಹಂಚಿದೆ. ಡಿ.ಕೆ.ಶಿವಕುಮಾರ, ಸಿದ್ದರಾಮಯ್ಯ ಇದ್ದರೆ ಉಚಿತವಾಗಿ ವ್ಯಾಕ್ಸಿನ್ ನೀಡುತ್ತಿರಲಿಲ್ಲ ಎಂದರು.

# ಪಾದಯಾತ್ರೆ ಮೂಲಕ ಮತಯಾಚನೆ ಮಾಡಿದ ರಮೇಶ ಜಾರಕಿಹೊಳಿ ಮನವಿ

ಗೋಕಾಕ: ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಬರುವ ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಅಮೂಲ್ಯವಾದ ಮತಗಳನ್ನು ನೀಡಿ ನನ್ನನ್ನು ಆಯ್ಕೆ ಮಾಡುವಂತೆ ಬಿಜೆಪಿ ಪಕ್ಷದ ಅಭ್ಯರ್ಥಿ ರಮೇಶ ಜಾರಕಿಹೊಳಿ ಮನವಿ ಮಾಡಿದರು.

ಮಂಗಳವಾರದಂದು ನಗರದ ಕುರುಬರುದಡ್ಡಿಯಲ್ಲಿ ಪಾದಯಾತ್ರೆ ಮೂಲಕ ಮನೆ, ಮನೆಗೆ ತೆರಳಿ ಮತಯಾಚನೆ ಮಾಡಿ ಮಾತನಾಡಿದ ಅವರು ನಿಮ್ಮೆಲ್ಲರ ಆರ್ಶಿವಾದದಿಂದ 6 ಬಾರಿ ಶಾಸಕನಾಗಿ ಆಯ್ಕೆಯಾಗಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಿದ್ದೇನೆ.

ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯ ಮಾಡಲು ಈ ಬಾರಿಯು ನನ್ನನ್ನು ಆಶೀರ್ವಾದಿಸುವಂತೆ ಮನವಿ ಮಾಡಿದರು.

ಈಗಾಗಲೇ ಕ್ಷೇತ್ರದ ಅಭಿವೃದ್ಧಿಗೆ ಹತ್ತು ಹಲವಾರು ಯೋಜನೆಗಳನ್ನು ಅನುಷ್ಠಾನಗೊಳಿಸಿ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುತ್ತ ಬಂದಿದ್ದೇನೆ. ರಾಜ್ಯದಲ್ಲಿ ಮತ್ತೊಮ್ಮೆ ಬಿಜೆಪಿ ಸರಕಾರ ಅಧಿಕಾರಕ್ಕೆ ತರಲು ಬಿಜೆಪಿಗೆ ಮತ ನೀಡುವಂತೆ ವಿನಂತಿಸಿದರು.

ಈ ಸಂದರ್ಭದಲ್ಲಿ ವಿಧಾನ



ಪರಿಷತ್ ಸದಸ್ಯ ಗೋಪಿಚಂದ ಪಡಲಕರ, ನಗರಸಭೆ ಅಧ್ಯಕ್ಷ ಜಯಾನಂದ ಹುಣ್ಣಚ್ಯಾಳಿ, ನಗರಸಭೆ ಸ್ಥಾಯಿ ಸಮಿತಿ ಚೆರಮನ್ ಸಿದ್ದಪ್ಪ ಹುಚ್ಚರಾಮಗೋಳ, ಅಮರನಾಥ ಜಾರಕಿಹೊಳಿ, ಕೆಂಚಪ್ಪ ಗೌಡರ, ದೇವಪ್ಪ ಗುಡಗುಡಿ, ರಾಯಪ್ಪ ಗೋಟೇನ್ನವರ, ಉದ್ದಪ್ಪ ಗುಡಗುಡಿ, ನಗರ ಘಟಕದ ಅಧ್ಯಕ್ಷ ಭೀಮಶಿ ಭರಮನ್ನವರ, ಗ್ರಾಮೀಣ ಘಟಕದ ಅಧ್ಯಕ್ಷ ರಾಜೇಂದ್ರ ಗೌಡಪ್ಪಗೋಳ, ಪದಾಧಿಕಾರಿಗಳಾದ ಶಾಮಾನಂದ ಪೂಜೇರಿ, ಬಸವರಾಜ ಹಿರೇಮಠ, ಲಕ್ಷ್ಮಣ ಖಡಕಬಾವಿ, ಜ್ಯೋತಿ ಕೋಲಾರ, ರಾಜೇಶ್ವರಿ ಒಡೆಯರ್, ಕುಸುಮಾ ಖನಗಾಂವಿ, ಶ್ರೀದೇವಿ ತಡಕೋಡ, ಮುಖಂಡರಾದ ಮಡೆಪ್ಪ ತೋಳಿನವರ, ಟಿ.ಆರ್. ಕಾಗಲ್, ಕುತಬುದ್ದಿನ ಗೋಕಾಕ, ಜಾವೇದ್ ಗೋಕಾಕ, ಪ್ರಭು ಚವ್ಹಾಣ, ಜ್ಯೋತಿಬಾ ಸುಭಂಜಿ, ಪರಶುರಾಮ ಭಗತ್, ಚಿತೇಂದ್ರ ಮಾಂಗಳೇಕರ, ಅಶೋಕ ಪಾಟೀಲ, ಬಸವರಾಜ ಕತ್ತಿ, ಬಸವರಾಜ ಉನ್ನಿ, ಅಬ್ದುಲರಹೆಮಾನ ದೇಸಾಯಿ, ಮೋಶಿನ ಖೋಜಾ, ಯೂಸುಫ್ ಅಂಕಲಗಿ, ಎಂ.ಜಿ.ಮುಜಾವರ, ಅಡಿವೆಪ್ಪ ಕಿತ್ತೂರ, ಭಸವಂತಪ್ಪ ಉಳ್ಳಾಗಡ್ಡಿ, ಕಾಡಪ್ಪ ಮೇಸ್ತ್ರಿ, ತಳದಪ್ಪ ಅಮ್ಮಣಗಿ, ಅಶೋಕ್ ರಾಠೋಡ, ಲಕ್ಷ್ಮಣ ಯಮಕನಮರಡಿ, ದರ್ಶನ ತುರಾಯಿದಾರ, ಅನಿಲ ತುರಾಯಿದಾರ, ದುರ್ಗಪ್ಪ ಶಾಸ್ತ್ರಿಗೋಲ್ಲರ, ಶ್ರೀಶೈಲ ಪೂಜಾರಿ ಉಪಸ್ಥಿತರಿದ್ದರು.

# ಸಾಮೂಹಿಕ ವಿವಾಹದಲ್ಲಿ ವಧುಗಳಿಗೆ ಪ್ರಗ್ನೆನ್ಸಿ ಟೆಸ್ಟ್: ಹಲವರು ಗರ್ಭಿಣಿಯರು

ಭೋಪಾಲ್: ಮಧ್ಯ ಪ್ರದೇಶದ ಸಾಮೂಹಿಕ ವಿವಾಹ ಕಾರ್ಯಕ್ರಮ ಭಾರಿ ವಿವಾದ ಸೃಷ್ಟಿ ಮಾಡಿದ್ದು, ಕಾರ್ಯಕ್ರಮದ ವಿರುದ್ಧ ವ್ಯಾಪಕ ಆಕ್ರೋಶ ವ್ಯಕ್ತವಾಗುತ್ತಿದೆ.

ಮಧ್ಯ ಪ್ರದೇಶದ 'ಮುಖ್ಯಮಂತ್ರಿ ಕನ್ಯಾ ವಿವಾಹ' ಯೋಜನೆ ಯಡಿಯಲ್ಲಿ ವಿವಾಹವಾಗಲು ಆಯ್ಕೆಯಾದ ವಧುಗಳಿಗೆ ಮದುವೆಗೆ ಮುಂಚೆ ಗರ್ಭಧಾರಣೆ ಪರೀಕ್ಷೆ ನಡೆಸಲಾಗಿದೆ ಎಂಬುವುದು ಆ ರಾಜ್ಯದಲ್ಲಿ ವಿವಾದದ ಸ್ವರೂಪ ಪಡೆದಿದೆ. ವಿಶೇಷವೆಂದರೆ ಈ ಯೋಜನೆಯಲ್ಲಿ ಮದುವೆಯಾಗಲು ಬಂದಿದ್ದ ನಾಲ್ವರು ಯುವತಿಯರು ಗರ್ಭಿಣಿಯರಾಗಿದ್ದು ತಿಳಿದು ಬಂದಿದೆ.

ಮುಖ್ಯಮಂತ್ರಿ ಕನ್ಯಾ ವಿವಾಹ ಯೋಜನೆಯಡಿ 220 ಬಾಲಕಿಯರ



ಸಾಮೂಹಿಕ ವಿವಾಹವನ್ನು ಶನಿವಾರ ದಿಂಡೋರಿ ಜಿಲ್ಲೆಯ ಗಡ್ಸರಾಯ್ ಪ್ರದೇಶದಲ್ಲಿ ಆಯೋಜಿಸಲಾಗಿತ್ತು. ಗರ್ಭಧಾರಣೆ ಪರೀಕ್ಷೆ ಅಂಗವಾಗಿ ಮೂತ್ರ ಪರೀಕ್ಷೆಯ ಫಲಿತಾಂಶದ ಪ್ರಕಾರ ಐದು ಹೆಣ್ಣುಮಕ್ಕಳು ಗರ್ಭಿಣಿ ಯಾಗಿರುವುದರಿಂದ ಅವರ ವಿವಾಹವನ್ನು ನೆರವೇರಿಸಲಾಗಿಲ್ಲ ಎಂದು ತಿಳಿದುಬಂದಿದೆ. ಇದೀಗ ಮದುವೆಯಾಗದ ಯುವತಿಯರು ಇದೀಗ ಕಾರ್ಯಕ್ರಮ ಆಯೋಜಕರ ವಿರುದ್ಧ ತಿರುಗಿಬಿದ್ದಿದ್ದಾರೆ.

'ನಾನು ಮದುವೆಗೆ ಎಲ್ಲ ರೀತಿಯ ತಯಾರಿ ನಡೆಸಿದ್ದೆ. ಆದ–'ರೆ, ಪಟ್ಟಿಯಲ್ಲಿ ನನ್ನ ಹೆಸರೇ ಇರಲಿಲ್ಲ. ನಾನು ಮದುವೆಯಾಗುವ ವ್ಯಕ್ತಿಯೊಡನೆ ವಾಸಿಸುತ್ತಿದ್ದೇನೆ. ವೈದ್ಯಕೀಯ ಪರೀಕ್ಷೆ ವೇಳೆ ನಾನು ಗರ್ಭಿಣಿಯಾಗಿರುವುದು ಕಂಡು ಬಂದಿದೆ. ಇದೇ ಕಾರಣಕ್ಕೆ ನನ್ನ ಹೆಸರನ್ನು ಪಟ್ಟಿಯಿಂದ ತೆಗೆದು ಹಾಕಲಾಗಿದೆ' ಎಂದು ಮುಖ್ಯಮಂತ್ರಿ ಕನ್ಯಾ ವಿವಾಹ ಯೋಜನೆಯಡಿ ಆಯ್ಕೆಯಾಗಿ ಕೊನೆಗೆ ತಿರಸ್ಕೃತರಾದ ವಧುವೊಬ್ಬರು ಹೇಳಿದ್ದಾರೆ.

ಬಡ ಕುಟುಂಬದ ಹೆಣ್ಣು ಮಕ್ಕಳಿಗೆ ಪ್ರಯೋಜನವಾಗುವಂತೆ ಈ ಯೋಜನೆಯನ್ನು ತಂದಿದ್ದು, ಸಾಮೂಹಿಕ ವಿವಾಹವಾದ ದಂಪತಿಗಳಿಗೆ ನಗದು ಮತ್ತು ಗೃಹಬಳಕೆಯ ವಸ್ತುಗಳನ್ನು ನೀಡಲಾಗುತ್ತದೆ. ಇದೇ ಕಾರಣ–ಕ್ಕಾಗಿ ನೂರಾರು ಕನ್ಯೆಯರು ವಿವಾಹ ನೋಂದಣಿ ಮಾಡಿಸಿದ್ದು, ಇದೀಗ ಈ ಕಾರ್ಯಕ್ರಮ ವ್ಯಾಪಕ ವಿರೋಧಕ್ಕೆ ಕಾರಣವಾಗಿದೆ.

## ಮಾರುತಿ ದೇಗುಲಕ್ಕೆ ಪುತ್ಥಳಿ ಕೊಡುಗೆ ನೀಡಿದ ಜೈ ಶ್ರೀರಾಮ ಗೆಳೆಯರ ಬಳಗ



ಬೈಲಹೊಂಗಲ: ತಾಲೂಕಿನ ಗಿರಿಯಾಲ ಗ್ರಾಮದಲ್ಲಿ ನೂತನವಾಗಿ ಜೀರ್ಣೋದ್ಧಾರಗೊಂಡಿರುವ ಶ್ರೀ ಮಾರುತಿ ದೇವಸ್ಥಾನಕ್ಕೆ ಜೈ ಶ್ರೀರಾಮ ಗೆಳೆಯರ ಬಳಗ ಹೊಸ ಕೊಡುಗೆ ನೀಡಿದೆ.

ಬಸವ ಜಯಂತಿಯ ನಿಮಿತ್ತ ಜೈ ಶ್ರೀರಾಮ ಗೆಳೆಯರ ಬಳಗದವರು ಶ್ರೀ ರಾಮ, ಲಕ್ಷ್ಮಣ ಹಾಗೂ ಸೀತಾ ದೇವಿಯನ್ನು ಒಳಗೊಂಡಿರುವ ಪುತ್ಥಳಿ ನಿರ್ಮಿಸಿ, ದೇವಸ್ಥಾನಕ್ಕೆ ಭಕ್ತಿಪೂರ್ವಕವಾಗಿ ಅರ್ಪಣೆ ಮಾಡಿದರು.

ಈ ವೇಳೆ ಗ್ರಾಮದಲ್ಲಿ ಅದ್ದೂರಿಯಾಗಿ ದೇವರ ಮೂರ್ತಿಯ ಮೆರವಣಿಗೆ ನಡೆಸಲಾಯಿತು. ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಗಂಗಪ್ಪ ಇಟಗಿ, ಹಿರಿಯರಾದ ಬಸಪ್ಪ ಹೊಸಮನಿ, ರಾಚಪ್ಪ ಇಟಗಿ ಶ್ರೀ ಸಿದ್ದಪ್ಪ ಗುಂಡ್ಲೂರ ಅವರ ನೇತೃತ್ವದಲ್ಲಿ ಎಲ್ಲ ಯುವಕರು ಉಪಸ್ಥಿತರಿದ್ದರು.

## ಚುನಾವಣೆ ಕಚೇರಿಯನ್ನು ಹಾಗೂ ಪ್ರಚಾರ ಅನುಮತಿ ಪಡೆದ ವೈಕಲಗಳಿಗೆ ಪೂಜೆ ಸಲ್ಲಿಸಿ ಬಿಡುಗಡೆಗೊಳಿಸಿ ಅಭ್ಯರ್ಥಿ ವಿಠಲ



ಬೆಳಗಾವಿ : ಖಾನಾಪುರ್ ವಿಠಲ್ ಹಲಗೇಕಾರ್ ಖಾನಾಪುರದ ಬಿಜೆಪಿ ಅಭ್ಯರ್ಥಿಯಾಗಿ 2023ರ ಚುನಾವಣೆ ಗೆ ಸ್ಪರ್ಧಿಸುತ್ತಿದ್ದು.

ಖಾನಾಪುರ್ ನಗರದಲ್ಲಿ ಬಿಜೆಪಿ ಕಾರ್ಯಕರ್ತರ ರೊಂದಿಗೆ ವಿಠ್ಠಲ್ ಸೋಮನಾಥ್ ಹಲಗೇಕರ್ ಮಂಗಳವಾರ ನೂತನ ಚುನಾವಣೆ ಕಚೇ–ರಿಯನ್ನು ಹಾಗೂ ಪ್ರಚಾರ ಅನುಮತಿ ಪಡೆದ ವೈಕಲಗಳಿಗೆ ಪೂಜೆ ಸಲ್ಲಿಸಿ ಬಿಡುಗಡೆಗೊಳಿಸಿ ಉದ್ಘಾಟಿಸಿದರು.

ಇವತ್ತಿನ ರಾಲಿ ಗಲ್ಲುಗಂಜಿ ಪಾರಿಷ್ವಾಡ್ ಮಾರ್ಗವಾಗಿ ಕಾರ್ಯಕರ್ತರ ಮತಯಾಚನೆ ರ್ಯಾಲಿ ಹಮ್ಮಿಕೊಂಡಿದ್ದು ಈ ರ್ಯಾಲಿಯಲ್ಲಿ ಮುಖ್ಯಮಂತ್ರಿ ಬಸವರಾಜ್ ಬೊಮ್ಮಾಯಿ ಮತ್ತು ಜಿಲ್ಲಾಧ್ಯಕ್ಷರುಗಳು ಕಾರ್ಯಕರ್ತರು ಭಾಗವಹಿಸುವರು ಬಿಡಿಯಲ್ಲಿ ನಡೆಯುತ್ತಿರುವ ಬಿಜೆಪಿಯ ಸಭೆಯಲ್ಲಿ ಭಾಗವಹಿಸುವರು ಎಂದು ಖಾನಾಪುರ ಮತಕ್ಷೇತ್ರದ ಅಧಿಕೃತ ಬಿಜೆಪಿ ಅಭ್ಯರ್ಥಿಯಾದ ವಿಠಲ ಹಲಗೇಕಾರ್ ಹೇಳಿದರು ಹಿತವೇಳೆ ಧನ್ಯಶ್ರೀ ಬಿಜೆಪಿ ಮುಖಂಡ ಬಿಜೆಪಿ ಅಭ್ಯರ್ಥಿಯಾದ ವಿಠ್ಠಲ್ ಹಾಲಿಗೆಕರಗೆ ಸ್ವೀಟ್ ತಿಳಿಸುವ ಮುಖಾಂತರ ಸಂಭ್ರಮಿಸಿದರು.

ಈ ವೇಳೆ ಉಜ್ವಲಾ ಬಡವಾನೆಚ್ಚಿ ಧನ್ಯ ಶ್ರೀ ಸರ ದೇಸಾಯಿ ಹಾಗೂ ಪ್ರಮುಖರು ಬಿಜೆಪಿ ಕಾರ್ಯಕರ್ತರು ಉಪಸ್ಥಿತರಿದ್ದರು.

## ರವಿ ಪಾಟೀಲ್ ಸೈನಿಕ ನಗರದಲ್ಲಿ ಮತಯಾಚನೆ



ಬೆಳಗಾವಿ ವಿಧಾನ ಸಭಾ ಉತ್ತರ ವಿ ಧ ಾ ನ ಸ ಭ ಾ ಕ್ಷೇತ್ರದ ಭಾರತೀಯ ಜನತಾ ಪಾರ್ಟಿ ಅಧಿಕೃತ ಅಭ್ಯರ್ಥಿ ಡಾ ರವಿ ಪಾಟೀಲ್ ಸೈನಿಕರಿಗೆ ತಮ್ಮಗೌರವ ಸಮರ್ಪಿಸಿದರು.

ಕ್ಷೇತ್ರದ ಸೈನಿಕ ನಗರದಲ್ಲಿ ಸೈನಿಕರು ಹಾಗೂ ಅವರ ಕುಟುಂಬ ವರ್ಗವನ್ನು ಭೇಟಿ ಮಾಡಿದ ಬಿಜೆಪಿ ಅಭ್ಯರ್ಥಿ ಸೈನಿಕ ನಗರದಲ್ಲಿರುವ ಮೂಲಭೂತ ಸೌಕರ್ಯಗಳ ಕುರಿತು ಚರ್ಚಿಸಿದರು ಸೈನಿಕ ನಗರ ಪರಿಸರದಲ್ಲಿ ಹೆಚ್ಚಿನ ಅಭಿವೃದ್ಧಿಗೆ ಸ್ಪಂದಿಸುವುದಾಗಿ ಭರವಸೆ ನೀಡಿದ ಅವರು ತಮ್ಮ ಪರ ಮತ ಚಲಾಯಿಸುವಂತೆ ಸೈನಿಕ ನಗರದ ನಿವಾಸಿಗಳಲ್ಲಿ ಮನವಿ ಮಾಡಿದರು.

## ಚುನಾವಣೆ: ಅಭ್ಯರ್ಥಿಗಳ ಲೆಕ್ಕಪತ್ರ ಪರಿಶೀಲನೆ: ದಿನಾಂಕ ನಿಗದಿ

ಬೆಳಗಾವಿ: ವಿಧಾನಸಭಾ 13 ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದಿಂದ ಕರ್ನಾಟಕ ವಿಧಾನ ಸಭೆಗೆ ನಡೆಸಲಾಗುತ್ತಿರುವ ಚುನಾವಣೆಯಲ್ಲಿ ಸ್ಪರ್ಧಿಸಿರುವ ಎಲ್ಲ ಉಮೇದುವಾರರು ತಮ್ಮ ಚುನಾವಣಾ ವೆಚ್ಚದ ಲೆಕ್ಕಪತ್ರಗಳನ್ನು ಚುನಾವಣಾ ವೆಚ್ಚದ ತಂಡಕ್ಕೆ ನಿಯಮಿತ ದಿನಾಂಕದಂದು ಸಲ್ಲಿಸಬೇಕಾಗುತ್ತದೆ.

ಉಮೇದುವಾರರು ಅಥವಾ ಅವರ ಚುನಾವಣಾ ಏಜೆಂಟ–ರು ಅಥವಾ ಉಮೇದುವಾರರಿಂದ ಅಧಿಕೃತಗೊಳಿಸಿದ ವ್ಯಕ್ತಿಯು, ಏಪ್ರಿಲ್.27, ಮೇ.2, ಮೇ.6 2023, ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 05 ಗಂಟೆಯವರೆಗೆ, ಬೆಳಗಾವಿ ತಾಲೂಕು ಪಂಚಾಯತಿ ಕಛೇರಿಯಲ್ಲಿನ ಸಹಾಯಕ ವೆಚ್ಚ ವೀಕ್ಷಕರ ಕಛೇರಿಯಲ್ಲಿ ತಂಡದ ಮುಖ್ಯಸ್ಥರನ್ನು ಲೆಕ್ಕಪತ್ರಗಳ ಎ, ಬಿ, ಸಿ ರಜಿಸ್ಟರ್‌ಗಳು ಮತ್ತು ಲೆಕ್ಕಪತ್ರ ದಾಖಲೆಗಳೊಂದಿಗೆ ಬಂದು ತಪಾಸಣೆಗೆ ಒಳಪಡಿಸುವುದು ಕಡ್ಡಾಯವಾಗಿದೆ ಎಂದು ಚುನಾವಣಾಧಿಕಾರಿ ಹಾಗೂ 13–ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರ ಹಾಗೂ ಆಯುಕ್ತರು, ಬುಡಾ, ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾಜಿ ಸಚಿವ ಇನಾಮದಾರ ಇನ್ನಿಲ್ಲ



ಕಿತ್ತೂರು (ಬೆಳಗಾವಿ ಜಿಲ್ಲೆ): ಮಾಜಿ ಸಚಿವ, ಕಾಂಗ್ರೆಸ್‌ನ ಹಿರಿಯ ನಾಯಕ ಡಿ.ಬಿ. ಇನಾಮದಾರ (75) ಬೆಂಗಳೂರಿನ ಮಣಿಪಾಲ ಆಸ್ಪತ್ರೆಯಲ್ಲಿ ಮಂಗಳವಾರ ಬೆಳಗಿನ ಜಾವ ನಿಧನರಾದರು.

ಅವರಿಗೆ ಪತ್ನಿ, ಪುತ್ರಿ, ಇಬ್ಬರು ಪುತ್ರರು ಇದ್ದಾರೆ. ನಾಲ್ಕೂವರೆ ದಶಕ ರಾಜಕೀಯ ರಂಗದಲ್ಲಿದ್ದ ಅವರು ಐದು ಬಾರಿ ಶಾಸಕರಾಗಿದ್ದರು. ಸಕ್ಕರೆ ಕಾರ್ಖಾನೆ ಅಧ್ಯಕ್ಷರಾಗುವ ಮೂಲಕ ರಾಜಕೀಯಕ್ಕೆ ಕಾಲಿಟ್ಟವರು. ನಿರಂತರ ಗೆಲುವಿನ ಮೂಲಕ ವಿಧಾನಸೌಧ ಪ್ರವೇಶಿಸಿ ವಿವಿಧ ಇಲಾಖೆಗಳ ಸಚಿವರಾಗಿ ಕೆಲಸ ಮಾಡಿದ್ದಾರೆ.

ಅವರ ಪಾರ್ಥಿವ ಶರೀರವನ್ನು ಮಂಗಳವಾರ ರಾತ್ರಿ ಬೆಂಗಳೂರಿನಿಂದ ಊರಿನತ್ತ ಒಯ್ಯಲಾಗುವುದು. ಬುಧವಾರ (ಏ. 26) ಮಧ್ಯಾಹ್ನ 12ರ ಸುಮಾರಿಗೆ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ಅವರ ಕುಟುಂಬದ ಮೂಲಗಳು ತಿಳಿಸಿವೆ.

ಇದಕ್ಕೂ ಮುನ್ನ, ಇನಾಮದಾರ ಅವರು ಹುಟ್ಟಿ ಬೆಳೆದ ಊರಾದ ನೇಗಿನಹಾಳದ ಪ್ರೌಢಶಾಲೆ ಮೈದಾನದಲ್ಲಿ ಸಾರ್ವಜನಿಕ ದರ್ಶನಕ್ಕೆ ಇಡಲಾಗುವುದು. ನಂತರ ಅವರ ತಾಯಿ ಸಮಾಧಿಗಳ ಪಕ್ಕದಲ್ಲೇ, ಅವರ ಸ್ವಂತ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಿಸಲಾಗುವುದು ಎಂದು ತಿಳಿಸಲಾಗಿದೆ.




ಬೆಳಗಾವಿ: ಜಿಲ್ಲೆಯ ಕಾಗವಾಡ ವಿಧಾನಸಭೆ ಕ್ಷೇತ್ರದ ಹೂಗಾರ ಪಟ್ಟಣದಲ್ಲಿ ಆಯೋಜಿಸಿದ್ದ ಚುನಾವಣಾ ಪ್ರಚಾರ ಸಭೆಯಲ್ಲಿ ಸಿದ್ದರಾಮಯ್ಯ ಅವರು ಭಾಗವಹಿಸಿ ಪಕ್ಷದ ಅಭ್ಯರ್ಥಿ ರಾಜು ಕಾಗೆ ಅವರ ಪರ ಮತ ಯಾಚಿಸಿದರು. ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ್ ಜಾರಕಿಹೊಳಿ, ಮಾಜಿ ಉಪ ಮುಖ್ಯಮಂತ್ರಿ ಲಕ್ಷ್ಮಣ ಸವದಿ, ಶಾಸಕರಾದ ಲಕ್ಷ್ಮಿ ಹೆಬ್ಬಾಳಕರ, ಪ್ರಕಾಶ್ ರಾಥೋಡ್, ಜಿಲ್ಲಾಧ್ಯಕ್ಷ ಲಕ್ಷ್ಮಣರಾವ್ ಚಿಂಗಳೆ ಹಾಜರಿದ್ದರು.

# ಕಾಂಗ್ರೆಸ್ ಪಕ್ಷಕ್ಕೆ ದ್ರೋಹ ಬಗೆದ ಅಂಕಲಗಿ, ಪಾಟೀಲ



ಹುಕ್ಕೇರಿ: ಕಾಂಗ್ರೆಸ್ ಪಕ್ಷಕ್ಕೆ ದ್ರೋಹ ಬಗೆದು ಬೇರೆ ಪಕ್ಷಕ್ಕೆ ಹೋಗಿರುವ ಮಾಜಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅಶೋಕ ಅಂಕಲಗಿ, ಬಸವರಾಜ ಪಾಟೀಲ ಅವರು ಮುಖಂಡರ ಬಗ್ಗೆ ಮಾತನಾಡುವ ಯಾವುದೇ ನೈತಿಕ ಹಕ್ಕು ಇಲ್ಲ ಎಂದು ಸಂಕೇಶ್ವರ ಮತ್ತು ಹುಕ್ಕೇರಿ ಕಾಂಗ್ರೆಸ್ ಬ್ಲಾಕ್ ಅಧ್ಯಕ್ಷರಾದ ವಿಜಯ ರವದಿ, ಸಂತೋಷ ಮುಡಸಿ ಹೇಳಿದರು.

ಪಟ್ಟಣದಲ್ಲಿ ಸೋಮವಾರ ಜಂಟಿ ಸುದ್ದಿಗೋಷ್ಠಿ ನಡೆಸಿದ ಅವರು, ರಾಜಕಾರಣವನ್ನು ಉದ್ಯೋಗವನ್ನಾಗಿ ಮಾಡಿಕೊಂಡಿದ್ದ ಅಂಕಲಗಿ, ಪಾಟೀಲ ಪಕ್ಷದಲ್ಲಿದ್ದುಕೊಂಡೇ ಮಾಜಿ ಸಚಿವ ಎ.ಬಿ.ಪಾಟೀಲ ಮತ್ತು ಮುಖಂಡರ ಬೆನ್ನಿಗೆ ಚೂರಿ ಹಾಕುವ ಕೆಲಸ ಮಾಡಿದ್ದಾರೆ ಎಂದು ಆಪಾದಿಸಿದರು.

ಈ ಮೊದಲು ಜೆಡಿಎಸ್ ಹಾಗೂ ಕಾಂಗ್ರೆಸ್ ಪಕ್ಷದಲ್ಲಿ ಅಂಕಲಗಿ ಚಮಚಾಗಿರಿ ಮಾಡಿಕೊಂಡಿದ್ದರು. ವಿರೋಧಿ ಬಿಜೆಪಿ ಮತ್ತು ಕತ್ತಿ ಸಹೋದರರೊಂದಿಗೆ ಹೊಂದಾಣಿಕೆ ಮಾಡಿಕೊಂಡಿದ್ದರು. ಕಳೆದ 2018ರ ಎಂಎಲ್ಎ ಚುನಾವಣೆಯಲ್ಲಿ ಹಣ ಪಡೆದು ಹೊಂದಾಣಿಕೆ ಮಾಡಿಕೊಂಡಿದ್ದರಿಂದ ಘೋಡಗೇರಿ ಜಿಪಂ ವ್ಯಾಪ್ತಿಯಲ್ಲಿ ಕಾಂಗ್ರೆಸ್ ಹಿನ್ನಡೆಗೆ ಕಾರಣವಾಯಿತು ಎಂದು ಅವರು ದೂರಿದರು.

ಹುಕ್ಕೇರಿ ಪುರಸಭೆಯಲ್ಲಿ ಕಾಂಗ್ರೆಸ್‌ಗೆ ಸ್ಪಷ್ಟ ಬಹುಮತವಿದ್ದರೂ ಅಂಕಲಗಿ ಅವರ ಒಳಒಪ್ಪಂದ ರಾಜಕಾರಣದಿಂದ ಅಧಿಕಾರ ಕೈ ತಪ್ಪಿತು.

ತಮ್ಮ ಸ್ವಗ್ರಾಮ ಅವರಗೋಳದಲ್ಲಿ ದಲಿತರ ಜಮೀನು ಕಬಳಿಸಿ ಮೋಸ ಮಾಡಿದ್ದಾರೆ.

ಇಂಥವರು ರಾಜಕಾರಣದಲ್ಲಿ ಇರುವುದು ಅಸಹ್ಯ ಹುಟ್ಟಿಸಿದ್ದು ಅವರಿಗೆ ನಾಚಿಕೆ ಬರಬೇಕು ಎಂದು ರವದಿ, ಮುಡಸಿ ಹರಿಹಾಯ್ದರು.

ಕಾಂಗ್ರೆಸ್‌ನಿಂದ ಪಕ್ಷಾಂತರಗೊಂಡು ಜೆಡಿಎಸ್ ಅಭ್ಯರ್ಥಿಯಾಗಿರುವ ಬಸವರಾಜ ಪಾಟೀಲರಿಗೆ ವಯಸ್ಸಾಗಿದ್ದು ಅರಿವಿನ ಕೊರತೆಯಿದೆ. ಅವರ ನಾಲಿಗೆ ಮತ್ತು ಮೆದುಳಿಗೆ ಸಂಪರ್ಕ ಕಡಿತಗೊಂಡು ಕಾಂಗ್ರೆಸ್ ನಾಯಕರ ಬಗ್ಗೆ ಇಲ್ಲ ಸಲ್ಲದ ಆರೋಪ ಮಾಡುತ್ತಿದ್ದಾರೆ ಎಂದು ವಿಜಯ ರವದಿ ಲೇವಡಿ ಮಾಡಿದರು.

ಹುಕ್ಕೇರಿ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆದ ಕಾಮಗಾರಿಗಳಲ್ಲಿ ಕತ್ತಿ ಸಹೋದರರು ಕೋಟ್ಯಂತರ ರೂ.ಗಳ ಭ್ರಷ್ಟಾಚಾರ ಎಸಗಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತಿದ್ದಂತೆ ಈ ಎಲ್ಲ ಅವ್ಯವಹಾರಗಳನ್ನು ತನಿಖೆ ನಡೆಸಲಾಗುವುದು. ಜತೆಗೆ ಭ್ರಷ್ಟಾಚಾರ ಕುರಿತಾದ ದಾಖಲೆಗಳನ್ನು ಸಂಗ್ರಹಿಸಲಾಗುತ್ತಿದ್ದು ಲೋಕಾಯುಕ್ತಕ್ಕೂ ದೂರು ನೀಡಲಾಗುವುದು ಎಂದು ರವದಿ ಹೇಳಿದರು.

ಮುಖಂಡರಾದ ಜಯಪ್ರಕಾಶ ಕರಜಗಿ, ಜಿತೇಂದ್ರ ಮರಡಿ, ಸುಭಾಷ ನಾಯಿಕ, ಅವಿನಾಶ ನಲವಡೆ, ಮಹೇಶ ಹಟ್ಟಿಹೊಳಿ, ಶಾನೂರ್ ತಹಶೀಲ್ದಾರ, ಮಹಾಂತೇಶ ಗುಮಚಿ, ಪ್ರಶಾಂತ ಕೋಳಿ, ವಿನೋದ ನಾಯಿಕ, ಬಿ.ಎಸ್.ಪಾಟೀಲ ಮತ್ತಿತರರು ಉಪಸ್ಥಿತರಿದ್ದರು.

# ಮರಾಠಿ ಮತದಾರರ ಮನಗೆದ್ದ ಡಾ.ರವಿ ಪಾಟೀಲ್



ಬೆಳಗಾವಿ: ಜಿಲ್ಲೆಯಲ್ಲಿ ಚುನಾವಣೆಯ ಕಾವು ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ವಾತಾವರಣ ಎಲ್ಲೆಡೆ ಕಂಡುಬರುತ್ತಿದ್ದು, ರಾಷ್ಟ್ರೀಯ ಪಕ್ಷಗಳು, ಪ್ರಾದೇಶಿಕ ಪಕ್ಷಗಳು ತಮ್ಮ ತಮ್ಮ ಅಭ್ಯರ್ಥಿಗಳ ಗೆಲುವಿಗಾಗಿ ನಾನಾ ರೀತಿಯ ಪ್ರಯತ್ನ ಮಾಡುತ್ತಿವೆ.

ಅದೇ ರೀತಿ ಅಭ್ಯರ್ಥಿಗಳು ಕೂಡಾ ಮತದಾರರನ್ನು ಸೆಳೆಯಲು ವಿವಿಧ ರೀತಿಯಲ್ಲಿ ತಮ್ಮ ಪ್ರಯತ್ನ ಮಾಡುತ್ತಿದ್ದಾರೆ.

ಬೆಳಗಾವಿಯ ಉತ್ತರ ಮತಕ್ಷೇತ್ರದಲ್ಲಿ ಮರಾಠಿ ಭಾಷಿಕ ಹಾಗೂ ಮರಾಠಿ ಜನರು ಹೆಚ್ಚಿನ ಪ್ರಮಾಣದಲ್ಲಿ ಇದ್ದು, ಬಿಜೆಪಿ ಅಭ್ಯರ್ಥಿಯಾದ ಡಾ ರವಿ ಪಾಟೀಲ್ ಅವರು ಮರಾಠಿ ಭಾಂದವರನ್ನು ಸೆಳೆಯುವಲ್ಲಿ ಯಶಸ್ವಿಯಾಗಿದ್ದಾರೆ ಎನ್ನಬಹುದು.

ಈ ವೇಳೆ ಮಾತನಾಡಿದ ಮರಾಠಿ ಮತದಾರ ಅಜಯಸಿಂಘ ರಜಪೂತ್ ಅವರು,ಬೆಳಗಾವಿ ಉತ್ತರ ಮಕ್ಷೇತ್ರಕ್ಕೆ ರವಿ ಪಾಟೀಲರು ಅತ್ಯಂತ ಸೂಕ್ತ ಅಭ್ಯರ್ಥಿ, ಒಳ್ಳೆಯ ಸಮಾಜ ಸೇವಕ, ಮಾನವೀಯ ಮೌಲ್ಯವುಳ್ಳ ವ್ಯಕ್ತಿತ್ವ, ಸರಳತೆಯ ಗುಣ, ಎಲ್ಲರೊಂದಿಗೆ ಆತ್ಮೀಯತೆಯಿಂದ ವರ್ತಿಸುವ ಇಂತಾ ಒಳ್ಳೆ ವ್ಯಕ್ತಿಗೆ, ಯಾವುದೇ ಜಾತಿ, ಭಾಷೆ,. ಧರ್ಮ, ಬೇಧಭಾವ ಇಲ್ಲದೇ ಎಲ್ಲರೂ ಬೆಂಬಲ ನೀಡಿ ಗೆಲ್ಲಿಸುತ್ತೆವೆ ಎಂದಿದ್ದಾರೆ.

ಇನ್ನು ಬಿಜೆಪಿ ಪಕ್ಷದಿಂದ ಟಿಕೆಟ್ ಸಿಕ್ಕಿರುವಾಗ ಗೆಲುವು ನಿಶ್ಚಿತ ಎಂದರು, ನಾವೆಲ್ಲರೂ ಮೊದಲಿನಿಂದ ಬಿಜೆಪಿ ಹಾಗೂ ಪ್ರಧಾನಿ ಮೋದಿಯವರ ಪರ ಇದ್ದವರು.

ಈಗ ಇಂತಾ ಪಕ್ಷಕ್ಕೆ ರವಿ ಪಾಟೀಲ್ ಅಂತಹ ಸಹೃದಯದ ಅಭ್ಯರ್ಥಿ ಸ್ಪರ್ಧಿಸುತ್ತಿರುವಾಗ, ನಮ್ಮ ನಾಯಕರು ಬಿಜೆಪಿಯ ಮಾಜಿ ಶಾಸಕರಾದ ಅನಿಲ್ ಬೆನಕೆ ಅವರ ಮುಂದಾಳತ್ವದಲ್ಲಿ ಮರಾಠಿ ಸಮುದಾಯದ ನಾವೆಲ್ಲರೂ ಒಂದಾಗಿ ಡಾ ರವಿ ಪಾಟೀಲ ಅವರ ಗೆಲುವಿಗಾಗಿ ಕೆಲಸಮಾಡುತ್ತಿದ್ದೇವೆ ಎಂದರು.

# ದಾಖಲೆಗಳಿಲ್ಲದೆ ಸಾಗಿಸುತ್ತಿದ್ದ 70 ಲಕ್ಷ ವಶಕ್ಕೆ



ಬೆಳಗಾವಿ: ಕಾಗವಾಡ–ಮಿರಜ್ ರಸ್ತೆ ಚೆಕ್ ಪೋಸ್ಟ್ ನಲ್ಲಿ ದಾಖಲೆಗಳಿಲ್ಲದೆ ಸಾಗಿಸುತ್ತಿದ್ದ 70 ಲಕ್ಷ ರೂ.ಗಳನ್ನು ವಶಪಡಿಸಿಕೊಳ್ಳಲಾಗಿದೆ.

ಕರ್ನಾಟಕ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ವಿಶೇಷವಾಗಿ ಅಂತಾರಾಜ್ಯ ಗಡಿಯಲ್ಲಿ ಚೆಕ್ಪೋಸ್ಟ್‌ಗಳನ್ನು ಸ್ಥಾಪಿಸಲಾಗಿದೆ.

ಮತದಾರರಿಗೆ ಹಂಚುವ ಅಕ್ರಮ ಹಣ, ಮದ್ಯ, ಸಾಮಗ್ರಿಗಳ ಸಾಗಾಟದ ಮೇಲೆ ತೀವ್ರ ನಿಗಾ ವಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. ಅದೇ ರೀತಿ ಎಸ್‌ಎಲ್ಬಿಸಿ ನಿಯಮಾವಳಿಗಳನ್ನು ಪಾಲಿಸದೆ ಸಾಗಿಸುತ್ತಿದ್ದ 70 ಲಕ್ಷ ರೂಪಾಯಿ ಹಣವನ್ನು ಚುನಾವಣಾಧಿಕಾರಿಗಳು ಕಾಗವಾಡ ಚೆಕ್ಪೋಸ್ಟ್‌ನಲ್ಲಿ ವಶಪಡಿಸಿಕೊಂಡಿದ್ದಾರೆ.

## ಮಾಜಿ ಸಚಿವ ಡಿ.ಬಿ.ಇನಾಮದಾರ ನಿಧನಕ್ಕೆ ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಸಂತಾಪ



ಬೆಳಗಾವಿ: ಜಿಲ್ಲೆಯ ಕಿತ್ತೂರು ಮತಕ್ಷೇತ್ರದ ಕಾಂಗ್ರೆಸ್ ಮಾಜಿ ಸಚಿವರು ಹಾಗೂ ಹಿರಿಯರಾದ ಡಿ.ಬಿ.ಇನಾಮದಾರ ಅವರ ಅಗಲಿಕೆ ಕೇವಲ ನಮಗಷ್ಟೇ ಅಲ್ಲ. ನಮ್ಮ ರಾಜ್ಯದ ಜನತೆಗೆ ದುಃಖ ತಂದಿದೆ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಸಂತಾಪ ಸೂಚಿಸಿದ್ದಾರೆ.

ಪ್ರಕಟಣೆಯಲ್ಲಿ ವಿಷಯ ತಿಳಿಸಿದ ಅವರು, ಮಾಜಿ ಸಚಿವ ಡಿ.ಬಿ.ಇನಾಮದಾರ ಅವರ ನಿಧನ ಸುದ್ದಿ ಕೇಳಿ ತೀವ್ರ ನೋವುಂಟಾಗಿದೆ. ಇವರು ಸರ್ವ ಧರ್ಮ ಹಾಗೂ ಜನಪರ ವ್ಯಕ್ತಿತ್ವವುಳ್ಳ ರಾಜಕಾರಣಿ ಎಂದೇ ಖ್ಯಾತಿ ಹೊಂದಿದ್ದರು.

ಇವರ ಅಕಾಲಿಕ ನಿಧನದಿಂದ ಕಾಂಗ್ರೆಸ್ ಪಕ್ಷಕ್ಕೆ ಭರಿಸಲಾಗದ ನಷ್ಟವನ್ನುಂಟು ಮಾಡಿದೆ. ಇನಾಮದಾರ್ ಅವರ ಕುಟುಂಬ ವರ್ಗ ಹಾಗೂ ಅಭಿಮಾನಿಗಳಿಗೆ ದುಃಖ ಸಹಿಸಿಕೊಳ್ಳುವ ಶಕ್ತಿ ದೊರೆಯಲಿ ಎಂದು ಕೆಪಿಸಿಸಿ ಕಾರ್ಯಾಧ್ಯಕ್ಷ ಸತೀಶ ಜಾರಕಿಹೊಳಿ ಅವರು ಡಿ.ಬಿ.ಇನಾಮದಾರ ಅವರ ನಿಧನದ ಕುರಿತು ಸಂತಾಪ ಸೂಚಿಸಿದ್ದಾರೆ.

# ತಿಗಡೊಳ್ಳಿ ಗ್ರಾಪಂ ಅಧ್ಯಕ್ಷೆ ಪತಿ ಕೊಲೆ: 16 ಮಂದಿಗೆ ಜೀವಾವಧಿ ಶಿಕ್ಷೆ



ಬೆಳಗಾವಿ: ಜಿಲ್ಲೆಯ ತಾಲ್ಲೂಕಿನ ತಿಗಡೊಳ್ಳಿ ಗ್ರಾಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹಾಗೂ ಅವರ ಪತಿಯನ್ನು ಕೊಲೆ ಮಾಡಿದ 16 ಅಪರಾಧಿಗಳಿಗೆ ಇಲ್ಲಿನ 10ನೇ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವು ಜೀವಾವಧಿ ಶಿಕ್ಷೆ ಹಾಗೂ ತಲಾ 50ಸಾವಿರ ದಂಡ ವಿಧಿಸಿ ತೀರ್ಪು ನೀಡಿದೆ.

ತಿಗಡೊಳ್ಳಿ ಗ್ರಾಮದ ನಿವಾಸಿಗಳಾದ ರುಜು ಕ್ಯಾತನವರ, ಬಸಪ್ಪ ಶಿರಗಾಪುರ, ದುಂಡಪ್ಪ ಪಾರೀಶವಾಡ, ಬಾಳು ಮುಚ್ಚಂಡಿ, ಶಿವಲಿಂಗಯ್ಯ ಬಾನಿಮಠ, ಅಜಿತ ಕ್ಯಾತನವರ, ಶಿವಾಜಿ ಸಂಭೋಜಿ, ತವನಪ್ಪ ಕಲಗೌಡರ, ಕಲ್ಲಪ್ಪ ಜಾಯಕ್ಕನವರ, ಸಾವಂತ ಕಿರಬನವರ, ಅನೀಲ ಬಸಪ್ಪ ಉಪರಿ, ದೀಪಕ ಹೊಸೂರಕರ, ಸಂತೋಷ ಮಡಿವಾಳರ, ಬಾಬು ಮಂಡೇದ, ಸಾತೂ ಶಿರಗಾಪುರ ಶಿಕ್ಷೆಗೆ ಒಳಗಾದವರು.

ಈ ಪ್ರಕರಣ ನ್ಯಾಯಾಲಯದಲ್ಲಿ 12 ವರ್ಷಗಳ ಸುದೀರ್ಘ ವಿಚಾರಣೆ ನಡೆಯಿತು.

ಈ ಅವಧಿಯಲ್ಲಿ ಇನ್ನುಳಿದ ಆರೋಪಿಗಳಾದ ಬಾಳಪ್ಪ ಗೋದಳ್ಳಿ, ಬಸಪ್ಪ ಮುಗಳಿ ಹಾಗೂ ಪಾರೀಷ ರೆಂಟಿ ಅವರು ಸಾವಿಗೀಡಾಗಿದ್ದಾರೆ. ಕಿರಣ ಅಲಿಯಾಸ್ ವಿನಾಯಕ ಪರೀಟ ತಲೆಮರೆಸಿಕೊಂಡಿದ್ದಾನೆ.

ಘಟನೆ ಹಿನ್ನೆಲೆ: ಗ್ರಾಮ ಪಂಚಾಯಿತಿ ಕಾಮಗಾರಿಗಳನ್ನು ಬೇರೊಬ್ಬರಿಂದ ಮಾಡಿಸುತ್ತಿದ್ದಾರೆ ಎಂದು ಆರೋಪಿಸಿ, ತಿಗಡೊಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪಾರ್ವತಿ ಆರೇರ ಹಾಗೂ ಅವರ ಪತಿ ರಾಮಚಂದ್ರ ಅಪ್ಪಯ್ಯ ಆರೇರ ಅವರನ್ನು 2011ರಲ್ಲಿ ಕೊಲೆ ಮಾಡಲಾಗಿತ್ತು.

20 ಜನರಿದ್ದ ತಂಡ ಮಾರಕಾಸ್ತ್ರಗಳಿಂದ ಹಲ್ಲೆ ಮಾಡಿ, ಈ ಕೃತ್ಯ ಎಸಗಿದ ಬಗ್ಗೆ ನಂದಗಢ ಪೊಲೀಸರು ಪ್ರಕರಣ ದಾಖಲಿಸಿದ್ದರು.

ಪ್ರಕರಣದ ತನಿಖೆ ನಡೆಸಿದ ಅಂದಿನ ಸಿಪಿಐ ಸುನೀಲ ಸವದಿ ದೋಷಾರೋಪ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ಕುರಿತು ಏ.15ರಂದು ವಿಚಾರಣೆ ನಡೆಸಿದ ನ್ಯಾಯಾದೀಶರಾದ ಇ.ಎಸ್. ಈರಣ್ಣ ಅವರು, 32 ಸಾಕ್ಷಿ, 84 ದಾಖಲೆ ಹಾಗೂ 28 ಮುದ್ದೆಮಾಲುಗಳನ್ನು ಪರಿಶೀಲಿಸಿದರು. 20 ಆರೋಪಿಗಳ ಪೈಕಿ 16 ಜನರನ್ನು ಐಪಿಸಿ ಕಲಂ 143, 147 148 120(ಬಿ) 311 302 ಸಹ ಕಲಂ 149ರಡಿ ಅಪರಾಧಿಗಳೆಂದು ಪರಿಗಣಿಸಿ ಶಿಕ್ಷೆ ಪ್ರಮಾಣ ಘೋಷಣೆ ಕಾಯ್ದಿರಿಸಿದ್ದರು. ಸೋಮವಾರ ಶಿಕ್ಷೆ ಕೂಡ ಪ್ರಕಟಿಸಿದರು.

ಜೀವಾವಧಿ ಶಿಕ್ಷೆಗೆ ಒಳಗಾದವರಿಂದ ಸಂಗ್ರಹಿಸುವ ಒಟ್ಟು 8 ಲಕ್ಷ ದಂಡದ ಹಣವನ್ನು ಕೊಲೆಯಾದ ದಂಪತಿಯ ಮಕ್ಕಳಾದ ವಿಜಯ ಹಾಗೂ ಆಶಾರಾಣಿ ಅವರಿಗೆ ಸಂದಾಯ ಮಾಡುವಂತೆ ಆದೇಶದಲ್ಲಿ ತಿಳಿಸಿದ್ದಾರೆ. ಸರ್ಕಾರದ ಪರವಾಗಿ ಸರ್ಕಾರಿ ಅಭಿಯೋಜಕ ಆರ್.ಎ.ಬಾರಾವಲಿ ಅವರು ವಾದ ಮಂಡಿಸಿದ್ದರು.

# 65 ಲಕ್ಷ ಹಣ ವಶ



ಬೆಳಗಾವಿ : ಯಾವದೇ ದಾಖಲೆ ಇಲ್ಲದೆ ಸಾರಿಗೆ ಸಂಸ್ಥೆಯ ಬಸನಲ್ಲಿ ಅಕ್ರಮ ವಾಗಿ ಸಾಗಿಸುತ್ತಿದ್ದ 65 ಲಕ್ಷ ಹಣವನ್ನು ಚುನಾವಣಾ ಅಧಿಕಾರಿಗಳು ವಶಕ್ಕೆ ಪಡೆದಿರುವ ಘಟನೆ ಜಿಲ್ಲೆಯ ಗೋಕಾಕ ಬಳಿಯ ಪಾರನಟ್ಟಿ ಚೆಕ್ ಪೋಸ್ಟ್ ನಲ್ಲಿ ನಡೆದಿದೆ.

ಗೋಕಾಕ ಬಳಿಯ ಪಾರನಟ್ಟಿ ಚೆಕ್‌ಪೋಸ್ಟ್ ಬಳಿ ಸಾರಿಗೆ ಬಸ್ ಪ್ರಯಾಣಿಕರೊಬ್ಬರಿಂದ 65 ಲಕ್ಷ ವಶಕ್ಕೆ ಪಡೆಯಲಾಗಿದೆ. ಇವರು ಈ ಹಣವನ್ನು ಸಾರಿಗೆ ಬಸನಲ್ಲಿ ಸಾಗಿಸುತ್ತಿದ್ದಾಗ ಗೋಕಾಕ ಎಸಿ ಅವರ ನೇತೃತ್ವದಲ್ಲಿ ಚುನಾವಣಾ ಅಧಿಕಾರಿಗಳು ಈ ಹಣವನ್ನು ವಶಪಡಿಸಿಕೊಂಡಿದ್ದಾರೆ.

# ಡಾ. ರಾಜಕುಮಾರ್ ಸರಳತೆ ಎಲ್ಲರಿಗೂ ಆದರ್ಶ: ಗುರುನಾಥ ಕಡಬೂರ




ಬೆಳಗಾವಿ: ಕನ್ನಡ ಚಲನಚಿತ್ರಗಳಲ್ಲಿ ಉತ್ತಮ ಹಾಗೂ ವಿಭಿನ್ನ ಪಾತ್ರಗಳ ಮೂಲಕ ಇಡೀ ಭಾರತಕ್ಕೆ ಕೀರ್ತಿ ತಂದುಕೊಟ್ಟ ಹಿರಿಮೆ ಕರ್ನಾಟಕ ರತ್ನ, ಕನ್ನಡದ ಕಣ್ಮಣಿ ಡಾ. ರಾಜಕುಮಾರ ಅವರಿಗೆ ಸಲ್ಲುತ್ತದೆ. ಅವರ ಸರಳತೆಯ ವ್ಯಕ್ತಿತ್ವ ಎಲ್ಲರಿಗೂ ಆದರ್ಶಪ್ರಾಯ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪ ನಿರ್ದೇಶಕರಾದ ಗುರುನಾಥ ಕಡಬೂರ ಅವರು ಹೇಳಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ನಗರದ ವಾರ್ತಾ ಭವನದಲ್ಲಿ ನಡೆದ ಡಾ. ರಾಜಕುಮಾರ ಜನ್ಮ ದಿನಾಚರಣೆ ನಿಮಿತ್ಯ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು.

ಡಾ. ರಾಜಕುಮಾರ ಅವರ ತಂದೆ ಮೂಲತಃ ರಂಗಭೂಮಿ ಕಲಾವಿದರಾಗಿದ್ದು, ತಂದೆಯಿಂದ ಪ್ರೇರಿತರಾದ ಅವರು ಅನೇಕ ನಾಟಕಗಳಲ್ಲಿ ನಟಿಸಿ ನಂತರ ಬೇಡರ ಕಣ್ಣಪ್ಪ ಚಲನಚಿತ್ರದ ಮೂಲಕ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದರು. ರಾಜಕುಮಾರ್ ಅವರು ವಿಭಿನ್ನ ಪಾತ್ರಗಳ ಮೂಲಕ ಅನೇಕ ಪಾತ್ರಗಳನ್ನು ನಿಭಾಯಿಸಿದ್ದಾರೆ ಎಂದು ಗುಂಜಿ ಗ್ರಾಮದ ಕನ್ನಡ ಪ್ರೌಢಶಾಲಾ ಶಿಕ್ಷಕರಾದ ಅರ್ಜುನ್ ಕಾಮಣ್ಣವರ ಅವರು ತಿಳಿಸಿದರು.


ರಾಜಕುಮಾರ ಮಾಡಿದಂತಹ ಅನೇಕ ಪಾತ್ರಗಳಿಗೆ ಮೆಚ್ಚಿ, ಅಭಿಮಾನಿ ಬಳಗ ವರನಟ ಎಂದು ಅವರನ್ನು ಕರೆಯುತ್ತಾರೆ. ಎಷ್ಟೇ ತಲೆಮಾರು ಉರುಳಿದರೂ ಕನ್ನಡ ಚಿತ್ರ ರಂಗದಲ್ಲಿ ಅವರು ತಮ್ಮದೇ ಅದ–'ಂತಹ ಛಾಪು ಮೂಡಿಸಿದ್ದಾರೆ.

ಕೇವಲ ನಟರಾಗಿ ಮಾತ್ರವಲ್ಲದೆ ಅನೇಕ ಚಿತ್ರಗಳಿಗೆ ಧ್ವನಿ ನೀಡುವುದರ ಮೂಲಕ ಜನಪ್ರಿಯ ಹಾಡುಗಾರರಾಗಿಯೂ ಗುರುತಿಸಿಕೊಂಡಿದ್ದಾರೆ. ಡಾ. ರಾಜಕುಮಾರ ಅವರು ನಟನೆ ಹಾಗೂ ಗಾಯನದ ಮೂಲಕ ಕನ್ನಡ ಜನರ ಮನದಲ್ಲಿ ಅಜರಾಮರವಾಗಿ ಉಳಿದಿರುವ ನಟ ಏಕೈಕ ನಟರಾಗಿದ್ದಾರೆ.

ಕನ್ನಡ ಭಾಷೆಯ ಸರಳ ಸಜ್ಜನಿಕೆಯ ನಟ ರಾಜಕುಮಾರ ಅವರು ತಮ್ಮ ಅಭಿನಯದಿಂದ ಜನಸಾಮಾನ್ಯರನ್ನು ಸೆಳೆದಿದ್ದರು. ಕೇವಲ ಚಿತ್ರರಂಗ ಮಾತ್ರವಲ್ಲದೇ ವಯಕ್ತಿಕ ಜೀವನದಲ್ಲಿ ಕೂಡ ಅವರು ಯಾವುದೇ ಕಳಂಕ ಇಲ್ಲದ ಶ್ರೇಷ್ಠ ನಟ ಎಂದು ಕಾಮಣ್ಣವರ ತಿಳಿಸಿದರು.

ವಾರ್ತಾ ಇಲಾಖೆಯ ಸಿಬ್ಬಂದಿಗಳಾದ, ಅನಂತ್ ಪಪ್ಪು, ಎಂ.ಎಲ್ ಜಮಾದಾರ, ಮತ್ತು ಸಿಟಿಇ ಉಪನ್ಯಾಸಕರಾದ ಶ್ರೀಮತಿ ಝುಡ್.ಜಿ ಸಯ್ಯದ್, ಗಜಾನನ ಹಳೆಮನಿ, ಸತೀಶ್ ಘೋರ್ಪಡೆ, ಸಣ್ಣಉಳಿತಾಯ ಇಲಾಖೆಯ ಸಹಾಯಕ ನಿರ್ದೇಶಕ ವಿ.ಎಂ ಕಂಗ್ರಾಳಕರ್, ಶಿಕ್ಷಕರಾದ ಜ್ಞಾನೇಶ್ವರ ಮೀರಾಶಿ, ಅರುಣ ನೇಸರಗಿ, ಪರುಶರಾಮ ಮೂಕನವರ, ಪ್ರಮೋದ ಗಡಕರ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

# ವಿಶ್ವ ಮಲೇರಿಯಾ ದಿನಾಚರಣೆ



ಬೆಳಗಾವಿ: ಮಲೇರಿಯಾ ಈಗ ನಮ್ಮ ದೇಶದಲ್ಲಿ ಹಾಗೂ ಕರ್ನಾಟಕದಲ್ಲಿ ಹತೋಟಿಯಲ್ಲಿದ್ದು, ಇದನ್ನು ನಮ್ಮ ದೇಶದಿಂದ 2030ರ ಒಳಗೆ ಹಾಗೂ ಕರ್ನಾಟಕದಿಂದ 2025ರ ಒಳಗೆ ನೀರ್ಮೂಲನೆ ಮಾಡಬೇಕಾಗಿದೆ ಎಂದು ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು ಮಾತನಾಡುತ್ತಿದ್ದರು.

ಅವರು ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯಚರಕಾ ಸಭಾಂಗಣದಲ್ಲಿ ಪ್ರತಿ ವರ್ಷದ ಏಪ್ರಿಲ 25ರಂದು ನಡೆಯುವ ವಿಶ್ವ ಮಲೇರಿಯಾ ದಿನಾಚರಣೆಯ ಅಂಗವಾಗಿ ಮಾತನಾಡುತ್ತಿದ್ದರು. ಮಲೇರಿಯಾ ಒಂದು ಮಾರಣಾಂತಿಕ ಖಾಯಿಲೆಯಾಗಿದ್ದು ನಾವರಿಯದಂತೆಯೇ ನಮ್ಮನ್ನು ಬಂದು ಸೇರುವಂತಹುದಾಗಿದೆ. ಅದರಲ್ಲಿಯೂ ಸೊಳ್ಳೆಗಳಲ್ಲಿ ಒಂದು ಪ್ರಕಾರವಾದ ಅನಾಫೆಲಿಸ ಎಂಬ ಹೆಣ್ಣು ಸೊಳ್ಳೆ ಕಚ್ಚುವದರಿಂದ ಬರುತ್ತದೆ.

ಈ ಸೊಳ್ಳೆಗಳು ದೀರ್ಘಕಾಲದ ವರೆಗೆ ನಿಂತ ನೀರಿನಲ್ಲಿ ಹುಟ್ಟಿಕೊಳ್ಳುವ ಸೊಳ್ಳೆಯ ಜಾತಿಯದ್ದಾಗಿದೆ. ಈ ರೋಗದ ಪ್ರಾಥಮಿಕ ಲಕ್ಷಣಗಳಾದ ಚಳಿ ಜ್ವರ, ಬೆವರುವದು , ಹೀಗೆ ಮುಂತಾದ ಲಕ್ಷಣಗಳನ್ನು ಒಳಗೊಂಡಂತಹ ವ್ಯಕ್ತಿಗಳು ತಕ್ಷಣವೇ ವೈದ್ಯರನ್ನು ಕಂಡು ತಕ್ಕ ಉಪಚಾರವನ್ನು ಹೊಂದುವದು ಅತ್ಯಗತ್ಯವಾಗಿದೆ ಮತ್ತು ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಹಾಗೂ ಮನೆಯ ಒಳಗೆ ಯಾವದೇ ಕಾರಣಕ್ಕೂ ನೀರನ್ನು ದೀರ್ಘಕಾಲದ ವರೆಗೆತೆರೆದ ಪಾತ್ರೆಗಳಲ್ಲಿ ಸಂಗ್ರಹಿಸಿಡಬಾರದು ಎಂದು ತಿಳುವಳಿಕೆ ನೀಡಿದರು.

ಈ ಸಂದರ್ಭದಲ್ಲಿ ಜನರಲ್ ಮೆಡಿಸಿನ್ ವಿಭಾಗದ ಮುಖ್ಯಸ್ಥರಾದ ಡಾ.ಶ್ರೀನಿವಾಸ ಬಿ ಅವರು ವಯಸ್ಕರಲ್ಲಿ ಮಲೇರಿಯಾ, ಅದರ ನಿರ್ವಹಣೆ ಹಾಗೂ ಅದನ್ನು ತಡೆಗಟ್ಟುವ ಬಗ್ಗೆ ಉಪನ್ಯಾಸ ನೀಡಿದರು. ಹೆಸರಾಂತ ಮಕ್ಕಳ ತಜ್ಞಡಾ. ಸಂತೋಷ ಕುಮಾರ ಕರಮಸಿ ಅವರು ಮಲೇರಿಯಾದಂತಹ ಮಾರಕರೋಗದಿಂದ ಮಕ್ಕಳನ್ನು ಯಾವ ರೀತಿಯಾಗಿ ಕಾಪಾಡಿಕೊಳ್ಳಬೇಕು ಎಂದು ತಿಳುವಳಿಕೆ ನೀಡಿದರು.ಕಾರ್ಯಕ್ರಮವನ್ನು ಮಕ್ಕಳ ತಜ್ಞ ಡಾ.ಬಸವರಾಜ ಕುಡಸೋಮಣ್ಣವರ ಅವರು ನಿರೂಪಿಸಿ ವಂದಿಸಿದರು. ಕಾರ್ಯಕ್ರಮದಲ್ಲಿ ಕೆ ಎಲ್ ಇ ಸೆಂಟಿನರಿಇನ್ಸ್ಟಿಟ್ಯುಟ್‌ಆಫ್ ನರ್ಸಿಂಗ ಸೈನ್ಸ ನ ಬಿಎಸ್‌ಸಿ ನರ್ಸಿಂಗ ವಿದ್ಯಾರ್ಥಿಗಳು, ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ಆರೋಗ್ಯ ಸಹಾಯಕಿ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಬೈಲಹೊಂಗಲದಲ್ಲಿ ಬಿಜೆಪಿಗೆ ಸೇರ್ಪಡೆ



ಬೈಲಹೊಂಗಲ್ : ನಗರದ ಬಿಜೆಪಿ ಅಭ್ಯರ್ಥಿ ಜಗದೀಶ ಮೆಟಗುಡ್ಡ ಅವರ ಪಕ್ಷದ ಕಚೇರಿಯಲ್ಲಿ ಕ್ಷೇತ್ರದ ಹಲವಾರು ಪದಾಧಿಕಾರಿಗಳು ಹಾಗೂ ವಿವಿಧ ಸಂಘಟನೆಯ ಮುಖಂಡರು ಬಿಜೆಪಿ ಪಕ್ಷಕ್ಕೆ ಅಧಿಕೃತವಾಗಿ ಸೇರ್ಪಡೆಗೊಂಡರು.

ಕ್ಷೇತ್ರದ ಜೆಡಿಎಸ್ ಪಕ್ಷದ ಎಸ್ಟಿ ಘಟಕದ ಬ್ಲಾಕ್ ಅಧ್ಯಕ್ಷರಾದ ಆನಂದ ಪಟಾತ ಅವರು ಬಿಜೆಪಿ ಪಕ್ಷಕ್ಕೆ ಸೇರಿದ್ದು ಅವರೊಂದಿಗೆ ಹಲವಾರು ಜೆಡಿಎಸ್ ಕಾರ್ಯಕರ್ತರು ಬಿಜೆಪಿ ಪಕ್ಷಕ್ಕೆ ಜೈ ಎಂದಿದ್ದಾರೆ..

ಬಿಜೆಪಿ ಪಕ್ಷಕ್ಕೆ ಸೇರಿಕೊಂಡ ಆನಂದ ಪಟಾತ ಅವರು ತಾಲೂಕು ವಾಲ್ಮೀಕಿ ಘಟಕದ ಅಧ್ಯಕ್ಷರೂ ಆಗಿರುವುದು ವಿಶೇಷವಾಗಿದ್ದು, ಈ ಮೂಲಕ ಮುಂದಿನ ದಿನಗಳಲ್ಲಿ ಸಮುದಾಯದ ಬೆಂಬಲ ಬಿಜೆಪಿ ಪಕ್ಷಕ್ಕೆ ಇರುವದೆಂಬ ನಂಬಿಕೆಯಿದೆ.

ಅದೇ ರೀತಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷದಿಂದಲೂ ಹಲವಾರು ಕಾರ್ಯಕರ್ತರು ಬಿಜೆಪಿ ಪಕ್ಷಕ್ಕೆ ಸೇರುತ್ತಿರುವ ಸನ್ನಿವೇಶ ನೀಡಿದರೆ ಬಿಜೆಪಿ ಅತ್ಯಂತ ಬಹುಮತದಿಂದ ಈ ಸಲ ವಿಜಯಿಯಾಗಿ ಹೊರಹೊಮ್ಮುವುದು ಎನ್ನುವ ಅಭಿಪ್ರಾಯ ಕಾರ್ಯಕರ್ತರಲ್ಲಿದೆ.

ಈ ಮೂಲಕ ಬಿಜೆಪಿಗೆ ಮತ್ತಷ್ಟು ಶಕ್ತಿ ಬಂದು, ಈಗಾಗಲೇ ಕ್ಷೇತ್ರದಲ್ಲಿ ಪಕ್ಷದ ಪರವಾದ ವಾತಾವರಣ ಇದ್ದು, ಈ 2023 ಚುನಾವಣೆಯಲ್ಲಿ ನಿಶ್ಚಿತವಾಗಿ ಬಿಜೆಪಿಯ ಅಭ್ಯರ್ಥಿಯಾದ ಜಗದೀಶ ಮೆಟಗುಡ್ಡ ಅವರು ವಿಜಯಿಯಾಗುವರು ಎಂಬ ಅಭಿಪ್ರಾಯ ಮೂಡಿಬಂದಿದೆ.

# ಉದ್ಯೋಗ ಖಾತ್ರಿ ಕೂಲಿಕಾರರಿಗೆ ಮತದಾನ ಜಾಗೃತಿ




ಬೆಳಗಾವಿ: ಮನರೇಗಾ ಯೋಜನೆಯ ಜಲಾಮೃತ ಕಾರ್ಯಕ್ರಮದಡಿಯಲ್ಲಿ ನಡೆಯುತ್ತಿರುವ ಬದುನಿರ್ಮಾಣ ಕಾಮಗಾರಿ ಸ್ಥಳ ಮೇಕಲಮರ್ಡಿ ವ್ಯಾಪ್ತಿಯಲ್ಲಿ ಉದ್ಯೋಗ ಖಾತ್ರಿ ಕೂಲಿಕಾರರಿಗೆ ತಾಲೂಕಾ ಸ್ವೀಪ್ ಸಮೀತಿವತಿಯಿಂದ ಮೇ.10 2023 ರಂದು ನಡೆಯುವ ವಿಧಾನ ಸಭಾ ಸಾರ್ವತ್ರಿಕ ಚುನಾವಣೆಯ ಕುರಿತು ಪ್ರತಿಜ್ಞಾವಿಧಿ, ಘೋಷವಾಕ್ಯಗಳು ಹಾಗೂ ಕರಪತ್ರಗಳನ್ನು ಹಂಚುವ ಮೂಲಕ ಕೂಲಿಕಾರರಿಗೆ ಮತದಾನದ ಮೌಲ್ಯ ಮತ್ತು ಹಕ್ಕಿನ ಬಗ್ಗೆ ಸಹಾಯಕನಿರ್ದೇಶಕರಾದ (ಗ್ರಾ.ಉ) ವಿಜಯ ಪಾಟೀಲ ರವರು ಜಾಗೃತಿ ಮೂಡಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಜಲಾಮೃತ ಕಾರ್ಯಕ್ರಮದಡಿಯಲ್ಲಿ ಕೈಗೊಂಡಿರುವ ಬದುನಿರ್ಮಾಣವನ್ನು ವೀಕ್ಷಣೆ ಮಾಡಿದರು ಮತ್ತು ಪ್ರಸ್ತುತ ಕೂಲಿ ಮೊತ್ತ 316/– ಇರುತ್ತದೆ ಎಂದು ಕೂಲಿಕಾರರಿಗೆ ತಿಳಿಸಿದರು

ಕೃಷಿ ಇಲಾಖೆಯ ಅಧಿಕಾರಿಗಳು ಬಂದಕನ್ನವರ ಹಾಗೂ ಅಂಗಡಿಯವರು ಮತ್ತು ತಾಲೂಕಾ ನರೇಗಾ ಐಇಸಿ ಸಂಯೋಜಕ ಎಸ್ ವ್ಹಿ ಹಿರೇಮಠ ಹಾಜರಿದ್ದರು. ಗ್ರಾಪಂ ಸಿಬ್ಬಂದಿಗಳಾದ ಭೀಮರಾವ ಕಡಟ್ಟಿ ಮತ್ತು ನರೇಗಾ ಮೇಟಗಳಾದ ಫಕ್ಕಿರಪ್ಪ ಮಡ್ಡೆಪ್ಪ ಇತರರು ಮತ್ತು ಕೂಲಿಕಾರರು ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮತದಾನ ಜಾಗೃತಿ ಯಶಸ್ವಿಗೊಳಿಸಿದರು.

BELAGAVI VARADI KANNADA DAILY MORNING : Editor, Printer, Publisher & Owned By : **Satish Basavani Gudagenatti,** Basavani House No.53, Ashray Colony, Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089